ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು ಗ್ರಾಮಾಂತರ

KB 10 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು : ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 12 ಸಂಚಿಕೆ : 205

6–2–2025 ಗುರುವಾರ

₹3 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 12 ISSUE : 205

## ಮೈಕ್ರೋ ಫೈನಾನ್ಸ್ ಸಂಸ್ಥೆಗಳ ದಬ್ಬಾಳಿಕೆ ತಡೆಗೆ ಸರ್ಕಾರದ ಕ್ರಮ

### ಅನಗತ್ಯ ಕಿರುಕುಳ ತಪ್ಪಿಸಲು ನಿಯಮಗಳ ಪಾಲನೆಗೆ ಡಾ.ಶಾಲಿನಿ ರಜನೀಶ್ ಸೂಚನೆ

**ಬೆಂಗಳೂರು :** ಮಧ್ಯಮ ಹಾಗೂ ಕೆಳ ಮಧ್ಯಮ ವರ್ಗದವರು ತಮ್ಮ ಅವಶ್ಯಕತೆಗಳಿಗಾಗಿ ಸಣ್ಣ ಫೈನಾನ್ಸ್ ಕಂಪನಿಗಳಲ್ಲಿ ಸಾಲ ಪಡೆದು,ಮರುಪಾವತಿಸುವಲ್ಲಿ ವಿಳಂಬ ಮಾಡಿದ ಸಾಲಗಾರರ ಮೇಲೆ ಅನಧಿಕೃತ ಲೇವಾದೇವಿದಾರರು,ಹಣಕಾಸು ಸಂಸ್ಥೆಗಳಿಂದ ಆಗುತ್ತಿರುವ ದಬ್ಬಾಳಿಕೆ,ದೌರ್ಜನ್ಯಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ದೌರ್ಜನ್ಯ ತಡೆಗೆ ಹಲವು ಕ್ರಮಗಳನ್ನು ತೆಗೆದುಕೊಂಡಿ–ದೆ ಎಂದು ಮುಖ್ಯ ಕಾರ್ಯದರ್ಶಿ ಡಾ.ಶಾಲಿನಿ ರಜನೀಶ್ ಹೇಳಿದರು.

ತುರ್ತು ವೈದ್ಯಕೀಯ ಚಿಕಿತ್ಸೆ,ಮಕ್ಕಳ ವಿದ್ಯಾಭ್ಯಾಸ, ಮದುವೆ ಇನ್ನಿತರ ಖರ್ಚಿಗಾಗಿ ತುರ್ತಾಗಿ ಕೈ ಸಾಲ ಪಡೆಯುವ ಪದ್ಧತಿ ರೂಢಿಯಲ್ಲಿದೆ.ಬಹುತೇಕರು ಪಡೆದ ಸಾಲವನ್ನು ವಾಪಸ್ಸು ನೀಡುತ್ತಾರೆ. ಆದರೆ ಕೆಲವು ವ್ಯಕ್ತಿಗಳು ಸಾಮಾಜಿಕ,ವೈಯಕ್ತಿಕ ಅಥವಾ ಉತ್ಪಾದಕವಲ್ಲದ ಕಾರ್ಯಗಳಿಗಾಗಿ ಹಣ ಖರ್ಚು ಮಾಡುವುದರಿಂದ, ಮರುಪಾವತಿ ಕ್ಷಮತೆ ಕಡಿಮೆ ಇರುತ್ತದೆ. ಇಂತಹ ಸಂದರ್ಭಗಳಲ್ಲಿ ಸಾಲ ನೀಡಿದವರು ಮರು ವಸೂಲಿಗಾಗಿ ಒತ್ತಾಯಿಸುತ್ತಾರೆ.ಕೆಲವೆಡೆ ಇದು ಕಿರುಕುಳವಾಗಿ ಬೆಳೆಯುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ.

**ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ :** ಕಳೆದ ಜನವರಿ 25 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ, ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕರ್ನಾಟಕ ವಲಯದ ಅಧ್ಯಕ್ಷರು, ಭಾರತೀಯ ರಿಸರ್ವ್ ಬ್ಯಾಂಕ್ (ಖಬಿಖ) ನ ಪ್ರಾಂತೀಯ ನಿರ್ದೇಶಕರು, ಹಾಗೂ ಸಾ–ಧನ್ (SA-DHAN),ಎಕೆಎಂಐ, ಎಂಎಫ್ಐಎನ್ ಮತ್ತು ಪ್ರಮುಖ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳು , ರಾಜ್ಯಮಟ್ಟದ ಬ್ಯಾಂಕರುಗಳ ಸಮಿತಿ ಸಂಚಾಲಕರು, ಅಧಿಕಾರಿಗಳು , ಪೊಲೀಸ್, ಕಂದಾಯ, ಸಹಕಾರ ಹಾಗೂ ಆರ್ಥಿಕ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ಸಭೆ ನಡೆಸಿ. ಕಿರುಕುಳವನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ನಿರ್ದೇಶನ ನೀಡಿದ್ದಾರೆ.



**ಕರ್ನಾಟಕದ ಅಧಿನಿಯಮಗಳು:** ಕರ್ನಾಟಕ ಲೇವಾದೇವಿದಾರರ ಅಧಿನಿಯಮ–1961 ಅಡಿಯಲ್ಲಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

ಈ ಅಧಿನಿಯಮದಡಿಯಲ್ಲಿ 2024ರ ಡಿಸೆಂಬರ್ 31 ರವರೆಗೆ 20,425 ಸಂಸ್ಥೆಗಳು ನೋಂದಣಿಯಾಗಿವೆ. ಅದರಲ್ಲಿ 6590 ಲೇವಾದೇವಿದಾರರು, 6772 ಪಾನ್ ಬ್ರೋಕರ್‌ಗಳು, 7063 ಹಣಕಾಸಿನ ಸಂಸ್ಥೆಗಳು (Finance Corporation) ಇವೆ.

ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆ ನಿಷೇಧ ಕಾಯಿದೆ– 2004 ಪ್ರಕಾರ ಭದ್ರತಾ ಸಾಲಗಳಿಗೆ ವರ್ಷಕ್ಕೆ ಶೇ.14 ಹಾಗೂ ಭದ್ರತೆ ಇಲ್ಲದ ಸಾಲಗಳಿಗೆ ವರ್ಷಕ್ಕೆ ಗರಿಷ್ಠ ಶೇ.16 ಗರಿಷ್ಠ ಬಡ್ಡಿ ದರವನ್ನು ಲೇವಾದೇವಿದಾರರಿಗೆ ನಿಗದಿಪಡಿಸಲಾಗಿದೆ.

ಇಂತಹ ಮಾಹಿತಿಗಳನ್ನು ಸಾರ್ವಜನಿಕವಾಗಿ ಫಲಕಗಳ ಮೂಲಕ ಪ್ರದರ್ಶಿದಲು ಸಂಸ್ಥೆಗಳು ಹಾಗೂ ಸಂಬಂಧಿಸಿದ ಕಚೇರಿಗಳಿಗೆ ತಿಳಿಸಲಾಗಿದೆ. ಸಾಲಗಾರರು ಇವುಗಳನ್ನು ಸೂಕ್ಷ್ಮವಾಗಿ ಗಮನಿಸಿ ಸಾಲ ಪಡೆಯುವ ಮುನ್ನ ಲೇವಾದೇವಿ ಸಂಸ್ಥೆಗಳ ಅಧಿಕೃತ ನೋಂದಣಿ ಪತ್ರ, ಬಡ್ಡಿದರ, ವಸೂಲಿ ಪ್ರಕ್ರಿಯೆ ಇತ್ಯಾದಿಗಳ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಈ ಪ್ರಕ್ರಿಯೆಗಳಿಂದ ಸಾಲ ಮರುಪಾವತಿ ಸಂದರ್ಭದಲ್ಲಿನ ಕಿರುಕುಳ ತಪ್ಪಿಸಲು ಸಾಧ್ಯವಾಗುತ್ತದೆ.

## ಮಾರ್ಚ್ 7ರಂದು ರಾಜ್ಯ ಬಜೆಟ್ ಮಂಡನೆಗೆ ಸಿದ್ಧತೆ



**ಬೆಂಗಳೂರು:** ರಾಜ್ಯ ವಿಧಾನಸಭೆಯ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಮಾ. 3ರಂದು ರಾಜ್ಯಪಾಲರು ಭಾಷಣ ಮಾಡಲಿದ್ದು, ಮಾ. 7ರಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಬಹುನಿರೀಕ್ಷಿತ ಬಜೆಟ್ ಮಂಡನೆಯಾಗಲಿದೆ. ಈ

ಹಿನ್ನೆಲೆಯಲ್ಲಿ ಫೆ. 6ರಂದು ಮುಖ್ಯಮಂತ್ರಿ 13 ಇಲಾಖೆಗಳ ಜತೆಗೆ ಮ್ಯಾರಥಾನ್ ಸಭೆ ನಡೆಸಲಿದ್ದಾರೆ.

ಇದಕ್ಕೆ ಸಂಬಂಧಿಸಿ ಕಾನೂನು ಮತ್ತು ಸಂಸದೀಯ ಹಾಗೂ ಹಣಕಾಸು ಇಲಾಖೆಯ ಜತೆ ಸಮಾಲೋಚನೆ ನಡೆದಿದ್ದು, ಮುಂದಿನ ಸಂಪುಟ ಸಭೆಯಲ್ಲಿ ಅಂತಿಮಗೊಳ್ಳಲಿದೆ. ಬಜೆಟ್ ಹಿನ್ನೆಲೆಯಲ್ಲಿ ಗುರುವಾರದಿಂದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿವಿಧ ಇಲಾಖೆಗಳ ಜತೆಗೆ ಪೂರ್ವಭಾವಿ ಸಭೆಗೆ ಸಮಯ ನಿಗದಿ ಮಾಡಿದ್ದಾರೆ. ಗುರುವಾರ

ಒಂದೇ ದಿನ 13 ಇಲಾಖೆಗಳ ಜತೆಗೆ ಸಭೆ ನಡೆಸಲಿದ್ದಾರೆ. ಇದು ಇತ್ತೀಚಿನ ದಿನಗಳಲ್ಲಿ ಸಿದ್ದರಾಮಯ್ಯ ನಡೆಸಲಿರುವ ಅತಿ ದೀರ್ಘಾವಧಿ ಸಭೆಯಾಗಿದೆ. ಬೆಳಗ್ಗೆ 11ರಿಂದ ರಾತ್ರಿ 7ರ ವರೆಗೆ ಚರ್ಚೆ ನಡೆಯಲಿದೆ.

**ಸರಾಸರಿ ಅರ್ಧ ಗಂಟೆ ಅವಕಾಶ :** ಒಳಾಡಳಿತ, ಕೈಗಾರಿಕೆ, ಮೂಲಸೌಲಭ್ಯ, ಸಣ್ಣ ಕೈಗಾರಿಕೆ, ಇಂಧನ, ಲೋಕೋಪಯೋಗಿ, ಕಾರ್ಮಿಕ, ಶಾಲಾ ಶಿಕ್ಷಣ, ಆಹಾರ, ನಾಗರಿಕ ಸರಬರಾಜು, ಸಹಕಾರ, ರೇಷ್ಮೆ, ಪಶು ಸಂಗೋಪನೆ ಇಲಾಖೆ ಸಭೆ ಫೆ. 6ರಂದು ನಡೆಯುತ್ತದೆ. ಎಲ್ಲ ಇಲಾಖೆಗೆ ಸರಾಸರಿ ಅರ್ಧ ಗಂಟೆ ಮಾತ್ರ ಸಮಯಾವಕಾಶ ನೀಡಲಾಗಿದೆ.

## ನಾವು ಕೂಡ ದಿಲ್ಲಿಗೆ ಹೋಗಲು ಸಿದ್ಧ, ನಮಗೇನು ದಾರಿ ಗೊತ್ತಿಲ್ವಾ?: ರೇಣುಕಾಚಾರ್ಯ

**ದಾವಣಗೆರೆ:** ಬಿ.ವೈ.ವಿಜಯೇಂದ್ರ ಬದಲಿಗೆ ಬೇರೊಬ್ಬರನ್ನು ರಾಜ್ಯಾಧ್ಯಕ್ಷರಾಗಿ ನೇಮಿಸಬೇಕು ಬೇಡಿಕೆಯೊಂದಿಗೆ ಹಿರಿಯ ಶಾಸಕ ಬಸನಗೌಡ ಪಾಟೀಲ್ ಯತ್ನಾಳ್ ಬಣದ ತಂಡವು ದಿಲ್ಲಿಗೆ ತೆರಳಿದ್ದರೆ ಇತ್ತ ಬಿಜೆಪಿ ... ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಬಣದ ಪ್ರಮುಖರು ಪ್ರತ್ಯುತ್ತರ ನೀಡಲು ಸಿದ್ಧತೆ ನಡೆಸಿದೆ.



ಈ ಕುರಿತು ಮಾಜಿ ಸಚಿವ ಎಂ.ಪಿ.ರೇಣುಕಾಚಾರ್ಯ ಮಾಧ್ಯಮಗಳೊಂದಿಗೆ ಮಾತನಾಡಿ ಭಿನ್ನಮತೀಯರ ಗುಂಪು ಕಾಂಗ್ರೆಸ್ ಸರಕಾರದ ವಿರುದ್ಧ ಮಾತನಾಡುವ ಬದಲಿಗೆ ಸ್ವಪಕ್ಷದವರ ವಿರುದ್ಧವೇ ಮಾತನಾಡುತ್ತಿರುವುದು ದುರದೃಷ್ಟಕರ, ಭಿನ್ನಮತೀಯ ಯತ್ನಾಳ್ ತಂಡವು ದೆಹಲಿ ದಂಡಯಾತ್ರೆ ಮಾಡಿದರೂ ಬಿ.ವೈ.ವಿಜಯೇಂದ್ರ ಏನೆಂಬುದು ರಾಷ್ಟ್ರೀಯ ನಾಯಕರಿಗೂ ಗೊತ್ತಿದೆ. ಹಾದಿ ಬೀದಿಯಲ್ಲಿ ಮಾತನಾಡುವ ಮೂಲಕ ಬಿಜೆಪಿ ಭಿನ್ನ ನಾಯಕರು ಮಾನಸಿಕ ಅಸ್ವಸ್ಥರಾಗಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

## ಅಪ್ರಾಪ್ತ ಮೇಲೆ ಅತ್ಯಾಚಾರ... ಪೋಕೋ ಕಾಯ್ದೆಯಡಿ ಇಬ್ಬರು ಆರೋಪಿಗಳ ಬಂಧನ

**ಗದಗ:** 15 ವರ್ಷದ ಅಪ್ರಾಪ್ತ ಮ ಅತ್ಯಾಚಾರ ಪ್ರಕರಣದಡಿ ಇಬ್ಬ ಆರೋಪಿಗಳನ್ನು ಪೋಕ್ಲೋ ಕಾಯ್ದೆಯ ಪೊಲೀಸರು ವಶಕ್ಕೆ



ಪಡೆದು ನ್ಯಾಯಾಂ ಬಂಧನಕ್ಕೆ ಒಪ್ಪಿಸಲಾಗಿದೆ.

ಜಿಲ್ಲೆಯ ಗಜೇಂದ್ರಗಡ ತಾಲೂಕಿನ ನರೇಗಲ್ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ಸುಲೆಮಾನ್ ಹಾಗೂ ಅಲ್ತಾಫ್ ಎಂಬ ಇಬ್ಬರು ಯುವಕರು ಅಪ್ರಾಪ್ತ ಬಾಲಕಿಯನ್ನು ನಿರ್ಜನ ಪ್ರದೇಶಕ್ಕೆ ಕ–ರೆದೊಯ್ದು ಅತ್ಯಾಚಾರ ಎಸಗಿದ್ದಾರೆ. ಮೊದಲು ಸುಲೆಮಾನ್ ಎಂಬುವರ ಜೊತೆಗೆ ಇರುವುದನ್ನು ಅಲ್ತಾಫ್ ವಿಡಿಯೋ ಮಾಡಿದ್ದಾನೆ. ನಂತರ ಆ ವಿಡಿಯೋ ಇಟ್ಟುಕೊಂಡು ಅಲ್ತಾಫ್ ಬಾಲಕಿಗೆ ಬ್ಲಾಕ್ ಮೇಲ್ ಮಾಡಿ ಅತ್ಯಾಚಾರ ಎಸಗಿದ್ದಾನೆ. ಹೀಗೆ ಇಬ್ಬರು ಅತ್ಯಾಚಾರದ ವಿಡಿಯೋ ಮಾಡಿ ವಿಕೃತಿ ಮೆರೆದಿದ್ದಾರೆ.


2024 ಡಿಸೆಂಬರ್ ತಿಂಗಳಲ್ಲಿ ಘಟನೆ ನಡೆದಿದೆ ಎನ್ನಲಾಗಿದ್ದು, ಮತ್ತೆ ಸಹಕರಿಸದಿದ್ದರೆ ಈ ವಿಡಿಯೋ ವೈರಲ್ ಮಾಡುವುದಾಗಿ ಬಾಲಕಿಗೆ ಹೆದರಿಸಿದ್ದಾರೆ. ಇದರಿಂದ ಮನನೊಂದ ಬಾಲಕಿ, ನರೇಗಲ್ ಪೊಲೀಸ್ ಠಾಣೆಯಲ್ಲಿ 2024ರ ಜನವರಿ 30 ರಂದು ಇಬ್ಬರ ವಿರುದ್ಧ ದೂರು ನೀಡಿದ್ದಾಳೆ. ಪೋಷ್ಕೋ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು ಇಬ್ಬರು ಆರೋಪಗಳನ್ನು ವಶಕ್ಕೆ ಪಡೆದಿದ್ದು, ತನಿಖೆ ಮುಂದುವರೆದಿದೆ. ಪಾಲಕರಿಗೆ ತಡವಾಗಿ ವಿಷಯ ಗೊತ್ತಾಗಿದೆ.

## ಮಾನವ ಕಳ್ಳ ಸಾಗಣಿಕೆಯ ಮಜಲುಗಳ ಅರಿವು ಕಾರ್ಯಗಾರ

**ಚಿಕ್ಕಮಗಳೂರು: ಫೆ. 05:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಚಿಕ್ಕಮಗಳೂರು ಹಾಗೂ ಪರಿವರ್ತನ ಗ್ರಾಮೀಣ ಅಭಿವೃದ್ಧಿ ಸಂಸ್ಥೆ, ಶಿರಾಳಕೊಪ್ಪ ಇವರ ಸಂಯುಕ್ತಾಶ್ರಯದಲ್ಲಿ ಫೆಬ್ರವರಿ 06 ರಂದು ಬೆಳಿಗ್ಗೆ 10.00 ಗಂಟೆಗೆ ನಗರದ ತಾಲ್ಲೂಕು ಪಂಚಾಯಿತಿ ಡಾ. ಅಂಬೇಡ್ಕರ್ ಸಭಾಂಗಣದಲ್ಲಿ ಮಾನವ ಕಳ್ಳ ಸಾಗಣಿಕೆಯ ಮಜಲುಗಳ ಅರಿವು ಕುರಿತು ಒಂದು ದಿನದ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ.

### ಜಿಲ್ಲಾ ವರದಿಗಾರರ ಕೂಟದಿಂದ ಜಿಲ್ಲಾಧಿಕಾರಿಗೆ ಮನವಿ

## ನಕಲಿ ಪತ್ರಕರ್ತರ ಹಾವಳಿ ತಡೆಗೆ ಆಗ್ರಹ



**ದಾವಣಗೆರೆ:** ಮಾಧ್ಯಮಗಳ ಹೆಸರೇಳಿಕೊಂಡು ಕಾನೂನು ಬಾಹಿರ ಚಟುವಟಿಕೆಗಳಲ್ಲಿ ತೊಡಗಿರುವ ನಕಲಿ ಪತ್ರಕರ್ತರ ಹಾವಳಿಯನ್ನು ತಡೆಗಟ್ಟುವಂತೆ ಕೋರಿ ಬುಧವಾರ ಜಿಲ್ಲಾ ವರದಿಗಾರರ ಕೂಟದ ಸದಸ್ಯರು ಜಿಲ್ಲಾಧಿಕಾರಿಗೆ ಮತ್ತು ಮಾಯಕೊಂಡ ಶಾಸಕ ಕೆ.ಎಸ್. ಬಸವಂತಪ್ಪ ಅವರಿಗೆ ಮನವಿ ಸಲ್ಲಿಸಿದರು.

ಪ್ರಜಾಪ್ರಭುತ್ವದ 4ನೇ ಅಂಗವೆಂದು ಕರೆಯಲ್ಪಡುವ ಮಾಧ್ಯಮ ಕ್ಷೇತ್ರದಲ್ಲಿ ಸೇವೆ ಸಲ್ಲಿಸಿಕೊಂಡು, ನಾವೆಲ್ಲಾ ಬದುಕು ಕಟ್ಟಿಕೊಂಡಿದ್ದೇವೆ. ಕ್ಷೇತ್ರದಲ್ಲಿ ನಾಲ್ಕೈದು ದಶಕದಿಂದ ಸೇವೆ ಸಲ್ಲಿಸುವವರಿದ್ದು, ಆದರೆ ಕಳೆದ ಕೆಲ ವರ್ಷದಿಂದಲೂ ಮಾಧ್ಯಮ ವೃತ್ತಿಗೆ, ವೃತ್ತಿ ಬಾಂಧವರ ಹೆಸರಿಗೆ ಮಸಿ ಬಳಿಯುವಂತಹ ಕೆಲಸ ನಿರಂತರವಾಗಿ ನಡೆಯುತ್ತಿದೆ ಎಂದು ಪತ್ರಕರ್ತರು ಅಸಮಾಧಾನ ವ್ಯಕ್ತಪಡಿಸಿದರು.

ಜಿಲ್ಲಾ ವರದಿಗಾರರ ಕೂಟದ ಅಧ್ಯಕ್ಷ ನಾಗರಾಜ್ ಬಡಿದಾಳ್ ಮಾತನಾಡಿ, ಮಾಧ್ಯಮಗಳ ಹೆಸರು ಹೇಳುತ್ತಲೇ ಬಡ್ಡಿ ವ್ಯವಹಾರ ಮಾಡುವವರು, ಕಾನೂನು ಬಾಹಿರ ಕೆಲಸ ಮಾಡುವವರು, ಇಸ್ಪೀಟ್ ಜೂಜಾಟ ಆಡಿಸುವವರು, ರಿಯಲ್ ಎಸ್ಟೇಟ್ ದಂಧೆಯವರು, ಗ್ಯಾರೇಜ್, ಮೆಕ್ಯಾನಿಕ್‌ಗಳು, ಆಟೋ ರಿಕ್ಷಾಗಳು, ಪ್ರಿಂಟಿಂಗ್ ಪ್ರೆಸ್‌ನವರು, ಸರಕು ಸಾಗಾಣಿಕೆ ವಾಹನಗಳ ಮೇಲೆ ಪ್ರೆಸ್, ಮೀಡಿಯಾ ಎಂಬುದಾಗಿ ಬರೆಸಿಕೊಂಡು ಸುತ್ತಾಡುತ್ತಿದ್ದು, ಇದರಿಂದ ನೈಜ ಮಾಧ್ಯಮದವರಿಗೆ ನಿರಂತರ ತೊಂದರೆಯಾಗುತ್ತಲೇ ಇದೆ. ಪ್ರೆಸ್, ಮೀಡಿಯಾ ಎಂಬುದಾಗಿ ಇರುವ ವಾಹನಗಳನ್ನೇ ಮೊದಲು ತಪಾಸಣೆ ಮಾಡುವಂತೆ ಜಿಲ್ಲಾಧಿಕಾರಿ, ಜಿಲ್ಲಾ ರಕ್ಷಣಾಧಿಕಾರಿಗಳು ತಮ್ಮ ಅಧೀನ ಅಧಿಕಾರಿ, ಸಿಬ್ಬಂದಿಗೆ ನಿರ್ದೇಶನ ನೀಡಬೇಕು ಎಂದು ಒತ್ತಾಯಿಸಿದರು.

ಮಾಹಿತಿ ಹಕ್ಕು ಕಾಯ್ದೆಯಡಿ ಅರ್ಜಿಯನ್ನು ಹಾಕಿ, ತಾವು ಪತ್ರಕರ್ತರೆಂದು ಅಧಿಕಾರಿ, ಸಿಬ್ಬಂದಿಗಳನ್ನು ಹೆದರಿಸುವ, ಬೆದರಿಸುವ ಕೆಲಸವೂ ಆಗುತ್ತಿದೆ. ಹಣ ವಸೂಲಿ ಮಾಡುವುದೇ ಇವರ ಉದ್ದೇಶವಾಗಿದ್ದು, ಇಂತಹವರಿಂದಾಗಿ ನೈಜವಾಗಿ ಮಾಹಿತಿ ಹಕ್ಕಿನಡಿ ಮಾಹಿತಿ ಕೋರಿ, ಅರ್ಜಿ ಸಲ್ಲಿಸುವ ನೈಜ ಪತ್ರಕರ್ತರಿಗೂ ಸಂಬಂಧಿಸಿದ ಅಧಿಕಾರಿಗಳು, ಸಿಬ್ಬಂದಿ ವ್ಯವಹಾರ ಕುದುರಿಸಲು ಆರ್‌ಟಿಐನಲ್ಲಿ ಮಾಹಿತಿ ಕೋರಿದ್ದಾ–ರೆಂಬ ವ್ಯಂಗ್ಯದ ಮಾತು ಕೇಳುವಂತಹ ಪರಿಸ್ಥಿತಿ ನಿರ್ಮಾಣವಾಗಿದೆ. ಇದನ್ನು ಮೊದಲು ತಪ್ಪಿಸುವಂತೆ ಮನವಿ ಮಾಡಿದರು.

ಕೆಲವು ನಿರ್ದಿಷ್ಟ ಪೊಲೀಸ್ ಠಾಣೆಗಳಲ್ಲಿ ರಾಜಿ ಪಂಚಾಯಿತಿ, ಕೊಡು–ತೆಗೆದುಕೊಳ್ಳುವ ವ್ಯವಹಾರಗಳಲ್ಲೂ ಮಾಧ್ಯಮದವರ ಹೆಸರನ್ನು ಸೇರಿಸಲಾಗುತ್ತಿದೆ. ಇದನ್ನು ಡಿಸಿ, ಎಸ್ಪಿಯವರು ಗಂಭೀರವಾಗಿ ಪರಿಗಣಿಸಿ, ಜಿಲ್ಲಾದ್ಯಂತ ಎಲ್ಲಾ ಪೊಲೀಸ್ ಅಧಿಕಾರಿ, ಠಾಣಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿ, ತಡೆಯಲು ನಿರ್ದೇಶನ ನೀಡಬೇಕು. ಅಲ್ಲದೇ, ನಕಲಿ ಪತ್ರಕರ್ತರ ಸುಲಿಗೆ, ವಸೂಲಿ, ತಿಂಗಳ ಮಾಮೂಲಿ, ವರ್ಷದ ಮಾಮೂಲಿ, ಹಬ್ಬದ ಖುಷಿಗೆ ಅಂತೆಲ್ಲಾ ಊರ ತುಂಬಾ ಸುಳ್ಳು ಹೇಳಿಕೊಂಡು ಸುತ್ತಾಡುವ ದಂಧೆಕೋರರಿಗೂ ಅಂತಿಮ ಎಚ್ಚರಿಕೆ ನೀಡುವಂತೆ ಮನವಿ ಮಾಡಿದರು.

ದಾವಣಗೆರೆ ನಗರ, ಜಿಲ್ಲೆಯ ಪತ್ರಿಕೋದ್ಯಮ, ಇಲ್ಲಿನ ಪತ್ರಕರ್ತರಿಗೆ ಅವರದ್ದೇ ಆದ ಗೌರವ, ಘನತೆ ಇದೆ. ಯಾವುದೋ ಸಂಸ್ಥೆ ಹೆಸರು ಹೇಳಿಕೊಂಡು, ವಸೂಲಿ ಮಾಡುವ ನಕಲಿ ಪತ್ರಕರ್ತರಿಗೆ ಕಡಿವಾಣ ಹಾಕಲು ಮನವಿ. ಆಕಸ್ಮಾತ್ ನಾವು ಸೇರಿದಂತೆ ಯಾರಾದರೂ ನೈಜ ಪತ್ರಕರ್ತರು ಇಂತಹ ಚಟುವಟಿಕೆಗಳಲ್ಲಿ ಭಾಗಿಯಾಗಿದ್ದರೆ ನಿಮ್ಮಗಳ ಬಳಿ ದಾಖಲೆ ಇದ್ದರೆ ಕಾನೂನು ಪ್ರಕಾರ, ನಿಮ್ಮ ವಿವೇಚನೆ ಪ್ರಕಾರ ಕ್ರಮ ಕೈಗೊಂಡು, ನಕಲಿ ಪತ್ರಕರ್ತರ ಹಾವಳಿಗೆ ಕಡಿವಾಣ ಹಾಕಬೇಕೆಂದು ಕೋರಿದರು.

ಮನವಿ ಸ್ವೀಕರಿಸಿ ಮಾತನಾಡಿದ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರ ಸ್ವಾಮಿ, ನಕಲಿ ಪತ್ರಕರ್ತರ ಹಾವಳಿ ತಡೆಗಟ್ಟಲು ಸಂಬಂಧಿಸಿದ ಅಧಿಕಾರಿಗಳೊಂದಿಗೆ ಚರ್ಚೆ ನಡೆಸಿ, ಹದಿನೈದು ದಿನಗಳೊಳಗಾಗಿ ಸೂಕ್ತ ಕ್ರಮ ವಹಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಕೂಟದ ಗೌರವಾಧ್ಯಕ್ಷರಾದ ಬಿ.ಎನ್. ಮಲ್ಲೇಶ್, ಪ್ರಧಾನ ಕಾರ್ಯದರ್ಶಿ ಎಂ.ವೈ. ಸತೀಶ್, ಖಜಾಂಚಿ ಪವನ್ ಕುಮಾರ್, ಹಿರಿಯ ಪತ್ರಕರ್ತರಾದ ಎ.ಎಲ್. ತಾರಾನಾಥ್, ಮಂಜುನಾಥ್ ಗೌರಕ್ಕಳವರ್, ಚಂದ್ರಣ್ಣ, ಸಿದ್ದಯ್ಯರೇಮಠ್, ರಮೇಶ್ ಜಹಗೀರ್‌ದಾರ್, ಆರ್.ಟಿ. ತಿಪ್ಪೇಸ್ವಾಮಿ, ಸಿಕಂದರ್, ರವಿ ಬಾಬು, ಹೆಚ್.ಎಂ.ಪಿ. ಕುಮಾರ್, ಸಿ. ವರದರಾಜ್, ತೇಜಸ್ವಿನಿ, ಕಾವ್ಯ ಬಿಕೆ., ಸುರೇಶ್ ಕುಣಿಬೆಳಕೆರೆ, ಪುನೀತ್ ಆಪ್ತಿ, ತೇಜಸ್ವಿನಿ, ಸಂಜಯ್ ಕುಂದುವಾಡ, ರಮೇಶ್, ಶಿವುಕುಮಾರ್, ಕಿರಣ್, ಮದನ್, ಸುರೇಶ್ ಕಕ್ಕರಗೊಳ್ಳ ಸೇರಿದಂತೆ ಮತ್ತಿತರರಿದ್ದರು.

## ಕೂಟಕ್ಕೆ ಕೆಂಪುಕಟ್ಟಡ ನೀಡಲು ಕಾನೂನಾತ್ಮಕ ಕ್ರಮ: ಡಿಸಿ



**ದಾವಣಗೆರೆ:** ದಾವಣಗೆರೆ ಜಿಲ್ಲಾ ವರದಿಗಾರರ ಕೂಟಕ್ಕೆ ಪಾಲಿಕೆಗೆ ಸೇರಿದ ಕೆಂಪು ಕಟ್ಟಡವನ್ನು ನೀಡಲು ಕಾನೂನಾತ್ಮಕವಾಗಿ ಕ್ರಮ ಕೈಗೊಳ್ಳುವುದಾಗಿ ಜಿಲ್ಲಾಧಿಕಾರಿ ಜಿ.ಎಂ. ಗಂಗಾಧರಸ್ವಾಮಿ ಭರವಸೆ ನೀಡಿದ್ದಾರೆ.

ನಗರದ ಜಿಲ್ಲಾಡಳಿತ ಭವನದಲ್ಲಿ ಬುಧವಾರ ಜಿಲ್ಲಾ ವರದಿಗಾರರ ಕೂಟದ ಮನವಿ ಸ್ವೀಕರಿಸಿ ಮಾತನಾಡಿದ ಅವರು, ಕಳೆದ 18 ವರ್ಷಗಳಿಂದಲೂ ವರದಿಗಾರರ ಕೂಟವು ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿದ್ದು, ಈ ಹಿನ್ನೆಲೆಯಲ್ಲಿ ಶಾಶ್ವತ ಕಟ್ಟಡ ಒದಗಿಸಲು ತಾವು ಬದ್ಧ ಎಂದರು.

ಜಿಲ್ಲಾ ಉಸ್ತುವಾರಿ ಸಚಿವ ಎಸ್.ಎಸ್. ಮಲ್ಲಿಕಾರ್ಜುನ, ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನ ಸಹ ಪಾಲಿಕೆ ಹಿಂಭಾಗದ ನೀರಿನ ಟ್ಯಾಂಕ್ ಗೆ ಹೊಂದಿಕೊಂಡಿರುವ ಕೆಂಪು ಕಟ್ಟಡವನ್ನು ನೀಡಲು ಸೂಚಿಸಿದ್ದು, ಈ ಹಿನ್ನೆಲೆಯಲ್ಲಿ ಕಾನೂನಾತ್ಮಕವಾಗಿ ಅದನ್ನು ಒದಗಿಸುತ್ತೇವೆ ಎಂದು ಅವರು ತಿಳಿಸಿದರು.

ಪ್ರಜಾಪ್ರಭುತ್ವದ 4ನೇ ಅಂಗವಾದ ಪತ್ರಿಕಾ ರಂಗದ ಕೊಡುಗೆ ದೊಡ್ಡದು. ಆಡಳಿತ ಯಂತ್ರವನ್ನು ಸರಿ ದಾರಿಗೆ ಕೊಂಡೊಯ್ಯುವಲ್ಲಿ ಮಾಧ್ಯಮಗಳ ಪಾತ್ರವೂ ಅಪಾರವಾಗಿದೆ. ಜಿಲ್ಲಾ ವರದಿಗಾರರ ಕೂಟ ಸಹ ಸಾರ್ವಜನಿಕ ಸಂಸ್ಥೆಯಾಗಿದ್ದು, ಇಂತಹ ಸಂಸ್ಥೆಗೆ ಶಾಶ್ವತ ಜಾಗದ ಅಗತ್ಯವಿದೆ ಎಂದು ಅವರು ಹೇಳಿದರು.

ಇನ್ನೊಂದು ವಾರದಲ್ಲೇ ಈ ಬಗ್ಗೆ ಸೂಕ್ತ ಕ್ರಮ ಕೈಗೊಂಡು, ಜಿಲ್ಲಾ ಸಚಿವರು, ಸಂಸದರಿಂದ ವರದಿಗಾರರ ಕೂಟಕ್ಕೆ ಜಾಗ ನೀಡುವ ಮೂಲಕ ಆದಷ್ಟು ಬೇಗನೆ ಅದನ್ನು ಉದ್ಘಾಟಿಸಲು ಸಹ ಅನುವು ಮಾಡಿಕೊಡಲಾಗುವುದು. ವರದಿಗಾರರ ಕೂಟಕ್ಕೆ ಜಾಗ ನೀಡಲು ಯಾವುದೇ ತೊಂದರೆಯೂ ಇಲ್ಲ ಎಂದು ಅವರು ಪುನರುಚ್ಛರಿಸಿದರು.

ಸಚಿವ ಎಸ್.ಎಸ್.ಮಲ್ಲಿಕಾರ್ಜುನರವರು ಈಗಾಗಲೇ ವರದಿಗಾರರ ಕೂಟಕ್ಕೆ ಶಾಶ್ವತ ಜಾಗ ಕಲ್ಪಿಸುವ ಬಗ್ಗೆ ಹಿಂದೆಯೂ ಪ್ರಯತ್ನಿಸಿದ್ದರು. ಅದಕ್ಕೆಲ್ಲಾ ಈಗ ಕಾಲ ಕೂಡಿ ಬಂದಿದೆ. ಮೊನ್ನೆಯಷ್ಟೇ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನವರು ಮೇಯರ್ ಕೆ.ಚಮನ್ ಸಾಬ್, ಪಾಲಿಕೆ ಸ್ಥಾಯಿ ಸಮಿತಿ ಅಧ್ಯಕ್ಷರು, ಸದಸ್ಯರು ಹಾಗೂ ವರದಿಗಾರರ ಕೂಟದ ಪದಾಧಿಕಾರಿಗಳೊಂದಿಗೆ ಕೆಂಪು ಕಟ್ಟಡ ವೀಕ್ಷಿಸಿದ್ದಾರೆ ಎಂದು ಅವರು ತಿಳಿಸಿದರು.

ಸದ್ಯ ಅಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪಾಲಿಕೆಯ ಅಧಿಕಾರಿ, ಸಿಬ್ಬಂದಿಗೆ ಪಾಲಿಕೆಯಲ್ಲೇ ಪ್ರತ್ಯೇಕ ಜಾಗದ ವ್ಯವಸ್ಥೆ ಮಾಡಿ, ವರದಿಗಾರರ ಕೂಟಕ್ಕೆ ಕೆಂಪು ಕಟ್ಟಡದಲ್ಲಿ ಜಾಗ ಕಲ್ಪಿಸುತ್ತೇವೆ. ದಾವಣಗೆರೆ ಜಿಲ್ಲೆಯಾಗಿ 25 ವರ್ಷ ಕಳೆದರೂ ವರದಿಗಾರರ ಕೂಟಕ್ಕೆ ಸ್ವಂತ ಜಾಗ ಇಲ್ಲ. ಆದರೆ, ಬೇರೆ ಜಿಲ್ಲೆಗಳಲ್ಲಿ ಅಲ್ಲಿನ ಪತ್ರಕರ್ತರ ಸಂಘಗಳಿಗೆ **(3ನೇ ಪುಟಕ್ಕೆ)**

## ಮುಖ್ಯಮಂತ್ರಿಗಳ ವಿಶೇಷ ಅನುದಾನ ಪಡೆದು ನಗರದ ಸಮಗ್ರ ಅಭಿವೃದ್ಧಿ



**ಚಿಕ್ಕಮಗಳೂರು:** ಮುಂದಿನ ದಿನಗಳಲ್ಲಿ ಚಿಕ್ಕಮಗಳೂರು ನಗರವನ್ನು ಮುಖ್ಯಮಂತ್ರಿಗಳ ವಿಶೇಷ ಅನುದಾನ ಪಡೆದು ಸಮಗ್ರ ಅಭಿವೃದ್ಧಿಪಡಿಸುವುದಾಗಿ ಶಾಸಕ ಹೆಚ್.ಡಿ ತಮ್ಮಯ್ಯ ಭರವಸೆ ನೀಡಿದರು.

ಅವರು ಇಂದು ನಗರದ ಕೋಟೆ ಬಡಾವಣೆ ಬೇಲೂರು ರಸ್ತೆ ನೂತನ ಬಸ್ ನಿಲ್ದಾಣ ಹಾಗೂ ನಗರದ ಆಯ್ದ ಪ್ರಮುಖ ಭಾಗಗಳಲ್ಲಿ ಅತ್ಯುನ್ನತ ಮಾದರಿಯ 4 ಬಸ್ ನಿಲ್ದಾಣಗಳ ನಿರ್ಮಾಣಕ್ಕೆ ಗುದ್ದಲಿಪೂಜೆ ನೆರವೇರಿಸಿ ಮಾತನಾಡಿದರು.

ಮುಖ್ಯಮಂತ್ರಿಗಳ ವಿಶೇಷ ಅನುದಾನ ಬಿಡುಗಡೆಯಾದ ಬಳಿಕ ಕಾಮಗಾರಿಗಳನ್ನು ಆರಂಭಿಸಿ ಮೇ ತಿಂಗಳೊಳಗೆ ನಗರದ ಎಲ್ಲಾ ರಸ್ತೆಗಳನ್ನು ಸಂಪೂರ್ಣ ಅಭಿವೃದ್ಧಿಪಡಿಸಲು ಗುರಿ ಹೊಂದಲಾಗಿದೆ ಎಂದು ಹೇಳಿದರು.

ನಗರದ ವಿವಿದೆಡೆ ವಿನೂತನ ಮಾದರಿಯಲ್ಲಿ ಹೊರದೇಶದಲ್ಲಿ ನಿರ್ಮಾಣವಾಗಿರುವ ಸುಸಜ್ಜಿತ ಬಸ್ ನಿಲ್ದಾಣಗಳನ್ನು ನಿರ್ಮಾಣ ಮಾಡಲು ಇಂದು ಗುದ್ದಲಿ ಪೂಜೆ ನೆರವೇರಿಸಿದ್ದು, ಈ ಬಸ್ ನಿಲ್ದಾಣಗಳನ್ನು ಅತ್ಯಾಧುನಿಕ ರೀತಿಯಲ್ಲಿ ಗ್ಲಾಸ್ ಅಳವಡಿಸಿರುವುದರಿಂದ ಇದು ಸರ್ಕಾರದ ಆಸ್ತಿ ಅಲ್ಲ ಸಾರ್ವಜನಿಕರ ಆಸ್ತಿ ಎಂದು ಭಾವಿಸಿ ಹಾನಿಯಾಗದಂತೆ ನೋಡಿಕೊಳ್ಳಬೇಕೆಂದು ಮನವಿ ಮಾಡಿದರು.

ಪಕ್ಷಾತೀತವಾಗಿ ಎಲ್ಲಾ ಪದಾಧಿಕಾರಿಗಳು ಭಾಗವಹಿಸಿ ಅಭಿವೃದ್ಧಿಗೆ ಕೈಜೋಡಿಸಿರುವ ಬಗ್ಗೆ ಶ್ಲಾಘನೆ ವ್ಯಕ್ತಪಡಿಸಿದ ಅವರು, ಇಲ್ಲಿ ಒಂದು ಬಸ್ ನಿಲ್ದಾಣ ನಿರ್ಮಾಣ ಮಾಡಬೇಕೆಂಬ ಹಲವು ದಿನಗಳ ಬೇಡಿಕೆ ಇಂದು ಈಡೇರಿದ್ದು, ಸಂಸದ ಜಯರಾಂ ರಮೇಶ್ ನಿಧಿಯಿಂದ 10.92 ಲಕ್ಷ ರೂ ಹಾಗೂ ತಮ್ಮ ಶಾಸಕರ ನಿಧಿಯಿಂದ 5 ಲಕ್ಷ ರೂ ನಿಧಿಯಲ್ಲಿ ಈ ಬಸ್ ನಿಲ್ದಾಣ ನಿರ್ಮಿಸಲಾಗುತ್ತಿದೆ ಎಂದರು.

10.90 ಲಕ್ಷ ರೂ ವೆಚ್ಚದಲ್ಲಿ ಹಿರೇಮಗಳೂರಿನಲ್ಲಿ ಬಸ್ ನಿಲ್ದಾಣ, ನಗರಾಭಿವೃದ್ಧಿ ಪ್ರಾಧಿಕಾರದ ಬಡಾವಣೆ ಕಲ್ಯಾಣ ನಗರದಲ್ಲಿ 10 ಲಕ್ಷ ರೂ ವೆಚ್ಚದಲ್ಲಿ ಬಸ್ ನಿಲ್ದಾಣ ಹಾಗೂ ಕಣಿವೇ ರುದ್ರೇಶ್ವರ ದೇವಸ್ಥಾನದ ಬಳಿ ಹೌಸಿಂಗ್ ಬೋರ್ಡ್ ಆರನೇ ಹಂತದ ಜನರಿಗೆ ಹಾಗೂ ದಾಸರಹಳ್ಳಿ ಜನರಿಗೆ ಅನುಕೂಲವಾಗುವಂತೆ 10.90 ಲಕ್ಷ ರೂ ವೆಚ್ಚದಲ್ಲಿ ಬಸ್ ನಿಲ್ದಾಣ ನಿರ್ಮಾಣ ಮಾಡಲಾಗುವುದೆಂದರು.

### ಏಕಗವಾಕ್ಷಿ –ಕೈಗಾರಿಕಾ ಸ್ಪಂದನ ಸಭೆ

## ಕೈಗಾರಿಕಾ ಪ್ರದೇಶಗಳಲ್ಲಿ ಹಂತ ಹಂತವಾಗಿ ಮೂಲಭೂತ ಸೌಕರ್ಯಗಳ ಅಭಿವೃದ್ಧಿ : ಜಿಲ್ಲಾಧಿಕಾರಿ ಗುರುದತ್ತ ಹೆಗಡೆ

**ಶಿವಮೊಗ್ಗ :** ಕೈಗಾರಿಕಾ ಪ್ರದೇಶಗಳಲ್ಲಿ ಕುಡಿಯುವ ನೀರು, ಬೀದಿ ದೀಪ, ಯುಜಿಡಿ ಸೇರಿದಂತೆ ಮೂಲಭೂತ ಸೌಕರ್ಯಗಳಿಗೆ ಒತ್ತು ನೀಡಿ, ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುವುದು ಎಂದು ಜಿಲ್ಲಾಧಿಕಾರಿ ಗುರುದತ್ತ ಹೆಗಡೆ ತಿಳಿಸಿದರು.

ಜಿಲ್ಲಾಡಳಿತ ಕಚೇರಿ ಸಭಾಂಗಣದಲ್ಲಿ ಬುಧವಾರ ಏರ್ಪಡಿಸಲಾಗಿದ್ದ ಜಿಲ್ಲಾ ಮಟ್ಟದ ಏಕಗವಾಕ್ಷಿ ಸಮಿತಿ ಸಭೆ ಹಾಗೂ ಕೈಗಾರಿಕಾ ಸ್ಪಂದನಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಕೈಗಾರಿಕಾ ಪ್ರದೇಶಗಳನ್ನು ಹಂತ ಹಂತವಾಗಿ ಅಭಿವೃದ್ಧಿಪಡಿಸಲಾಗುತ್ತಿದೆ. ಮೂಲಭೂತ ಸೌಕರ್ಯಗಳಿಗೆ ಸಂಬಂಧಿಸಿದಂತೆ ಪ್ರಸ್ತುತ ಇರುವ ಸಮಸ್ಯೆಗಳನ್ನು ಬಗೆಹರಿಸಲಾಗುವುದು. ಕುಡಿಯುವ ನೀರು, ಬೀದಿ ದೀಪ, ಯುಜಿಡಿ, ತ್ಯಾಜ್ಯ ನಿರ್ವಹಣೆಯನ್ನು ಪಾಲಿಕೆ, ಸ್ಥಳೀಯ ಸಂಸ್ಥೆಗಳ ಸಮನ್ವಯದೊಂದಿಗೆ ನಿರ್ವಹಿಸಲಾಗುವುದು ಎಂದರು. ಕೈಗಾರಿಕಾ ಸಂಘಗಳ ಅಧ್ಯಕ್ಷರು, ಶಾಹಿ ಎಕ್ಸ್‌ಪೋರ್ಟ್ಸ್ ನ ಅಪಾಯಕಾರಿ ತ್ಯಾಜ್ಯ ತುಂಬಿರುವ ವಾಹನಗಳು ಮತ್ತು ಐಓಸಿಲ್‌ನ ಅನಿಲ ತುಂಬಿರುವ ವಾಹನಗಳು ಮಾಚೇನಹಳ್ಳಿ ಕೈಗಾರಿಕಾ ಪ್ರದೇಶದ ಮುಖ್ಯ ರಸ್ತೆಯನ್ನು



ಬಳಸಿಕೊಳ್ಳುತ್ತಿರುವುದರಿಂದ ತೊಂದರೆಯಾಗುತ್ತಿದೆ. ಗಾರ್ಮೆಂಟ್ಸ್‌ನ ವಾಯುಮಾಲಿನ್ಯ ಮತ್ತು ಜಲ ಮಾಲಿನ್ಯ ನಿಯಂತ್ರಿಸಲು ಕ್ರಮ ವಹಿಸಬೇಕು. ಹಾಗೂ ಜಿಟಿಟಿಸಿ ಆವರಣದ ಮುಂದೆ ಮತ್ತು ಇಲ್ಲಿರುವ ಕ್ಯಾಂಟಿನ್ ಬಳಿ ಐಓಸಿಲ್‌ನ ವಾಹನಗಳನ್ನು ನಿಲ್ಲಿಸಲಾಗುತ್ತಿದೆ. ಇದನ್ನು ನಿಯಂತ್ರಿಸಬೇಕೆಂದು ಕೋರಿದರು.

ಜಿಲ್ಲಾಧಿಕಾರಿಗಳು, ಶಾಹಿ ಎಕ್ಸ್‌ಪೋರ್ಟ್ಸ್ ಮತ್ತು ಐಓಸಿಲ್ ವಾಹನಗಳನ್ನು ತಮ್ಮ ಪ್ರತ್ಯೇಕ ರಸ್ತೆಗಳಲ್ಲಿ ಬರುವಂತೆ ಕ್ರಮ ವಹಿಸಬೇಕು. ಹಾಗೂ ಅಪಾಯಕಾರಿ ತ್ಯಾಜ್ಯಗಳನ್ನು ಸಾಗಿಸುವಾಗ ಎಚ್ಚರಿಕೆ ವಹಿಸಬೇಕೆಂದು ಸೂಚನೆ ನೀಡಿದರು. ವಾಹನಗಳನ್ನು ಸಮರ್ಪಕವಾಗಿ ನಿಲುಗಡೆಯಲ್ಲಿಯೇ ನಿಲ್ಲಿಸುವಂತೆ ಸೂಚನೆಗಳನ್ನು ನೀಡಬೇಕೆಂದು ತಿಳಿಸಿದರು.ಶಾಹಿ ಎಕ್ಸ್‌ಪೋರ್ಟ್ ಸುತ್ತಮುತ್ತಲ ಪ್ರದೇಶದಲ್ಲಿ ಆಸಿಡ್ ವಾಸನೆ ಬರುತ್ತಿದೆ ಎಂಬ ದೂರು ಸಹ ಇದೆ. ಮಾಲಿನ್ಯ ನಿಯಂತ್ರಣ ಮಂಡಳಿ ಅಧಿಕಾರಿಗಳು ಇಲ್ಲಿಗೆ ಭೇಟಿ ನೀಡಿ ಪರಿಶೀಲಿಸಬೇಕು. ಹಾಗೂ ಶಾಹಿ ಎಕ್ಸ್‌ಪೋರ್ಟ್ಸ್‌ನವರು ವಾಸನೆ ಬಾರದಂತೆ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದರು.

## ಹಿಂದುಳಿದ ಸಮಾಜಗಳು ಸರ್ಕಾರದ ಸೌಲಭ್ಯ ಸದುಪಯೋಗ ಪಡೆದು ಸಂಘಟಿತರಾಗಲಿ : ಶಾಸಕ ಕೆ.ಎಸ್.ಬಸವಂತಪ್ಪ

**ದಾವಣಗೆರೆ:** ಸವಿತಾ ಸಮಾಜ ಹಿಂದುಳಿದ ಸಮಾಜವಾಗಿದ್ದು, ಸಮಾಜವು ಸಂಘಟನೆಯಿಂದ ಸರ್ಕಾರದ ಸೌಲಭ್ಯಗಳನ್ನು ಬಳಸಿಕೊಂಡು ಆರ್ಥಿಕ, ಸಾಮಾಜಿಕ ಹಾಗೂ ಶೈಕ್ಷಣಿಕವಾಗಿ ಬೆಳೆಯಬೇಕು ಎಂದು ಶಾಸಕರಾದ ಕೆ.ಎಸ್.ಬಸವಂತಪ್ಪ ತಿಳಿಸಿದರು.

ಬುಧವಾರ(ಫೆ.5) ರಂದು ಅಪರ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಜಿಲ್ಲಾಡಳಿತ ವತಿಯಿಂದ ಆಯೋಜಿಸಲಾಗಿದ್ದ



ಸವಿತಾ ಮಹರ್ಷಿ ಜಯಂತಿ ಉದ್ಘಾಟಿಸಿ ಮಾತಾನಾಡಿದರು. ಸವಿತಾ ಸಮಾಜದ ಪ್ರತಿಯೊಬ್ಬರೂ ಶಿಕ್ಷಣವಂತರಾಗಬೇಕು, ಆಗ ಮಾತ್ರ ಶ್ರೀಮಂತ, ಬಡವ, ಮೇಲು ಕೀಳು ಎಂಬ ಮನೋಭಾವನೆ ಬರಲು ಸಾಧ್ಯವಿಲ್ಲ. ನಾವೆಲ್ಲರೂ ಒಗ್ಗಟ್ಟಾಗಿ ಇರಬೇಕು ಸಮಾಜದಲ್ಲಿ ಇರುವಂತಹ ತೊಡಕುಗಳನ್ನು ತೊರೆದು ನಡೆದರೆ ಮಾತ್ರ ಅಭಿವೃದ್ಧಿ ಸಾಧಿಸುವುದಕ್ಕೆ ಸಾಧ್ಯವಾಗುತ್ತದೆ ಎಂದರು.

## ಇಂದಿನ ರಾಶಿ ಭವಿಷ್ಯ

### ಮೇಷ ರಾಶಿ

ನಿಮ್ಮ ಕುಟುಂಬದ ನೀವು ಕಿರಿಕಿರಿ ಸಾಧ್ಯವಾಯಿತು ಇದು ನಿಮ್ಮಿಂದ ಸಾಕಷ್ಟು ನಿರೀಕ್ಷಿಸುತ್ತದೆ. ಆರ್ಥಿಕ ಜೀವನದಲ್ಲಿ ಇಂದು ಸಂತೋಷ ಉಳಿದಿರುತ್ತದೆ. ಇದರೊಂದಿಗೆ ನೀವು ಇಂದು ಸಾಲಗಳಿಂದ ಮುಕ್ತರಾಗಬಹುದು. ಸ್ನೇಹಿತರು ಮತ್ತು ಅಪರಿಚಿತರಿಬ್ಬರ ಬಗೆಗೂ ಎಚ್ಚರದಿಂದಿರಿ. ನಿಮ್ಮ ಪ್ರೀತಿಪಾತ್ರರ ತೋಳುಗಳಲ್ಲಿ ಆರಾಮ-ಆನಂದ ಮತ್ತು ಭಾವಪರವಶತೆಯನ್ನು ನೀವು ಕಾಣುವುದರಿಂದ ನಿಮ್ಮ ಕೆಲಸ ಹಿಂದೆ ಬೀಳುತ್ತದೆ.

### ವೃಷಭ ರಾಶಿ

ಬಸುರಿಯು ನೆಲದ ಮೇಲೆ ನಡೆದುಕೊಂಡು ಹೋಗುವಾಗ ವಿಶೇಷ ಕಾಳಜಿ ವಹಿಸಬೇಕು. ನಿಮ್ಮ ಖರ್ಚುಗಳನ್ನು ನಿಯಂತ್ರಿಸಲು ಮತ್ತು ಕೇವಲ ಅಗತ್ಯವಾದ ವಸ್ತುಗಳ ಮಾತ್ರ ಇಂದು ಖರೀದಿಸಲು ಪ್ರಯತ್ನಿಸಿ. ನಿಮ್ಮ ಮನೆಯ ಪರಿಸ್ಥಿತಿ ಸ್ವಲ್ಪ ಅನಿರೀಕ್ಷಿತವಾಗಿರುತ್ತದೆ. ನೀವು ಕೆಲವು ಪ್ರವಾಸೀ ತಾಣಗಳಿಗೆ ಭೇಟಿ ನೀಡುವ ಮೂಲಕ ನಿಮ್ಮ ಪ್ರೇಮ ಜೀವನವನ್ನು ಉಜ್ವಲಗೊಳಿಸಬಹುದು. ವ್ಯವಹಾರದ ಜೊತೆ ಸಂತೋಷವನ್ನು ಬೆರೆಸಬೇಡಿ.

### ಮಿಥುನ ರಾಶಿ

ನೀವು ಪ್ರಯಾಣಿಸಲು ತುಂಬಾ ದುರ್ಬಲರಾಗಿದ್ದರಿಂದ ದೀರ್ಘ ಪ್ರಯಾಣವನ್ನು ತಪ್ಪಿಸಲು ಪ್ರಯತ್ನಿಸಿ. ನಿಮ್ಮ ಹಿಂದಿನ ಸಾಲವನ್ನು ಇಂದಿನ ವರೆಗೂ ಮರುಪಾವತಿ ಮಾಡದೇ ಇರುವ ನಿಮ್ಮ ಸಂಬಂಧಿಕರಿಗೆ ಇಂದು ಸಾಲ ಕೊಡಬಾರದು. ಸೋದರಿಯ ಪ್ರೀತಿ ನಿಮ್ಮನ್ನು ಉತ್ತೇಜಿಸುತ್ತದೆ. ಅದರೆ ನೀವು ಚಿಕ್ಕ ವಿಷಯಳಿಗೆ ತಾಳ್ಮೆ ಕಳೆದುಕೊಳ್ಳಬಾರದು ಏಕೆಂದರೆ ಅದು ನಿಮ್ಮ ಆಸಕ್ತಿಗಳನ್ನು ಹಾಳು ಮಾಡುತ್ತದೆ. ಇಂದು ನೀವು ನಿಮ್ಮ ಸ್ನೇಹಿತನ ಅನುಪಸ್ಥಿತಿಯಲ್ಲಿ ಅವರ ಸುಗಂಧವನ್ನು ಅನುಭವಿಸುತ್ತೀರಿ.

### ಕರ್ಕ ರಾಶಿ

ನಿಮ್ಮ ವೈಯಕ್ತಿಕ ಸಮಸ್ಯೆಗಳು ಮಾನಸಿಕ ಸಂತೋಷವನ್ನು ಹಾಳು ಮಾಡಬಹುದು. ಆದರೆ ಒತ್ತಡವನ್ನು ನಿಭಾಯಿಸಲು ಆಸಕ್ತಿದಾಯಕವಾದದ್ದನ್ನೇನಾದರೂ ಓದುವ ಮೂಲಕ ಸ್ವಲ್ಪ ಮಾನಸಿಕ ವ್ಯಾಯಾಮ ಮಾಡಿಕೊಳ್ಳಿ. ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಇಂದು ಹಣದ ತುಂಬಾ ಅಗತ್ಯವಿರಬಹುದು ಮತ್ತು ಜೀವನದಲ್ಲಿ ಹಣದ ಏನು ಮೌಲ್ಯವಿದೆ ಎಂದು ನಿಮಗೆ ಅರ್ಥವಾಗಬಹುದು.

### ಸಿಂಹ ರಾಶಿ

ನಿಮ್ಮ ಆಸಕ್ತಿಗಳನ್ನು ಮುಂದುವರಿಸಲು ಅಥವಾ ನೀವು ತುಂಬ ಆನಂದಿಸುವ ಕೆಲಸಗಳನ್ನು ಮಾಡಲು ಹೆಚ್ಚು ಸಮಯ ಕಳೆಯಬೇಕು. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ಸಂಬಂಧಿಗಳಿದ್ದಲ್ಲಿ ಸಣ್ಣ ಪ್ರಯಾಣ ನಿಮ್ಮ ದೈನಂದಿನ ಒತ್ತಡದ ಜೀವನದಿಂದ ನಿಮಗೆ ಸುಖ ಮತ್ತು ವಿಶ್ರಾಂತಿಯನ್ನು ತರುತ್ತದೆ.

### ಕನ್ಯಾ ರಾಶಿ

ರಕ್ತದೊತ್ತಡವಿರುವ ರೋಗಿಗಳು ತಮ್ಮ ರಕ್ತದೊತ್ತಡ ಕಡಿಮೆ ಮಾಡಲು ಮತ್ತು ಕೊಲೆಸ್ಟರಾಲ್ ನಿಯಂತ್ರಣದಲ್ಲಿರಿಸಲು ಕೆಂಪು ವೈನ್ ತೆಗೆದುಕೊಳ್ಳಬಹುದು. ಇದು ಅವರಿಗೆ ಮತ್ತಷ್ಟು ವಿಶ್ರಾಂತಿ ತರುತ್ತದೆ. ಆರ್ಥಿಕ ದೃಷ್ಟಿಯಿಂದ ಇಂದಿನ ದಿನ ಮಿಶ್ರವಾಗಿ ಉಳಿಯುತ್ತದೆ. ಇಂದು ನೀವು ಹಣದ ಪ್ರಯೋಜನವನ್ನು ಪಡೆಯಬಹುದು ಆದರೆ ಇದಕ್ಕಾಗಿ ನೀವು ಕಠಿಣ ಪರಿಶ್ರಮ ಮಾಡಬೇಕಾಗುತ್ತದೆ. ಪ್ರೀತಿ ಸಾಂಗತ್ಯ ಮತ್ತು ಬಂಧ ಏರಿಕೆಯಲ್ಲಿರುತ್ತವೆ.

### ತುಲಾ ರಾಶಿ

ಅನಂತ ಜೀವನದ ಉತ್ಕೃಷ್ಟ ವೈಭವವನ್ನು ಆನಂದಿಸಲು ನಿಮ್ಮ ಜೀವನವನ್ನು ಹೆಚ್ಚು ಭವ್ಯಗೊಳಿಸಿ. ಚಿಂತೆಯ ಅನುಪಸ್ಥಿತಿ ಈ ದಿಕ್ಕಿನಲ್ಲಿ ಮೊದಲ ಹೆಜ್ಜೆ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ. ನಿಮ್ಮ ಜ್ಞಾನ ಮತ್ತು ಒಳ್ಳೆಯ ಹಾಸ್ಯ ನಿಮ್ಮ ಬಳಿಯಿರುವ ಜನರನ್ನು ಆಕರ್ಷಿಸಬಹುದು. ನಿಮ್ಮ ಪ್ರೇಮ ಪ್ರಕರಣದ ಬಗ್ಗೆ ಜೋರಾಗಿ ಹೇಳಿಕೊಳ್ಳಬೇಡಿ. ನೀವು ಇಂದು ಹಾಜರಾಗುವ ಉಪನ್ಯಾಸಗಳು ಮತ್ತು ವಿಚಾರಗೋಷ್ಠಿಗಳು ಬೆಳವಣಿಗೆಗೆ ಹೊಸ ವಿಚಾರಗಳನ್ನು ತರುತ್ತವೆ

### ವೃಶ್ಚಿಕ ರಾಶಿ

ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಹಣಕಾಸಿನಲ್ಲಿ ಸುಧಾರಣೆ ನೀವು ಅಗತ್ಯ ವಸ್ತುಗಳನ್ನು ಖರೀದಿಸುವುದನ್ನು ಅನುಕೂಲಕರವಾಗಿಸುತ್ತದೆ. ಮಕ್ಕಳು ನಿಮ್ಮ ದಿನವನ್ನು ಕಠಿಣಗೊಳಿಸುತ್ತಾರೆ. ಅವರ ಆಸಕ್ತಿ ಕಾಯ್ದುಕೊಳ್ಳಲು ಪ್ರೀತಿಯ ಅಸ್ತ್ರ ಬಳಸಿ ಮತ್ತು ಯಾವುದೇ ಅನಗತ್ಯ ಒತ್ತಡ ತಪ್ಪಿಸಿ. ಪ್ರೀತಿಯಿಂದ ಪ್ರೀತ ಜನಿಸುತ್ತದೆಂದು ನೆನಪಿಡಿ. ಸಮಯ, ಕೆಲಸ, ಹಣ, ಸ್ನೇಹಿತರು, ಕುಟುಂಬ, ಬಂಧುಗಳು; ಎಲ್ಲವೂ ಒಂದು ಕಡೆ ಮತ್ತು ನಿಮ್ಮ ಸಂಗಾತಿಯ ಜೊತೆ ನೀವು ಇನ್ನೊಂದು ಕಡೆಗಿರುತ್ತೀರಿ.

### ಧನು ರಾಶಿ

ಹಿರಿಯರು ಉತ್ತಮ ಲಾಭ ಪಡೆಯಲು ತಮ್ಮ ಹೆಚ್ಚುವರಿ ಶಕ್ತಿಯನ್ನು ಸಕಾರಾತ್ಮಕ ಬಳಕೆಗೆ ವಿನಿಯೋಗಿಸಬೇಕು. ಹಣಕಾಸು ಸ್ಥಿತಿ ಊಹಾಪೋಹ ಅಥವಾ ಅನಿರೀಕ್ಷಿತ ಲಾಭದ ಮೂಲಕ ಸುಧಾರಿಸುತ್ತವೆ. ಪತ್ನಿಯೊಂದಿಗೆ ಜಗಳ ಮಾನಸಿಕ ಒತ್ತಡಕ್ಕೆ ಕಾರಣವಾಗಬಹುದು. ಅನವಶ್ಯಕ ಒತ್ತಡ ತೆಗೆದುಕೊಳ್ಳುವ ಅಗತ್ಯವಿಲ್ಲ. ಜೀವನದಲ್ಲಿ ಮಹತ್ವದ ವಿಷಯವೆಂದರೆ ನಾವು ಮಾರ್ಪಡಿಸಲು ಸಾಧ್ಯವಿಲ್ಲದ ವಿಷಯಗಳನ್ನು ಒಪ್ಪಿಕೊಳ್ಳಲು ಕಲಿಯುವುದಾಗಿದೆ. ನಿಮ್ಮ ಸಂಗಾತಿ ನಿಮ್ಮ ಬಗ್ಗೆ ಒಳ್ಳೆಯದನ್ನು ಯೋಚಿಸುತ್ತಾನೆ, ಆದ್ದರಿಂದ ಕೆಲವೊಮ್ಮೆ ನಿಮ್ಮ ಮೇಲೆ ಕೋಪವನ್ನು ಸಹ ತೋರಿಸಬಹುದು.

### ಮಕರ ರಾಶಿ

ಧ್ಯಾನ ಪರಿಹಾರ ತರುತ್ತದೆ. ನಿಮ್ಮ ಹೂಡಿಕೆಗಳು ಬಗ್ಗೆ ನಿಮ್ಮ ಭವಿಷ್ಯದ ಗುರಿಗಳ ಬಗ್ಗೆ ರಹಸ್ಯಮಯವಾಗಿರಿ. ಒಂದು ಅಂಚೆಯ ಮೂಲಕ ಬಂದ ಪತ್ರ ಇಡೀ ಕುಟುಂಬಕ್ಕೆ ಸಂತೋಷದ ಸುದ್ದಿ ತರುತ್ತದೆ. ನಿಮ್ಮ ಪ್ರಿಯತಮೆಯ ಜೊತೆ ತಿಳುವಳಿಕೆ. ನೀವು ಶ್ರಮ ಮತ್ತು ತಾಳ್ಮೆಯ ಮೂಲಕ ನಿಮ್ಮ ಗುರಿಗಳನ್ನು ತಲುಪುತ್ತೀರಿ. ನೀವು ನಿಮ್ಮ ಮನೆಯ ಕಿರಿಯ ಸದಸ್ಯರೊಂದಿಗೆ ಸಮಯವನ್ನು ಕಳೆಯುವುದು ಕಲಿಯಬೇಕು.

### ಕುಂಭ ರಾಶಿ

ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ತರಾತುರಿಯಲ್ಲಿ ಹೂಡಿಕೆಗಳನ್ನು ಮಾಡಬೇಡಿ - ನೀವು ಎಲ್ಲಾ ಸಾಧ್ಯವಿರುವ ಕೋನಗಳಿಂದ ಹೂಡಿಕೆಯನ್ನು ಪರಿಶೀಲಿಸದೇ ಹೋದರೆ ನಷ್ಟ ಖಚಿತ. ಸಂಜೆ ಸಾಮಾಜಿಕ ಚಟುವಟಿಕೆ ನೀವು ನಿರೀಕ್ಷಿಸಿದ್ದಕ್ಕಿಂತ ಉತ್ತಮವಾಗಿರುತ್ತದೆ. ನಿಮ್ಮ ಪ್ರಿಯತಮೆ ಇಡೀ ದಿನ ನಿಮಗಾಗಿ ಪರಿತಪಿಸುತ್ತಾಳೆ.

### ಮೀನ ರಾಶಿ

ನಿಮ್ಮಲ್ಲಿ ಶಕ್ತಿಯ ಕೊರತೆಯಿರದೇ ಆತ್ಮವಿಶ್ವಾಸದ ಕೊರತೆಯಿರುವುದರಿಂದ ನಿಮ್ಮ ನಿಜವಾದ ಸಾಮರ್ಥ್ಯವನ್ನು ಅರಿತುಕೊಳ್ಳಿ. ಹೊಸ ಆರ್ಥಿಕ ಒಪ್ಪಂದ ಕುದುರಿಸಲಾಗುತ್ತದೆ ಮತ್ತು ಹೊಸ ಹಣ ಬರುತ್ತದೆ. ನಿಮ್ಮ ಮಗುವಿನಂಥ ಮತ್ತು ಮುಗ್ಧ ವರ್ತನೆ ಕುಟುಂಬದ ಸಮಸ್ಯೆಯನ್ನು ಪರಿಹರಿಸುವಲ್ಲಿ ಒಂದು ಪ್ರಮುಖ ಪಾತ್ರ ವಹಿಸುತ್ತದೆ. ಇಂದು ನಿಮ್ಮ ಪ್ರೀತಿಯ ಜೀವನದಲ್ಲಿ ಅದ್ಭುತ ದಿನವಾಗಿದೆ.


## ಮೈಲಿಮನೆ ಪ್ರಾ.ಕೃ.ಸ ಸಂಘದ ನೂತನ ಅಧ್ಯಕರಾಗಿ ಎಂ.ಎಸ್ ಜಯಚಂದ್ರ, ಉಪಾಧ್ಯಕ್ಷರಾಗಿ ಷಕೀಲ್ ಅಹಮದ್ ಆಯ್ಕೆ

**ಚಿಕ್ಕಮಗಳೂರು:** ಮೈಲಿಮನೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ಅಧ್ಯಕರಾಗಿ ಎಂ.ಎಸ್ ಜಯಚಂದ್ರ ಹಾಗೂ ಉಪಾಧ್ಯಕ್ಷರಾಗಿ ಷಕೀಲ್‌ಅಹಮದ್ ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಚುನಾವಣಾಧಿಕಾರಿ ನಾಗರಾಜ್ ಡಿ.ಟಿ. ಘೋಷಿಸಿದರು

ನಂತರ ನಡೆದ ಅಭಿನಂದನಾ ಸಮಾರಂಭದಲ್ಲಿ ನೂತನ ಅಧ್ಯಕ್ಷ ಉಪಾಧ್ಯಕ್ಷರನ್ನು ಸಮಾಜ ಸೇವಕರಾದ ಮೈಲಿಮನೆ ಪೂರ್ಣೇಶ್ ಅಭಿನಂದಿಸಿ ಮಾತನಾಡಿ ರೈತರ ಸಮಸ್ಯೆಗಳಿಗೆ ಸ್ಪಂಧಿಸಿ ಸಮಸ್ಯೆಗಳ ಪರಿಹಾರಕ್ಕೆ ಸೂಕ್ತ ರೀತಿಯಲ್ಲಿ ಪರಿಹಾರ ಒದಗಿಸುತ್ತಾರೆಂಬ ಬಹಳ ನಿರೀಕ್ಷೆ ಇದೆ ಎಂದ ಅವರು ತಮ್ಮ ಆಡಳಿಯ ಅವದಿಯಲ್ಲಿ ಹೆಚ್ಚು ಪರೋಪಕಾರಿ ಕಾರ್ಯಗಳನ್ನು ನಿರ್ವಹಿಸಲಿ ಎಂದು ತಿಳಿಸಿದರು.

ಸಹಕಾರ ಸಂಘದ ವತಿಯಿಂದ ಕೃಷಿಕರಿಗೆ ವ್ಯಾಪಾರಸ್ಥರಿಗೆ ಮತ್ತು ವಾಹನ ಸಾಲವನ್ನು ವಿತರಿಸಲಾಗುತ್ತಿದೆ.ಸಕಾಲದಲ್ಲಿ ಸಾಲ ಮರು ಪಾವತಿ ಮಾಡಿ ಸಂಘದ ಅಭಿವೃದ್ಧಿಯ ಜೊತೆಗೆ ನೀವು ಸಹ ಅಭಿವೃದ್ಧೀ ಹೊಂದಬೇಕೆಂದು ತಿಳಿಸಿದರು.

ಮೈಲಿಮನೆ ಪಂಚಾಯಿತಿ ಮಾಜಿ ಅಧ್ಯಕ್ಷ ಚೇತನ್‌ಗೌಡ ಮಾತನಾಡಿ ಮೈಲಿಮನೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘಕ್ಕೆ ಸುಮಾರು 100 ವರ್ಷಗಳ ಇತಿಹಾಸವಿದೆ. ನೂತನವಾಗಿ ಆಯ್ಕೆಯಾಗಿರುವ ಅಧ್ಯಕ್ಷ ಉಪಾಧ್ಯಕರುಗಳು ಈ ಸಂಘದ ಬೆಳವಣಿಗೆಗೆ ಸಹಕರಿಸಬೇಕು ರೈತರ ಯಾವ ಸಮಸ್ಯೆಗಳನ್ನು ಸಾಮಾನ್ಯವಾಗಿ ಪರಿಗಣಿಸಿ ಕಡೆಗಣಿಸದೇ ಎಲ್ಲಾ



ಸಮಸ್ಯೆಗಳಿಗೂ ವ್ಯವಸ್ಥಿತವಾದ ಪರಿಹಾರ ನೀಡಿ ಸಂಘವನ್ನು ಇನ್ನಷ್ಟು ಭದ್ರಗೊಳಿಸಿ ಸಂಘದ ಅಭಿವೃದ್ಧಿಗೆ ಸಹಕರಿಸಬೇಕು ಎಂದು ತಿಳಿಸಿದರು.

ಮೈಲಿಮನೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ಅಧ್ಯಕ್ಷ ಎಂ.ಎಸ್ ಜಯಚಂದ್ರ ಮಾತನಾಡಿ. ಸಂಘದ ಸದಸ್ಯರೆಲ್ಲರು ನನ್ನನ್ನು ಅವಿರೋಧವಾಗಿ ಆಯ್ಕೆ ಮಾಡಲು ಸಹಕರಿಸಿದ ಎಲ್ಲರಿಗೂ ಧನ್ಯವಾದಗಳು ಈ ಸಹಕಾರ ಸಂಘದಲ್ಲಿ 4 ಸಾವಿರಕ್ಕು ಹೆಚ್ಚು ಸದಸ್ಯರಿದ್ದು ಅಗತ್ಯ ಇರುವವರಿಗೆ ಸಾಲ ಸೌಲಭ್ಯಗಳನ್ನು ಎಲ್ಲಾ ನಿರ್ದೇಶಕರುಗಳ ಸಹಕಾರ ಪಡೆದು ನೀಡುವುದಾಗಿ ತಿಳಿಸಿದರು.

ಮೈಲಿಮನೆ ಪ್ರಾಥಮಿಕ ಕೃಷಿಪತ್ತಿನ ಸಹಕಾರ ಸಂಘದ ಉಪಾಧ್ಯಕ್ಷ ಷಕೀಲ್ ಅಹಮದ್ ಮಾತನಾಡಿ. ಸಂಘದ ಉಪಾಧ್ಯಕ್ಷ ಸ್ತಾನ ದೊರಕಿರುವುದು ಸಂತೋಷವಾಗಿದೆ ನನ್ನ ಕರ್ತವ್ಯ ಅವಧಿಯಲ್ಲಿ ಸಂಘದ ಅಭಿವೃದ್ಧಿಗೆ ಶ್ರಮಿಸುತ್ತೇನೆ ಎಂದರು

ಈ ಸಂಧರ್ಭದಲ್ಲಿ ಮಾಜಿ ಶಾಸಕರಾದ ಬಿ.ಬಿ ನಿಂಗಯ್ಯ ಜಿಲ್ಲಾ ಒಕ್ಕಲಿಗರ ಸಂಘದ ಉಪಾಧ್ಯಕ್ಷರಾದ ಟಿ.ಡಿ ಮಲ್ಲೇಶ್, ನಿರ್ದೇಶಕರಾದ ರತೀಶ್ ಕುಮಾರ್ ಡಿಸಿಸಿ ಬ್ಯಾಂಕ್

ಉಪಾಧ್ಯಕ್ಷರಾಧ ಸತೀಶ್ ನಿರ್ದೇಶಕರಾದ ಮುಗುಳುವಳ್ಳಿ ನಿರಂಜನ್, ನಿರ್ದೇಶಕರುಗಳಾದ ಎಂ.ಜಿ ಪೂರ್ಣೇಶ್, ಹಫೀಜುರ್ ರೆಹಮಾನ್, ಮಹಮದ್ ತಾಹೇರ್ ಏಕ್ಬಾಲ್, ಅನು ರಾಜೇಗೌಡ, ಸರ್ವರಿಬೇಗಮ್, ದೇವರಾಜು, ಕಿಶನ್, ಅರ್ಪಿತ, ಡಿಸಿಸಿ ಬ್ಯಾಂಕ್ ಮೇಲ್ವಿಚಾರಕರಾದ ಪವನ್ ಕುಮಾರ್, ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಬಿ.ಹೆಚ್ ವೆಂಕಟೇಶ್ ನೂತನ ಅಧ್ಯಕ್ಷ, ಉಪಾಧ್ಯಕ್ಷರನು ಅಭಿನಂದಿಸಿದರು.

## ಕಲಾಕುಂಚ ಮಹಿಳಾ ವಿಭಾಗದಿಂದ ವಿಶ್ವ ಮಹಿಳಾ ದಿನಾಚರಣೆ ಪ್ರಯುಕ್ತ ಗೃಹಿಣಿ ಸ್ಪರ್ಧೆಗೆ ಆಹ್ವಾನ

**ದಾವಣಗೆರೆ:** ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಅಂಗ ಸಂಸ್ಥೆ ಕಲಾಕುಂಚ ಮಹಿಳಾ ವಿಭಾಗದಿಂದ ಪ್ರತಿ ವರ್ಷದಂತೆ ಈ ವರ್ಷವೂ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆಯ ಪ್ರಯುಕ್ತ ಮಾರ್ಚ್ 8 ಶನಿವಾರ, 9 ಭಾನುವಾರ ?ದಾವಣಗೆರೆಯ ಗೃಹಿಣಿ ಸ್ಪರ್ಧೆ? ಹಮ್ಮಿಕೊಳ್ಳಲಾಗಿದೆ ಎಂದು ಸಂಸ್ಥೆಯ ಅಧ್ಯಕ್ಷರಾದ ಹೇಮಾ ಶಾಂತಪ್ಪ ಪೂಜಾರಿ ತಿಳಿಸಿದ್ದಾರೆ.

ನಾಲ್ಕು ಗೋಡೆಗಳ ಮದ್ಯವಿರುವ ಅಡಿಗೆ ಮನೆಗೆ ಸೀಮಿತವಾದ ಮುತ್ತೈದೆಯರ ಅವರಲ್ಲಿ ಹುದುಗಿರುವ ವಿವಿಧ ಪ್ರತಿಭೆಗಳನ್ನು ಅನಾವರಣಗೊಳಿಸುವ ಸೂಕ್ತವಾದ ವೇದಿಕೆಯನ್ನು ಕಲ್ಪಿಸುವ ಸದುದ್ದೇಶದಿಂದ ಹಮ್ಮಿಕೊಳ್ಳಲಾದ ಈ ಸ್ಪರ್ಧೆಯಲ್ಲಿ ಭಾಗವಹಿಸುವ ಮಹಿಳೆಯರು ದಿನಾಂಕ 25-02-2025ರೊಳಗೆ ಕಲಾಕುಂಚ ಕಛೇರಿಗೆ ಆಗಮಿಸಿ ಪ್ರವೇಶ ಪತ್ರ ಭರ್ತಿ ಮಾಡಿಕೊಡಬೇಕಾಗಿ ಕಲಾಕುಂಚ ಮಹಿಳಾ




ವಿಭಾಗದ ಪ್ರಧಾನ ಕಾರ್ಯದರ್ಶಿ ಶ್ರೀಮತಿ ಲಲಿತಾ ಕಲ್ಲೇಶ್ ತಿಳಿಸಿದ್ದಾರೆ.

ಸ್ಪರ್ಧೆಯಲ್ಲಿ ಭಾಗವಹಿಸುವವರು ಸಾಂಪ್ರದಾಯಕ ಉಡುಗೆ, ತೊಡುಗೆಯೊಂದಿಗೆ ?ಆಕರ್ಷಕ ಗೃಹಿಣಿ?, ಸ್ಪರ್ಧೆ, ಜಾಣ ಗಣಿತ, ಜಾಣ ಒಗಟು, ದಾವಣಗೆರೆ ಇತಿಹಾಸ ಪ್ರಶ್ನೋತ್ತರ, ರಾಮಾಯಣ, ಮಹಾಭಾರತ ಕುರಿತು ಮಾಹಿತಿ, ಮಹಿಳೆಯರು ಬಾಲ್ಯದಲ್ಲಿ ಶಾಲೆಗಳಲ್ಲಿ ಪ್ರಶ್ನೆ ಪತ್ರಿಕೆಯಲ್ಲಿ ಉತ್ತರಿಸುವ ಅನುಭವ ಆಗುತ್ತದೆ. ಸ್ಪರ್ಧೆಯಲ್ಲಿ ವಿಜೇತರಾದವರಿಗೆ, ಭಾಗವಹಿಸಿದವರಿಗೆ ಅವರದೇ ಆಕರ್ಷಕವಾದ ಭಾವಚಿತ್ರದೊಂದಿಗೆ, ಕನ್ನಡ ತಾಯಿ ಭುವನೇಶ್ವರಿ ಸ್ಮರಣಿಕೆ, ಅಭಿನಂದನಾ ಪತ್ರವನ್ನು ವೇದಿಕೆಯಲ್ಲಿ ವಿತರಿಸಲಾಗುವುದು ಹೆಚ್ಚಿನ ಮಾಹಿತಿಗೆ 9743897578, 9844691391, 9538732777 ಈ ಸನೀಹವಾಣಿಗಳಿಗೆ ಸಂಪರ್ಕಿಸಬಹುದು ಎಂದು ಈ ಸಂಸ್ಥೆ ಸಂಘಟನಾ ಕಾರ್ಯದರ್ಶಿ ಶ್ರೀಮತಿ ಕುಸುಮಾ ಲೋಕೇಶ್ ಪ್ರಕಟಿಸಿದ್ದಾರೆ.

## ಅಂಗಡಿ-ವಾಣಿಜ್ಯ ಸಂಸ್ಥೆಗಳಿಗೆ ಅನಿರೀಕ್ಷ ಭೇಟಿ-ತಪಾಸಣೆ

**ಶಿವಮೊಗ್ಗ:** ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ಹಾಗೂ ತಿದ್ದುಪಡಿ ಕಾಯ್ದೆ 2016ರನ್ವಯ ಶಿಕಾರಿಪುರ ತಾಲ್ಲೂಕಿನ ನಗರ ಪ್ರದೇಶ ಹಾಗೂ ಶಿರಾಳಕೊಪ್ಪದಲ್ಲಿನ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ನಡೆಸಲಾಯಿತು.

ಪ್ಯಾನ್ ಇಂಡಿಯಾ ರೆಸ್ಕ್ಯು & ರಿಹ್ಯಾಬಿಲಿಟೇಷನ್ ಕ್ಯಾಂಪೇನ್ 2.0 ((Pan India Rescue & Rehabilatation Campaign 2.0)) ಪ್ರಯುಕ್ತ ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ನವದೆಹಲಿ ಇವರು ಸೂಚನೆ ಮೇರೆಗೆ ದಿನಾಂಕ: 04-02-2025ರಂದು ಶಿಕಾರಿಪುರ ತಾಲ್ಲೂಕಿನಲ್ಲಿ ಕಾರ್ಮಿಕ ಇಲಾಖೆ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಪೊಲೀಸ್ ಇಲಾಖೆ ಮತ್ತು ಮಕ್ಕಳ ಸಹಾಯವಾಣಿ ಇವರ ಸಂಯುಕ್ತಾಶ್ರಯದಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರಾಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ, 1986 ಹಾಗೂ ತಿದ್ದುಪಡಿ ಕಾಯ್ದೆ 2016ರನ್ವಯ ಅಂಗಡಿ ಮತ್ತು ವಾಣಿಜ್ಯ ಸಂಸ್ಥೆಗಳಿಗೆ ಅನಿರೀಕ್ಷಿತ ಭೇಟಿ ನೀಡಿ ತಪಾಸಣೆ ನಡೆಸಲಾಯಿತು.

ತಪಾಸಣೆ ವೇಳೆ ಅಂಗಡಿ, ಸಂಸ್ಥೆಯ ಮಾಲೀಕರಿಗೆ ಮತ್ತು ಸಾರ್ವಜನಿಕರಿಗೆ ಬಾಲಕಾರ್ಮಿಕರನ್ನು ನೇಮಿಸಿಕೊಳ್ಳುವುದು ಅಥವಾ ಕೆಲಸ ಮಾಡಲು ಅವಕಾಶ




ಮಾಡಿಕೊಡುವುದು ಶಿಕ್ಷಾರ್ಹ ಅಪರಾಧವಾಗಿರುತ್ತದೆ. ನೇಮಿಸಿಕೊಂಡ ಮಾಲೀಕರ ವಿರುದ್ಧ ರೂ.20,000/- ರಿಂದ ರೂ.50,000/-ಗಳವರೆಗೆ ದಂಡವನ್ನು ಅಥವಾ 6 ತಿಂಗಳಿನಿಂದ 2 ವರ್ಷದವರೆಗೆ ಜೈಲು ಶಿಕ್ಷೆಯನ್ನು ವಿಧಿಸಲಾಗುತ್ತದೆ ಎಂದು ಅರಿವು ಮೂಡಿಸಲಾಯಿತು.

ತಪಾಸಣೆಯಲ್ಲಿ ಶಿಕಾರಿಪುರ ಕಾರ್ಮಿಕ ನಿರೀಕ್ಷಕ ಫಕೀರಪ್ಪ ಗೋಡಿ, ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಯೋಜನಾ ನಿರ್ದೇಶಕ ರಘುನಾಥ ಎ.ಎಸ್, ಸಾರ್ವಜನಿಕ ಶಿಕ್ಷಣ ಇಲಾಖೆಯ ನಾಸಿರ್ ಅಹಮದ್, ಪೊಲೀಸ್ ಇಲಾಖೆಯ ವೀರೇಶ್ ಹಾಗೂ ಮಕ್ಕಳ ಸಹಾಯವಾಣಿಯ ಅರ್ಪಿತ ಹಾಜರಿದ್ದರು ಎಂದು ಕಾರ್ಮಿಕ ಅಧಿಕಾರಿಗಳು ತಿಳಿಸಿದ್ದಾರೆ.

## ರಾಜನೀತಿಯೊಂದಿಗೆಧರ್ಮನೀತಿ ಸಮ್ಮಿಲನವಾದಾಗದೇಶದಲ್ಲಿ ಶಾಂತಿ

**ಚಿಕ್ಕಮಗಳೂರು** : ರಾಜನೀತಿಯೊಂದಿಗೆ ಧರ್ಮನೀತಿ ಸಮ್ಮಿಲನವಾದಾಗದೇಶದಲ್ಲಿ ಶಾಂತಿ-ಸುಸಂಸ್ಕೃತವಾಗುತ್ತದೆಎಂದು ಶಾಸಕ ಹೆಚ್.ಡಿತಮ್ಮಯ್ಯ ಅಭಿಪ್ರಾಯಿಸಿದರು.

ಅವರುಇಂದುಇಲ್ಲಿನತೇರಾಪಂಥ್ ಭವನದಲ್ಲಿತೇರಾಪಂಥ್ ಸಭಾ ವತಿಯಿಂದಏರ್ಪಡಿಸಲಾಗಿದ್ದತೇರಾಪಂಥ್ ಧರ್ಮಸಂಘದ 161ನೇ ಮರ್ಯಾದ ಮಹೋತ್ಸವದಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ಮಾತನಾಡಿದರು.

ಭಾರತದೇಶದಲ್ಲಿಚಾತುರ್ಮಾಸ ಪೂಜೆ ಮಾಡುವ ಮೂಲಕ ಹಿಂದೆರಾಜರಕಾಲದಲ್ಲಿಧರ್ಮನೀತಿ ಅಳವಡಿಸಿಕೊಳ್ಳುತ್ತಿದ್ದರು ಎಂದು ಹೇಳಿದರು.

ಭಾರತದೇಶದಲ್ಲಿ ಸುಮಾರು 800 ಕ್ಕೂ ಹೆಚ್ಚು ಸಾಧು-ಸಾಧ್ವಿಗಳನ್ನು ಹೊಂದಿರುವಜೈನ ಸವರಾಜದಲ್ಲಿಆಚಾರ್ಯರುಚಾತುರ್ಮಾಸ ಪೂಜೆ ಮಾಡಲು ದಿನಾಂಕ ನಿಗಧಿ ಮಾಡುವಇಂದು ಶುಭದಿನವಾಗಿದೆಎಂದುಎಲ್ಲಾಜೈನ್ ಸಮುದಾಯದ ಬಾಂಧವರಿಗೆ ಶುಭಾಶಯಕೋರಿದರು.

ಅಹಿಂಸಾತ್ಮಕವಾದ ಪವಿತ್ರಜೈನಧರ್ಮವಾಗಿದ್ದು, ಅವರಊಟ-ಉಪಹಾರ ಸಂಪೂರ್ಣ ಸಸ್ಯಹಾರಿಯಾಗಿದ್ದು, ಹಿಂಸೆಯ ಮಾರ್ಗವನ್ನು ದೂರವಿರಿಸಿ ನಡೆಯುತ್ತಿರುವಜೈನ್ ಸಮಾಜದ ಆಚಾರ-ವಿಚಾರಗಳ ಬಗ್ಗೆ ಶ್ಲಾಘನೆ



ವ್ಯಕ್ತಪಡಿಸಿದರು.

ಹೂವಿನೊಂದಿಗೆ ನಾರು ಸ್ವರ್ಗಕ್ಕೆ ಹೋದಂತೆಜೈನ್ ಸಮಾಜದಎಲ್ಲಾ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಮೂಲಕ ಆಶೀರ್ವಚನ ಮತ್ತು ಆಶೀರ್ವಾದ ಕೊಡುತ್ತಿದ್ದೀರಿಎಂದು ಪ್ರಶಂಸೆ ವ್ಯಕ್ತಪಡಿಸಿದರು.

ತಾವು ನಗರಸಭಾಧ್ಯಕ್ಷರಾಗಿದ್ದಾಗತೇರಾಪಂಥ್‌ರಸ್ತೆಗೆಆಚಾರ್ಯ ತುಳಸಿ ಮಾರ್ಗಎಂದು ನಾಮಕರಣ ಮಾಡಿರುವುದನ್ನುಇದೇ ಸಂದರ್ಭದಲ್ಲಿ ಸ್ಮರಿಸಿದರು.

ತೇರಾಪಂಥ್ ಮಹಾಸಭಾಅಧ್ಯಕ್ಷ ಮಹೇಂದ್ರ ಡೋಸಿ,ಮಾತನಾಡಿತೇರಾಪಂಥ್‌ಧರ್ಮಸಂಘದ 161ನೇ ಮರ್ಯಾದ ಮಹೋತ್ಸವಎಂದರೆ ಭಾರತ ಸಂವಿಧಾನದ ಮಾದರಿಯಲ್ಲಿಜೈನ್ ಸಮುದಾಯತೇರಾಪಂಥ್ ಸಾಧು-ಸಾಧ್ವಿಯರಿಗೆ ನೀಡಲಾದ ಸಂವಿಧಾನವಾಗಿದೆಎಂದು ಹೇಳಿದರು.

ತೇರಾಪಂಥ್ ಸಂಸ್ಥಾಪಕ ಆಚಾರ್ಯ ಶ್ರೀ ಭಿಕ್ಷುರವರುಎಲ್ಲಾ ಸಾಧು-ಸಾಧ್ವಿಯರಿಗೆ ಸಂವಿಧಾನರಚನೆ ಮಾಡಿದ್ದು, ಇದರ ಮೂಲಕ ಎಲ್ಲಾ ಸಾಧು-ಸಾಧ್ವಿಯರು ನಡೆದುಕೊಳ್ಳಬೇಕಾಗಿದೆ ಎಂದು ತಿಳಿಸಿದರು.

ಆಚಾರ್ಯರ ಶಿಷ್ಯರಾದ ಸುಮಾರು 700 ಸಾಧು-ಸಾಧ್ವಿಯರು ಅನುಯಾಯಿಗಳಾಗಿದ್ದು ಎಲ್ಲೆಲ್ಲಿಚಾತುರ್ಮಾಸ ಕಾರ್ಯಕ್ರಮಗಳು ಆಯೋಜನೆಗೊಳ್ಳುತ್ತವೆ ಎಲ್ಲಿ ಭಕ್ತರಿಗೆಜೈನ್‌ಧರ್ಮದ ಬಗ್ಗೆ ಉಪದೇಶ ಪ್ರಚಾರ ನೀಡಬೇಕುಎಂದರು.

ಒಂದು ವರ್ಷದಲ್ಲಿ 4 ತಿಂಗಳು ಒಂದೇಕಡೆ ಚಾತುರ್ಮಾಸಕಾರ್ಯಕ್ರಮವನ್ನು ಆಯೋಜಿಸಿ ನಡೆಸಲಾಗುವುದು.ಉಳಿದ ದಿನಗಳಲ್ಲಿ ದೇಶ ಸಂಚಾರ ಮಾಡಿಧರ್ಮ ಪ್ರಚಾರ ಮಾಡುವ ಸಾಧು-ಸಾಧ್ವಿಯರಿಗೆ ಮನೆ ಮಠಗಳಿರುವುದಿಲ್ಲ ಎಂದು ತಿಳಿಸಿದರು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು 11ನೇ ಆಚಾರ್ಯ ಶಿಷ್ಯರಾದ ಸಯಂ ಲತಾಜಿ ವಹಿಸಿ ಆಶೀರ್ವಚನ ನೀಡಿದರು.ಇವರೊಂದಿಗೆ ಮೂವರು ಶಿಷ್ಯರು ಭಾಗವಹಿಸಿದ್ದರು.

ಮುಖ್ಯ ಭಕ್ತರಾಗಿ ಹಾಸನದಎಂ.ಎಸ್. ರಾಮಯ್ಯಇಂಜಿನಿಯರಿಂಗ್‌ಕಾಲೇಜಿನ ಪ್ರಾಂಶುಪಾಲರಾದ ಡಾ. ವೇಣುಗೋಪಾಲ್‌ರಾವ್ ಹಾಗೂ ಇದೇಕಾಲೇಜಿನ ಹೆಚ್.ಓ.ಡಿಡಾ.ಬಬಿತಾಜೈನ್, ನಗರಸಭೆ ಸದಸ್ಯ ವಿಫುಲ್‌ಕುಮಾರ್‌ಜೈನ್‌ಪಾಲ್ಗೊಂಡಿದ್ದರು.

## ವಿಧಾನಸೌಧ ಆವರಣದಲ್ಲಿ ಪುಸ್ತಕ ಮೇಳ: ಸ್ಪೀಕರ್ ಯು.ಟಿ. ಖಾದರ್

**ಮಂಗಳೂರು:** ಜನಸಾಮಾನ್ಯರಿಗೆ ವಿಧಾನಸೌಧ ಆವರಣ ಮುಕ್ತವಾಗಿಸಿ, ಅವರಲ್ಲಿ ಓದಿನ ಬಗ್ಗೆ ಆಸಕ್ತಿ ಮೂಡಿಸುವ ಉದ್ದೇಶ ದೊಂದಿಗೆ ಫೆ.28ರಿಂದ ಮಾ.3ರವರೆಗೆ ವಿಧಾನ ಸೌಧ ಆವರಣದಲ್ಲಿ ಪುಸ್ತಕ ಮತ್ತು ಸಾಹಿತ್ಯ ಮೇಳ ಆಯೋಜಿಸಲಾಗುತ್ತಿದೆ ಎಂದು ಸ್ಪೀಕರ್ ಯು.ಟಿ. ಖಾದರ್ ತಿಳಿಸಿದ್ದಾರೆ.

ಅವರು ಸೋಮವಾರ ಮಂಗಳೂರು ಸರ್ಕ್ಯುಟ್ ಹೌಸ್ ನಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿ, ವಿಧಾನಸೌಧದ ಆವರಣ ದಲ್ಲಿ ಫೆ.28ರಿಂದ ಮಾ.3ರವರೆಗೆ ಪುಸ್ತಕ ಮತ್ತು ಸಾಹಿತ್ಯ ಮೇಳ ನಡೆಯಲಿದೆ. ನಾಡಿನ ಸಾಹಿತಿಗಳು, ಬುದ್ಧಿಜೀವಿಗಳು, ಬರಹಗಾರರು, ಸಚಿವರು, ಶಾಸಕರು ಸೇರಿದಂತೆ ಪುಸ್ತಕಗಳನ್ನು ಪ್ರೀತಿಸುವವರು ಭಾಗವಹಿಸಲಿರುವ ಈ ಮೇಳಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಫೆ.28ರಂದು ಚಾಲನೆ ನೀಡಲಿದ್ದಾರೆ ಎಂದು ಹೇಳಿದರು.

ಪುಸ್ತಕ ಮೇಳದೊಂದಿಗೆ ಸಾಹಿತ್ಯ ಚರ್ಚೆ, ಗೋಷ್ಠಿ, ಪುಸ್ತಕ ಬಿಡುಗಡೆ ಕಾರ್ಯಕ್ರಮಗಳಿಗೂ ಇಲ್ಲಿ ಅವಕಾಶ ನೀಡಲಾಗಿದೆ. ಪುಸ್ತಕ ಮೇಳದ ಯಶಸ್ಸಿಗೆ ಹಿರಿಯ ಅಧಿಕಾರಿಗಳ ಸಮಿತಿ ರಚಿಸಲಾಗಿದೆ ಎಂದು ಅವರು ಹೇಳಿದರು. ಪುಸ್ತಕ ಮೇಳದಲ್ಲಿ ಖಾಸಗಿ ಪುಸ್ತಕ ಪ್ರಕಾಶನ ಗಳಿಗೂ ಪುಸ್ತಕಗಳ ಪ್ರದರ್ಶನಕ್ಕೆ ಅವಕಾಶ ನೀಡಲಾಗುವುದು. ಲೇಖಕರು ಅಥವಾ ಸಾಹಿತಿಗಳು ತಮ್ಮ ಪುಸ್ತಕಗಳನ್ನು ಬಿಡುಗಡೆಗೊಳಿಸಲು ಅವಕಾಶ ಕಲ್ಪಿಸಲಾಗುವುದು. ಇದಲ್ಲದೆ, ಉತ್ತಮ ಸಾಹಿತ್ಯ ಕೃತಿಗೆ ಪ್ರಶಸ್ತಿ ನೀಡಲು ಉದ್ದೇಶಿಸಲಾಗಿದೆ ಎಂದು ಸ್ಪೀಕರ್ ವಿವರಿಸಿದರು.

ಶಾಸಕರ ಅನುದಾನದಲ್ಲಿ ಖರೀದಿಗೆ ಅವಕಾಶ:

ಸ್ಪರ್ಧಾತ್ಮಕ ಪುಸ್ತಕಗಳು ಸೇರಿದಂತೆ ನಾನ ಪ್ರಕಾರದ ಬೇಡಿಕೆಯ ಪುಸ್ತಕಗಳನ್ನು ಶಾಸಕರ ಇಲ್ಲಿ ಖರೀದಿಸಿ ತಮ್ಮ ಕ್ಷೇತ್ರಗಳಲ್ಲಿನ ಗ್ರಂಥಾಲಯಗಳು, ಸರಕಾರಿ ಕಾಲೇಜುಗಳಿಗೆ ಪೂರೈಸಬಹುದು. ಇದಕ್ಕೆ ಪೂರಕವಾಗಿ ಶಾಸಕ ನಿಧಿಯಲ್ಲಿನ 2ರಿಂದ 3 ಲಕ್ಷರೂ.ವರೆಗೆ ಪುಸ್ತಕಗೆ ಖರೀದಿಗೆ ಅವಕಾಶ ಮಾಡಿಕೊಡಲಾಗುವುದು ಎಂದು ಸಭಾಧ್ಯಕ್ಷರು ಹೇಳಿದರು. ಪುಸ್ತಕ ಮೇಳದ ಅವಧಿಯಲ್ಲಿ ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗುವುದು, ಮೇಳದ ಸಂದರ್ಭದಲ್ಲಿ ನಿತ್ಯ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.ಇಲ್ಲಿ ಭೇಟಿ ನೀಡುವವರಿಗೆ ತರಹೇವಾರಿ

ಪುಸ್ತಕ ಮೇಳದ ಅವಧಿಯಲ್ಲಿ ಸಾರ್ವಜನಿಕರಿಗೆ ಮುಕ್ತ ಅವಕಾಶ ಕಲ್ಪಿಸಲಾಗುವುದು, ಮೇಳದ ಸಂದರ್ಭದಲ್ಲಿ ನಿತ್ಯ ಸಂಜೆ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಲಿದೆ.ಇಲ್ಲಿ ಭೇಟಿ ನೀಡುವವರಿಗೆ ತರಹೇವಾರಿ ತಿಂಡಿ-ಖಾದ್ಯಗಳನ್ನು ಒಳಗೊಂಡ ಆಹಾರ ಮೇಳವೂ ಇರಲಿದೆ. ಶಾಲಾ-ಕಾಲೇಜು ವಿದ್ಯಾರ್ಥಿಗಳಿಗೆ ಆದ್ಯತೆ ನೀಡಲಾಗುವುದು. ವಿಚಾರಗೋಷ್ಠಿಗಳು, ಚರ್ಚೆಗಳೂ ನಡೆಯಲಿವೆ ಎಂದು ಯು.ಟಿ. ಖಾದರ್ ತಿಳಿಸಿದರು.

## ವಸತಿ ಶಾಲೆಗಳ 6ನೇ ತರಗತಿಗೆ ಪ್ರವೇಶಕ್ಕೆ ಅರ್ಜಿ ಆಹ್ವಾನ

**ಶಿವಮೊಗ್ಗ:** ಜಿಲ್ಲಾ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಶಿವಮೊಗ್ಗ ಇಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಪಿಜೆ ಅಬ್ದುಲ್ ಕಲಾಂ ವಸತಿ ಶಾಲೆ/ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಿಗೆ 2025-26 ನೇ ಸಾಲಿನ 6ನೇ ತರಗತಿ ಪ್ರವೇಶಾತಿಗೆ ಅರ್ಜಿ ಆಹ್ವಾನಿಸಲಾಗಿದೆ.

ಶೇ.75 ಅಲ್ಪಸಂಖ್ಯಾತರ ಸಮುದಾಯದ ಮುಸ್ಲಿಂ, ಕ್ರಿಶ್ಚಿಯನ್, ಜೈನ್, ಬೌದ್ದ, ಸಿಖ್, ಪಾರ್ಸಿ ವಿದ್ಯಾರ್ಥಿಗಳಿಗೆ ಮತ್ತು ಶೇ.25 ರಷ್ಟು ಇತರೆ ಹಿಂದುಳಿದ ವರ್ಗದ ಸಮುದಾಯಗಳ ಅಭ್ಯರ್ಥಿಗಳು ಸೇವಾಸಿಂಧು ಆನ್ಲೈನ್ ಪೋರ್ಟಲ್ https://sevsindhuservices.karnataka.gov.in ನಲ್ಲಿ ಅಥವಾ ಹತ್ತಿರದ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಸತಿ ಶಾಲೆಗಳು, ಅಲ್ಪಸಂಖ್ಯಾತರ ತಾಲ್ಲೂಕು ಮಾಹಿತಿ ಕೇಂದ್ರಗಳು ಮತ್ತು ಜಿಲ್ಲಾ ಅಲ್ಪಸಂಖ್ಯಾತರ ಮಾಹಿತಿ ಕೇಂದ್ರಗಳಲ್ಲಿ ಕೂಡ ಅರ್ಜಿ ಸಲ್ಲಿಸಬಹುದು.

ಮಾ.10 ಅರ್ಜಿ ಸಲ್ಲಿಸಲು ಕಡೆಯ ದಿನವಾಗಿದೆ. ಅಭ್ಯರ್ಥಿಯು ಸರ್ಕಾರದಿಂದ ಅನುಮೋದಿಸಲ್ಪಟ್ಟ ಶಾಲೆಯಿಂದ 5 ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರಬೇಕು/ಉತ್ತೀರ್ಣರಾಗಿರಬೇಕು. ದಾಖಲೆಗಳ ಪರಿಶೀಲನೆ ಸಂದರ್ಭದಲ್ಲಿ ಅಂಕಪಟ್ಟಿಯನ್ನು ಹೊಂದಿರಬೇಕು. ರಾಜ್ಯದ ಖಾಯಂ ನಿವಾಸಿಯಾಗಿರಬೇಕು. 11 ರಿಂದ 13 ವರ್ಷದ ವಯೋಮಾನದವರಾಗಿರಬೇಕು.ಅಭ್ಯರ್ಥಿಗಳು ವಿದ್ಯಾರ್ಥಿಯ ಇತ್ತೀಚಿನ ಭಾವಚಿತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಅಂಗವಿಕಲ ಪ್ರಮಾಣ ಪತ್ರ, ವಿಶೇಷ ವರ್ಗಗಳಿಗೆ ಬೇಕಾಗಿರುವ ಪ್ರಮಾಣ ಪತ್ರ(ಬಾಲ ಅಭ್ಯರ್ಥಿಗಳು ವಿದ್ಯಾರ್ಥಿಯ ಇತ್ತೀಚಿನ ಭಾವಚಿತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ಅಂಗವಿಕಲ ಪ್ರಮಾಣ ಪತ್ರ, ವಿಶೇಷ ವರ್ಗಗಳಿಗೆ ಬೇಕಾಗಿರುವ ಪ್ರಮಾಣ ಪತ್ರ(ಬಾಲ ಕಾರ್ಮಿಕ ಮಕ್ಕಳು/ಅನಾಥ ಮಕ್ಕಳು/ವಿಧವೆಯರ ಮಕ್ಕಳು/ಮಾಜಿ ಸೈನಿಕರ ಮಕ್ಕಳು/ಸಫಾಯಿ ಕರ್ಮಚಾರಿ ಮಕ್ಕಳು/ ಆತ್ಮಹತ್ಯೆ ರೈತರ ಮಕ್ಕಳು/ಸ್ಥಳೀಯ ಅಭ್ಯರ್ಥಿ ಮಕ್ಕಳು/ವಿಶೇಷ ದುರ್ಬಲ ವರ್ಗ)ವನ್ನು ಸಲ್ಲಿಸಬೇಕು.ಪ್ರವೇಶ ಬಯಸುವ ಅಭ್ಯರ್ಥಿಗಳು ಕಡ್ಡಾಯವಾಗಿ ಅಲ್ಪಸಂಖ್ಯಾತರ ನಿರ್ದೇಶನಾಯದ ವತಿಯಿಂದ ನಡೆಸುವ ಪ್ರವೇಶ ಪರೀಕ್ಷೆಯನ್ನು ಬರೆಯಬೇಕು. ವಸತಿ ಶಾಲೆಯ ಆಯ್ಕೆಗೆ ಪ್ರವೇಶ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳೇ ನೇರ ಮಾನದಂಡವಾಗಿರುತ್ತದೆ. ಪ್ರವೇಶ ಪರೀಕ್ಷೆಯು 100 ಅಂಕಗಳ ಬಹು ಆಯ್ಕೆ ಮಾದರಿಯಲ್ಲಿರುತ್ತದೆ.ಮಾಹಿತಿ ಕೇಂದ್ರಗಳ ಸಂಪರ್ಕ ಸಂಖ್ಯೆ: ಮೇಲಿನ ಹನಸವಾಡಿ, ಶಿವಮೊಗ್ಗ 9483623537, ದೊಡ್ಡೇರಿ ಭದ್ರಾವತಿ 9591237905, ಶಿರಾಳಕೊಪ್ಪ 8310350361, ಉಡುಗಣಿ ಶಿಕಾರಿಪುರ 9036866642, ಶಿವಮೊಗ್ಗ 7676888388, ಭದ್ರಾವತಿ 9538853680, ತೀರ್ಥಹಳ್ಳಿ 8861982835, ಸೊರಬ 9513815513, ಶಿಕಾರಿಪುರ 7829136724, ಹೊಸನಗರ 9008447029, ಸಾಗರ 7338222907 ಆಗಿರುತ್ತದೆ ಎಂದು ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿ ತಿಳಿಸಿದ್ದಾರೆ.

## ಇಂದು ಶ್ರಮಿಕ ಸಮ್ಮಾನ್ ಯಾತ್ರೆ

**ದಾವಣಗೆರೆ:** ಕಾರ್ಮಿಕರಿಗೆ ಔದ್ಯೋಗಿಕ ಸುರಕ್ಷತೆ, ಆರೋಗ್ಯ ರಕ್ಷಣೆ ಸೇರಿ ಇತರ ಬೇಡಿಕೆಗಳ ಈಡೇರಿಕೆಗೆ ಒತ್ತಾಯಿಸಿ ಫೆ.5ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಿಂದ ಕರ್ನಾಟಕ ಶ್ರಮಿಕ ಸಮ್ಮಾನ್ ಯಾತ್ರೆಯನ್ನು ಹಮ್ಮಿಕೊಳ್ಳ-ಲಾಗಿದೆ. ಯಾತ್ರೆಯು ಇಂದು ನಗರಕ್ಕೆ ಆಗಮಿಸಲಿದೆ. ಅಂದು ಸಂಜೆ 6 ಗಂಟೆಗೆ ಜಯದೇವ ವೃತ್ತದ ಮಾರ್ಗವಾಗಿ ಸಾಗಲಿದೆ ಎಂದು ಕೆ.ಮಂಜುನಾಥ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ

## ಮಹಿಳೆ ಆತ್ಮಹತ್ಯೆಗೆ ಯತ್ನ

**ಕೊಟ್ಟೂರು (ವಿಜಯನಗರ ಜಿಲ್ಲೆ):** 'ಎರಡು ಫೈನಾನ್ಸ್ ಕಂಪನಿಗಳ ಕಿರುಕುಳಕ್ಕೆ ಬೇಸತ್ತು ಮಹಿಳೆಯೊಬ್ಬರು ಆತ್ಮಹತ್ಯೆಗೆ ಯತ್ನಿಸಿದ್ದು, ಹರಪನಹಳ್ಳಿ ಸರ್ಕಾರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ಅವರು ಅಪಾಯದಿಂದ ಪಾರಾಗಿದ್ದಾರೆ' ಎಂದು ಪೊಲೀಸರು ತಿಳಿಸಿದ್ದಾರೆ. ಪಟ್ಟಣದ ಬಳ್ಳಾರಿ ಕ್ಯಾಂಪಿನ ನಿವಾಸಿ ಆಫ್ರೀನ್ ಬೀ ಆತ್ಮಹತ್ಯೆಗೆ ಯತ್ನಿಸಿದವರು. 'ಧರ್ಮಸ್ಥಳ ಗ್ರಾಮಾಭಿವೃದ್ಧಿ ಮಹಿಳಾ ಸಂಘದ ಸೇವಾ ಪ್ರತಿನಿಧಿ ಜಗದೀಶ್ ಹಾಗೂ ಎಲ್ ಅಂಡ್ ಟಿ ಫೈನಾನ್ಸ್ ಕಂಪನಿಯ ಗಂಗಾಧರಸ್ವಾಮಿ ಅವರು ಸಾಲದ ಕಂತನ್ನು ಪಾವತಿಸುವಂತೆ ತೀವ್ರ ಒತ್ತಡ ಹಾಕಿದ್ದರಿಂದ ವಿಷದ ಪುಡಿ ಸೇವಿಸಿ ಆತ್ಮಹತ್ಯೆಗೆ ಯತ್ನಿಸಿದೆ' ಎಂದು ಸಂತ್ರಸ್ತ ಮಹಿಳೆ ದೂರು ನೀಡಿದ್ದು ಪಟ್ಟಣ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

## ನಿಧನ ಸುದ್ದಿಗಳು

### ರುದ್ರಮ್ಮ ನಿಧನ

**ದಾವಣಗೆರೆ** : ತಾ. ಹಳೇಬಾತಿ ಗ್ರಾಮದ ವಾಸಿ ಅಜ್ಜಪ್ಪರ ನಿಂಗಪ್ಪನವರ ಧರ್ಮಪತ್ನಿ ಶ್ರೀಮತಿ ರುದ್ರಮ್ಮ(90) ಅವರು ದಿನಾಂಕ : 4.2.2025ರ ಮಂಗಳವಾರ ಮಧ್ಯಾಹ್ನ 3.30ಕ್ಕೆ ನಿಧನರಾದರು. ನಾಲ್ವರು ಪುತ್ರರು, ಮೂವರು ಪುತ್ರಿಯರು, ಅಳಿಯಂದಿರು, ಮೊಮ್ಮಕ್ಕಳು ಹಾಗೂ ಅಪಾರ ಬಂಧು ಬಳಗವನ್ನು ಅಗಲಿರುವ ಮೃತರ ಅಂತ್ಯಕ್ರಿಯೆಯನ್ನು ದಿನಾಂಕ : 5.2.2025ರ ಬುಧವಾರ 12.30ಕ್ಕೆ ಹಳೇಬಾತಿಯ ರುದ್ರಭೂಮಿಯಲ್ಲಿ ನೆರವೇರಿಸಲಾಯಿತು.

# ಇ-ಖಾತಾ ಇಲ್ಲದ ಆಸ್ತಿಗಳಿಗೆ ಬಿ-ಖಾತಾ ನೀಡಲು ಸರ್ಕಾರ ಮುಂದು..!

**ಬೆಂಗಳೂರು:** ಬೆಂಗಳೂರು ಬಿಟ್ಟು ರಾಜ್ಯದ ಇತರ ಸ್ಥಳೀಯ ಸಂಸ್ಥೆಗಳ ನಗರ ಪ್ರದೇಶ ವ್ಯಾಪ್ತಿಯಲ್ಲಿ ಇ-ಖಾತಾ ಹೊಂದಿಲ್ಲದ 30 ರಿಂದ 32 ಲಕ್ಷ ಆಸ್ತಿಗಳಿಗೆ ಬಿ- ಖಾತಾ ನೀಡಲು ತೀರ್ಮಾನಿಸಲಾಗಿದೆ ಎಂದು ಕಂದಾಯ ಸಚಿವ ಕೃಷ್ಣಬೈರೇಗೌಡ ಅವರು ಸೋಮವಾರ ಹೇಳಿದರು.ವಿವಿಧ ಜಿಲ್ಲಾಧಿಕಾರಿಗಳ ಜತೆ ಸೋಮವಾರ ಪ್ರಗತಿ ಪರಿಶೀಲನಾ ಸಭೆ ನಡೆಸಿದ ಸಚಿವರು, ಆ ಬಳಿಕ ಸುದ್ದಿಗೋಷ್ಠಿಯಲ್ಲಿ ವಿವರ ನೀಡಿದರು.ಬೆಂಗಳೂರು ಹೊರಗೆ ನಗರ ಪ್ರದೇಶಗಳಲ್ಲಿ ವಿವಿಧ ಸ್ಥಳೀಯ ಸಂಸ್ಥೆಗಳ ಅಡಿಯಲ್ಲಿ 55 ಲಕ್ಷ ನಿವೇಶನಗಳಿವೆ. 22 ಲಕ್ಷ ಸೈಟ್ ಮಾಲೀಕರು ಇ-ಖಾತಾಗಳನ್ನು ಪಡೆದಿದ್ದಾರೆ. 30 ಲಕ್ಷಕ್ಕೂ ಹೆಚ್ಚು ನಿವೇಶನಗಳು ಅಂತಹ ಯಾವುದೇ ದಾಖಲೆಗಳನ್ನು ಹೊಂದಿಲ್ಲ. ಇದನ್ನು ಒಂದೇ ಬಾರಿ ಪರಿಗಣಿಸಿ, ಈ ನಿವೇಶನಗಳಿಗೆ ಬಿ-ಖಾತಾ ನೀಡುವಂತೆ ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದು ಹೇಳಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಆಯಾ ಡಿಸಿಗಳಿಗೆ ಸೂಚನೆ ನೀಡಿದ್ದು, ಬಿ ಖಾತಾ ನೀಡುವಂತೆ ಸೂಚಿಸಿದ್ದಾರೆ ನಾವು ಇದನ್ನು ಅಭಿಯಾನವಾಗಿ ಕೈಗೆತ್ತಿಕೊಂಡು ಮೂರು ತಿಂಗಳೊಳಗೆ ಪೂರ್ಣಗೊಳಿಸಲು ಮತ್ತು ಇ-ಖಾತಾ ಇಲ್ಲದ ಆಸ್ತಿಗಳಿಗೆ ಬಿ-ಖಾಟಾ ನೀಡಲು ಸುತ್ತೋಲೆ ಹೊರಡಿಸಿದ್ದೇವೆಂದು ತಿಳಿಸಿದರು. ದಾಖಲೆಗಳಿಲ್ಲದಿದ್ದರೆ ಇ-ಪ್ರಾಪರ್ಟೀಸ್ ಅಡಿಯಲ್ಲಿ ನೋಂದಾಯಿಸಿಕೊಳ್ಳಬಹುದು ಮತ್ತು ಅಗತ್ಯ ದಾಖಲೆಗಳನ್ನು ಒದಗಿಸಿದರೆ ಬಿ ಖಾತಾ ನೀಡಬಹುದು ಎಂದು ಸಿಎಂ ಇತ್ತೀಚಿನ ಸಭೆಯಲ್ಲಿ ಸೂಚನೆ ನೀಡಿದ್ದಾರೆ. ಹೀಗಾಗಿ ಫೆ. 10 ರೊಳಗೆ ಸುತ್ತೋಲೆ ಹೊರಡಿಸಿ, ಬಾಕಿ ಇರುವ ಆಸ್ತಿಗಳಿಗೆ ಗರಿಷ್ಠ ಮೂರು ತಿಂಗಳ ಒಳಗೆ ಅಭಿಯಾನ ಮಾದರಿಯಲ್ಲಿ ಬಿ-ಖಾತಾ (ಒನ್ ಟೈಮ್ ಮಾದರಿ) ಮಾಡಿಕೊಡಲಾಗುವುದು ಎಂದರು.ಅನಧಿಕೃತ ನಿವೇಶನಗಳ ಬಗ್ಗೆ ಸುಪ್ರೀಂ ಕೋರ್ಟ್ ಕಟ್ಟುನಿಟ್ಟಿನ ನಿರ್ದೇಶನ ನೀಡಿದೆ. ಅದನ್ನು ಪಾಲಿಸಲೇಬೇಕಾದ ತುರ್ತು ಎದುರಾಗಿದೆ. ಹೀಗಾಗಿ ಎಷ್ಟು ಸ್ವತ್ತುಗಳು ಇವೆ ಎಂದು ಗುರುತಿಸಿ ಸರ್ಕಾರವೇ ಬಿ-ಖಾತಾ ಮಾಡಿಕೊಡಲಿದೆ. ಇದಾದ ಮೇಲೆ ರಾಜ್ಯದಲ್ಲಿ ಬಿ-ಖಾತಾ ವ್ಯವಸ್ಥೆ ಇರುವುದಿಲ್ಲ. ಎ-ಖಾತಾ ಮಾತ್ರ ಇರಲಿದ್ದು, ಮುಂದಿನ ದಿನಗಳಲ್ಲಿ ಅನಧಿಕೃತ ನಿವೇಶನಗಳಿಗೆ ಅವಕಾಶವೇ ಇರುವುದಿಲ್ಲ. ನಗರ ವ್ಯಾಪ್ತಿಯಲ್ಲಿ ಈ ಅಭಿಯಾನ ಮುಗಿಯುತ್ತಿದ್ದಂತೆ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲೂ ಇದೇ ಮಾದರಿ ಆರಂಭಿಸಲಾಗುವುದು ಎಂದು ಸಚಿವರು ತಿಳಿಸಿದರು.

# ನಾಗಚೌಡೇಶ್ವರಿ ದೇವಸ್ಥಾನದ 9ನೇ ವರ್ಧಂತ್ಯೋತ್ಸವ

**ಶಿವಮೊಗ್ಗ;** ನಗರದ ಸ್ವಾಮಿವಿವೇಕಾನಂದ ಬಡಾವಣೆಯ ಶ್ರೀನಾಗಚೌಡೇಶ್ವರಿ ಅಮ್ಮನವರ ದೇವಸ್ಥಾನದ ಒಂಬತ್ತೇ ವರ್ಷದ ವರ್ಧಂತ್ಯೋತ್ಸವ ಫೆ. 7ರ ಶುಕ್ರವಾರ ರಂದು ನಡೆಯಲಿದೆ.ಅಂದು ಬೆಳಿಗ್ಗೆ 8.30ಕ್ಕೆ ಶ್ರೀಕುಲದೇವತಾ ಪ್ರಾರ್ಥನೆ, ಸ್ವಸ್ತಿವಾಚನ,ಪುಣ್ಯಾಹ, ಋತ್ವಿಗ್ವರ್ಣನೆ ಹಾಗೂ ಕಲಾತತ್ವ ಹೋಮ,108 ಕಲಶಾಭಿಷೇಕ ಮಧ್ಯಾಹ್ನ 12,30ಕ್ಕೆ ಮಹಾಮಂಗಳಾರತಿ,ತೀರ್ಥ ಹಾಗೂ ಅನ್ನಸಂತರ್ಪಣೆ ಏರ್ಪಡಿಸಲಾ ಗಿದೆ. ಕಲಶಾಭಿಷೇಕ ಸೇವೆಗೆ ರೂ.250 ಹಾಗೂ ಸರ್ವ ಸೇವೆಗೆ 500 ರೂಪಾಯಿ ನಿಗದಿಗೊಳಿಸಲಾಗಿದೆ. ಆಸ್ತಿಕ ಬಂಧುಗಳು ಕಾರ್ಯಕ್ರಮದಲ್ಲಿ ಪಾಲ್ಗೊಂಡು ತನು-ಮನ-ಧನ ಹಾಗೂ ಅಕ್ಕಿ,ಬೇಳೆ, ಬೆಲ್ಲ, ತರಕಾರಿಗಳನ್ನು ಕೊಡಬಹುದಾ ಗಿದ್ದು, ಶ್ರೀದೇವಿಯ ಕೃಪಾಕಟಾಕ್ಷಕ್ಕೆ ಪಾತ್ರರಾಗುವಂತೆ ಶ್ರೀನಾಗಚೌಡೇಶ್ವರಿ ಅಮ್ಮನವರ ಸೇವಾ ಸಮಿತಿ(ರಿ) ಪರವಾಗಿ ಕಾರ್ಯಾಧ್ಯಕ್ಷ ಎಂ.ಜಿ.ಕೇಶವಪ್ಪ ಹೇಳಿಕೆಯಲ್ಲಿ ಕೋರಿದ್ದಾರೆ.

# ಕೂಟಕ್ಕೆ ಕೆಂಪುಕಟ್ಟಡ ನೀಡಲು ಕಾನೂನಾತ್ಮಕ ಕ್ರಮ: ಡಿಸಿ

(1ನೇ ಪುಟದಿಂದ)

ಸ್ವಂತದ್ದಾದ, ದೊಡ್ಡ ಜಾಗ, ಕಟ್ಟಡ ಇದೆ. ಇಲ್ಲಿಯೂ ಅಂತಹ ದಿನ ಶೀಘ್ರವೇ ಬರಲಿದೆ ಎಂದು ಡಿಸಿ ಗಂಗಾಧರಸ್ವಾಮಿ ಭರವಸೆ ನೀಡಿದರು.

ಮಾಯಕೊಂಡ ಶಾಸಕ ಕೆ.ಎಸ್.ಬಸವಂತಪ್ಪ ಮಾತನಾಡಿ, ಸಚಿವ ಎಸ್.ಎಸ್.ಮಲ್ಲಿಕಾರ್ಜುನ, ಸಂಸದೆ ಡಾ.ಪ್ರಭಾ ಮಲ್ಲಿಕಾರ್ಜುನರ ದೂರದೃಷ್ಟಿಯಂತೆ ದಾವಣಗೆರೆ ವರದಿಗಾರರ ಕೂಟಕ್ಕೆ ಬೆಂಗಳೂರು ಪ್ರೆಸ್ ಕ್ಲಬ್‌ಗಿಂತ ಮಾದರಿ ವಾತಾವರಣ ಕಲ್ಪಿಸುವ ಆಲೋಚನೆ ಹೊಂದಿದ್ದಾರೆ. ಆದಷ್ಟು ಬೇಗನೆ ಸಚಿವರು, ಸಂಸದರ ಒತ್ತಾಸೆಯಂತೆ ವರದಿಗಾರರ ಕೂಟಕ್ಕೆ ಶಾಶ್ವತ ಜಾಗ ಸಿಗಲಿ. ನಾವೆಲ್ಲರೂ ಸದಾ ನಿಮ್ಮೊಂದಿರುತ್ತೇವೆ ಎಂದರು.

ಕೂಟದ ಗೌರವಾಧ್ಯಕ್ಷ ಬಿ.ಎನ್.ಮಲ್ಲೇಶ, ಅಧ್ಯಕ್ಷ ನಾಗರಾಜ ಎಸ್.ಬಡದಾಳ್, ಪ್ರಧಾನ ಕಾರ್ಯದರ್ಶಿ ಎಂ.ವೈ.ಸತೀಶ, ಖಜಾಂಚಿ ಪವನ್ ಐರಣಿ, ಗೌರವಾಧ್ಯಕ್ಷ ಕೆ.ಚಂದ್ರಣ್ಣ, ಮಂಜುನಾಥ ಗೌರಕ್ಕಳವರ್, ಸಿದ್ದಯ್ಯ ಹಿರೇಮಠ, ರಮೇಶ ಜಹಗೀರದಾರ್, ವಿವೇಕ್ ಬದ್ದಿ, ಸಂಜಯ್ ಕುಂದುವಾಡ, ಬಿ.ಸಿಕಂದರ್, ಆರ್.ರವಿಬಾಬು, ಸತೀಶ ಬಡಿಗೇರ, ಡಾ.ಸಿ.ವರದರಾಜ, ಪುನೀತ್ ಆಪ್ತಿ, ಆರ್.ಎಸ್.ತಿಪ್ಪೇಸ್ವಾಮಿ, ಡಾ. ಕೆ.ಜೈಮುನಿ, ಸುರೇಶ ಕುಣಿಬೆಳಕೆರೆ, ಎಚ್. ಎಂ.ಪಿ.ಕುಮಾರ, ತೇಜಸ್ವಿನಿ, ಕಾವ್ಯ ಬಿ.ಕೆ., ರಮೇಶ, ಶಿವರಾಜ, ಸುರೇಶ ಕಕ್ಕರಗೊಳ್ಳ, ಚನ್ನಬಸವ ಶೀಲವಂತ, ಕೆ.ಸಿ.ಗಿರೀಶ, ರವಿ ಭುವನೇಶ್ವರಿ, ಅನಿಲಕುಮಾರ ಭಾವಿ, ಮಧು, ನೂರ್, ಅಜಯ್, ಕರಿಬಸವರಾಜ, ಜಯಪ್ಪ ಇತರರು ಇದ್ದರು.

# ಹದ್ದುಗಳ ಮಸಣವಾದ ಹೆದ್ದಾರಿ!



**ರಾಮನಗರ:** ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿಯುಬಿಳಿ ಹದ್ದು ಸೇರಿದಂತೆ ಕೆಲವು ಅಪರೂಪದ ಪಕ್ಷಿಗಳ ಜೀವಕ್ಕೆ ಕಂಟಕವಾಗುತ್ತಿದೆ.

ಪ್ರತಿ ತಿಂಗಳು 15-20 ಪಕ್ಷಿಗಳು, ಹದ್ದುಗಳು ಹೆದ್ದಾರಿಯಲ್ಲಿ ವಾಹನಗಳ ಚಕ್ರಕ್ಕೆ ಸಿಲುಕಿ ಪ್ರಾಣ ಕಳೆದುಕೊಳ್ಳುತ್ತಿವೆ. ಪರಿಸ್ಥಿತಿ ಇದೇ ರೀತಿ ಮುಂದುವರೆದರೆ ಕೆಲವೇ ವರ್ಷಗಳಲ್ಲಿ ಈ ಪ್ರದೇಶದಲ್ಲಿರುವ ಕೆಲವು ಅಪರೂಪದ ಹದ್ದುಗಳ ಸಂತತಿ ವಿನಾಶದ ಅಂಚಿಗೆ ತಲುಪಲಿದೆ ಎನ್ನುತ್ತಾರೆ ಪಶು, ಪಕ್ಷಿಗಳ ಸಂರಕ್ಷಕಿ ಬೆಂಗಳೂರಿನ ಗೌರಿ ಶಿವಯೋಗಿ.

ಹೆದ್ದಾರಿಯಲ್ಲಿ ಹೆಚ್ಚುತ್ತಿರುವ ಹದ್ದು ಮತ್ತು ಇತರ ಪಕ್ಷಿಗಳ ಸಾವಿನ ಬಗ್ಗೆ ಅಧ್ಯಯನದಲ್ಲಿ ತೊಡಗಿರುವ ಗೌರಿ ಅವರು ವೃತ್ತಿಯಲ್ಲಿ ಸಾಫ್ಟ್‌ವೇರ್ ಎಂಜಿನಿಯರ್.

ಹೆದ್ದಾರಿಯಲ್ಲಿ ಸತ್ತು ಬಿದ್ದ ನಾಯಿ, ಬೆಕ್ಕುಗಳ ಕಳೇ ಬರ ಮತ್ತು ಅಕ್ಕಪಕ್ಕದ ಜಮೀ ನುಗಳಲ್ಲಿ ಆಹಾರ ಹುಡುಕಿಕೊಂಡು ಬರುವ ಹದ್ದುಗಳು ತಮ್ಮ ಭಾರವಾದ ದೇಹದಿಂದ ಏಕಾಏಕಿ ಮೇಲಕ್ಕೆ ಹಾರಲಾಗದೆ ವೇಗವಾಗಿ ಚಲಿಸುವ ವಾಹನಗಳ ಚಕ್ರಕ್ಕೆ ಸಿಲುಕಿ ಪ್ರಾಣ ಕಳೆದುಕೊಳ್ಳುತ್ತಿವೆ ಎನ್ನುವುದು ಅವರ ವಾದ.

'ಒಮ್ಮೆ ಹೆದ್ದಾರಿಯಲ್ಲಿ ಬಿದ್ದಿದ ನಾಯಿ ಕಳೇ ಬರವನ್ನು ಹದ್ದು ತಿನ್ನುತ್ತಿತ್ತು. ಅದೇ ಮಾರ್ಗದಲ್ಲಿ ಬಂದ ಕಾರು ಡಿಕ್ಕಿ ಹೊಡೆದು ಹದ್ದು ಕೂಡ ಸತ್ತು ಬಿತ್ತು. ರಸ್ತೆ ಬದಿ ಕಾರು ನಿಲ್ಲಿಸಿ ಹದ್ದಿನ ಕಳೇಬರವನ್ನು ಗುಂಡಿ ತೋಡಿಹೂತು ಹಾಕಿದೆ. ಅಂದಿನಿಂದ ಹೆದ್ದಾರಿಯಲ್ಲಿ ಈ ರೀತಿ ಸಾಯುತ್ತಿರುವ ಹದ್ದು ಹಾಗೂ ಇತರ ಪಕ್ಷಿಗಳ ಕುರಿತು ಅಧ್ಯಯನ ಶುರುಮಾಡಿದೆ' ಎಂದು ಗೌರಿ ತಿಳಿಸಿದರು.

'2023ರ ಡಿಸೆಂ ಬರ್ನಿಂದ ಇಲ್ಲಿಯವರೆಗೆ ಹೆದ್ದಾರಿಯಲ್ಲಿ ಬಲಿಯಾಗುತ್ತಿರುವ ಹದ್ದು ಮತ್ತು ಇತರ ಪಕ್ಷಿಗಳ ಕುರಿತುಮಾಹಿತಿ ಸಂಗ್ರಹಿಸಲು ಆರಂಭಿಸಿದೆ. ಅದಕ್ಕಾಗಿ, ತಿಂಗಳಿಗೆ ಎರಡರಿಂದಮೂರು ಸಲ ವಾರಾಂತ್ಯದಲ್ಲಿ ಈ ಹೆದ್ದಾರಿಯಲ್ಲಿ ಸಂಚರಿಸುತ್ತಿದ್ದೇನೆ. ಇದುವರೆಗೆ 40ಕ್ಕೂ ಹೆಚ್ಚು ಹದ್ದು (ಕಪ್ಪು ಮತ್ತು ಬಿಳಿಹದ್ದು) ಸೇರಿದಂತೆ ಕಾಗೆ, ಗೂಬೆ, ಕೋಗಿಲೆ ಹಾಗೂ ಇತರ ಪಕ್ಷಿಗಳ ಕಳೇ ಬರಗಳನ್ನು ಹೂತಿದ್ದೇನೆ. ಕೆಲವೊಮ್ಮೆ ಹಲವು ವಾಹನ ಓಡಾಡಿ ಪಕ್ಷಿಗಳ ಕಳೇಬರ ರಸ್ತೆಗೆ ಅಂಟಿಕೊಂಡು ಅಪ್ಪಚ್ಚಿಯಾಗಿರುತ್ತವೆ' ಎಂದು ಹೇಳಿದರು.

**ಹಾಟ್ಸ್ಪಾಟ್‌ಗಳು:**

ಬೆಂಗಳೂರು[illegible]ಮೈಸೂರು ಹೆದ್ದಾರಿಯಲ್ಲಿ ಪಕ್ಷಿಗಳಿಗೆ ಪ್ರಾಣಕ್ಕೆ ಸಂಚಕಾರ ತಂದೊಡ್ಡುವ ಹಲವು ಅಪಾಯಕಾರಿ ಅಪಘಾತ ಸ್ಥಳಗಳನ್ನು(ಹಾಟ್ಸ್ಪಾಟ್) ಅವರು ಗುರುತಿಸಿದ್ದಾರೆ. ಬಿಡದಿ, ಚನ್ನಪಟ್ಟಣ (ಮಸೀದಿ ಸಮೀಪ), ಮದ್ದೂರು ಮೇಲ್ಸೇತುವೆ (ಮದ್ದೂರು ಟಿಫಾನೀಸ್ ಬಳಿ) ಹಾಗೂ ಮಂಡ್ಯ (ತಿರುವು ಹಾಗೂ ಮೇಲ್ಸೇತುವೆ) ಹೆದ್ದಾರಿಯ ಪ್ರಮುಖ ಅಪಾಯಕಾರಿ ಹಾಟ್ಸ್ಪಾಟ್‌ಗಳು. ಅಪರೂಪದ ಬಿಳಿ ಹದ್ದುಗಳು ಹೆಚ್ಚಾಗಿರುವ ಜಾಗಗಳು ಇವು.

'ಹೆದ್ದಾರಿಯಲ್ಲಿ ಹದ್ದು, ಬಿಳಿ ಹದ್ದು ಸೇರಿದಂತೆ ಕೆಲ ಪಕ್ಷಿಗಳು ಬಲಿಯಾಗುತ್ತಿರುವುದನ್ನು ತಡೆಯಲು ಸುರಕ್ಷಿತ ಕ್ರಮಗಳನ್ನು ಕೈಗೊಳ್ಳುವಂತೆ ರಾಷ್ಟ್ರೀಯ ಹೆದ್ದಾರಿ ಪ್ರಾಧಿಕಾರದ ಅಧಿಕಾರಿಗಳನ್ನು ಭೇಟಿಮಾಡಿ ಮನವಿಮಾಡಿದ್ದೇನೆ. ಇ-ಮೇಲ್ ಕೂಡಮಾಡಿರುವೆ. ಕೆಲ ಸಚಿವರ ಗಮನಕ್ಕೂ ತಂದರೂ ಪ್ರಯೋಜನವಾಗಿಲ್ಲ.ಅವರಿಗೆ ಪಕ್ಷಿಗಳ ಸಾವಿನ ಗಂಭೀರತೆ ಅರ್ಥವಾಗುತ್ತಿಲ್ಲ' ಎಂದು ಗೌರಿ ಬೇಸರ ವ್ಯಕ್ತಪಡಿಸಿದರು.

ಬೆಂಗಳೂರು-ಮೈಸೂರು ರಾಷ್ಟ್ರೀಯ ಹೆದ್ದಾರಿಯಲ್ಲಿ ಮೃತಪಟ್ಟ ಹದ್ದುಗಳ ಕಳೇಬರ ಸಂಗ್ರಹಿಸಿ ಅಂತ್ಯಕ್ರಿಯೆ ನೆರವೇರಿಸಿದ ಗೌರಿ ಶಿವಯೋಗಿ

**ಪರಿಹಾರ ಏನು?**

* ಹೆದ್ದಾರಿಯಲ್ಲಿ ಅಪಘಾತದ ಹಾಟ್ಸ್ಪಾಟ್ ಗುರುತಿಸಿ, ವಾಹನಗಳು ನಿಧಾನವಾಗಿ ಚಲಿಸುವಂತೆ ಸೂಚನಾ ಫಲಕ ಅಳವಡಿಸಬೇಕು
* ಹೆದ್ದಾರಿಯ ಎರಡೂ ಬದಿಯಲ್ಲಿ ಅಳವಡಿಸಿರುವ ತಂತಿಬೇಲಿ ದುರಸ್ತಿ ಮಾಡಬೇಕು
* ಪಕ್ಷಿಗಳ ಜೀವ ಅಮೂಲ್ಯ ಎಂದು ಸಾರುವ ಫಲಕ ಅವಳಡಿಸಬೇಕು
* ಅತಿ ವೇಗದಿಂದ ಪಕ್ಷಿಗಳ ಮೇಲೆ ಹರಿಯುವ ವಾಹನಗಳಿಗೆ ದಂಡ ವಿಧಿಸಬೇಕು



ತಿಂಗಳಿಗೆ 15-20 ಪಕ್ಷಿ ಸಾವು

ಪ್ರತಿದಿನ ಬೆಳಗ್ಗೆ 6ರಿಂದ 8ರ ಅವಧಿಯಲ್ಲಿ ಬಹುತೇಕ ಪಕ್ಷಿಗಳು ಬಲಿಯಾಗುತ್ತಿವೆ. ವಾರಾಂತ್ಯದಲ್ಲಿ ಸಾವಿನ ಸಂಖ್ಯೆ ಹೆಚ್ಚು.





ತಿಂಗಳಿಗೆ ಕನಿಷ್ಠ ಏನಿಲ್ಲವೆಂದರೂ 15 ಪಕ್ಷಿಗಳು ಹೆದ್ದಾರಿಯಲ್ಲಿ ಅಪಘಾತಕ್ಕೆ ಬಲಿಯಾಗುತ್ತಿವೆ. ಇದರಲ್ಲಿ ಹದ್ದುಗಳೇ ಹೆಚ್ಚು. ಜನವರಿ ಫೆಬ್ರುವರಿಮಾರ್ಚ್ ಹಾಗೂ ಡಿಸೆಂಬರ್ ತಿಂಗಳಲ್ಲಿ ಈ ಪ್ರಮಾಣ ಹೆಚ್ಚು. ಜನವರಿಯಿಂದ ಮಾರ್ಚ್ ಹದ್ದುಗಳ ಸಂತಾನೋತ್ಪತ್ತಿ ಅವಧಿ ಎಂಬುದು ಇಲ್ಲಿ ಗಮನಾರ್ಹ. ಹೆದ್ದಾರಿಯಲ್ಲಿ ಅತಿ ವೇಗವಾಗಿ ಸಂಚರಿಸುವ ವಾಹನಗಳಿಗೆ ಪಕ್ಷಿಗಳು ಸಿಲುಕಿ ಸತ್ತಾಗ ಬಹುತೇಕ ಸವಾರರು ವಾಹನ ನಿಲ್ಲಿಸದೆಹೋಗುತ್ತಾರೆ ಎನ್ನುತ್ತಾರೆ ಗೌರಿ.ಪ್ರಾಣಕ್ಕೆ ಕಂಟಕವಾಗುತ್ತಿದೆ ಭಾರದ ದೇಹ!

ಬಿಡದಿಯಿಂದ ಶ್ರೀರಂಗಪಟ್ಟಣದವರೆಗೆ ಹೆದ್ದಾರಿಯಲ್ಲಿ ಜನ ಹಾಗೂ ಜಾನುವಾರು ದಾಟಲು ಪಾದಚಾರಿ ಮೇಲ್ಸೇತುವೆ ವ್ಯವಸ್ಥೆ ಇಲ್ಲ. ಹೆದ್ದಾರಿಗೆ ಹಾಕಿರುವ ತಂತಿಬೇಲಿ ಕತ್ತರಿಸಿ ದಾರಿಮಾಡಿಕೊಂಡು ಜನರು ಓಡಾಡುತ್ತಾರೆ. ಇಲ್ಲಿಯೇ ನಾಯಿ ಹಾಗೂ ಇತರ ಪ್ರಾಣಿಗಳು ರಸ್ತೆ ದಾಟುವಾಗ ವಾಹನಗಳಿಗೆ ಸಿಲುಕಿ ಸಾಯುತ್ತವೆ. ಅವುಗಳ ಕಳೇ ಬರ ತಿನ್ನಲು ಮುಖ್ಯವಾಗಿ ಹದ್ದು ಕಾಗೆ ಗೂಬೆ ಬರುತ್ತವೆ. ಆಗ ವೇಗವಾಗಿ ಬರುವ ವಾಹನಗಳಿಂದ ತಪ್ಪಿಸಿಕೊಳ್ಳಲಾಗದೆ ಬಲಿಯಾಗುತ್ತಿವೆ. ಹಗುರಾಗಿರುವ ಉಳಿದ ಪಕ್ಷಿಗಳು ಏಕಾಏಕಿ ಮೇಲಕ್ಕೆ ಹಾರಿ ಪ್ರಾಣ ಉಳಿಸಿಕೊಳ್ಳುತ್ತವೆ. ಭಾರವಾದ ದೇಹದ ಹದ್ದುಗಳಿಗೆ ಒಮ್ಮೆಲೆ ಹಾರಲು ಆಗುವುದಿಲ್ಲ. ಹಾಗಾಗಿ ಹದ್ದುಗಳೇ ಹೆಚ್ಚಾಗಿ ವಾಹನಗಳ ಅಡಿ ಸಿಲುಕಿ ಸಾಯುತ್ತಿವೆ.

ಹೆದ್ದಾರಿಯುದ್ದಕ್ಕೂ 42 ಮೇಲ್ಸೇತುವೆಗಳಿದ್ದು ಬಹುತೇಕ ಹದ್ದುಗಳು ಮೇಲ್ಸೇತುವೆಗಳ ಆರಂಭ ಮತ್ತು ಅಂತ್ಯದಲ್ಲೇ ಸತ್ತಿರುವುದು ಗಮನಕ್ಕೆ ಬಂದಿದೆ ಎಂದು ಗೌರಿ ತಿಳಿಸಿದರು.

# ಛಲವಿದ್ದರೆ ಪ್ರಗತಿ ಹೊಂದಲು ಸಾಧ್ಯ



**ಶಿವಮೊಗ್ಗ:** ಕಲಾವಿದನಿಗೆ ತನ್ನ ಕ್ಷೇತ್ರದಲ್ಲಿ ಏನಾದರೂ ಸಾಧನೆ ಮಾಡಬೇಕು ಎಂಬ ಛಲವಿದ್ದರೆ ಆತ ಪ್ರಗತಿ ಹೊಂದಲು ಸಾಧ್ಯ ಎಂದು ಇಡಗುಂಜಿ ಮಹಾಗಣಪತಿ ಯಕ್ಷಗಾನ ಮೇಳದ ಶಿವಾನಂದ ಹೆಗಡೆ ಕೆರೆಮನೆ ಹೇಳಿದರು.

ಇಲ್ಲಿನ ಸುವರ್ಣ ಸಂಸ್ಕೃತಿ ಭವನದಲ್ಲಿ ಅಭ್ಯುದಯದ ಸಹಕಾರದೊಂದಿಗೆ ಹಮ್ಮಿಕೊಂಡಿದ್ದ ಸೀತಾಪಹರಣ ಯಕ್ಷಗಾನದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಕಲಾವಿದರು ಹೊಸ ಹೊಸ ಚಿಂತನೆಯನ್ನು ರೂಪಿಸಿಕೊಂಡು ತಲ ತಲಾಂತರದಿಂದ ಬಂದ ಸಂಪ್ರದಾಯವನ್ನು ಬಿಡದೆ ಹೊಸ ಪ್ರಯೋಗದತ್ತ ಹೆಜ್ಜೆ ಹಾಕಬೇಕು ಎಂದರು.

ಒಂದು ಪ್ರಯೋಗ ಯಶಸ್ವಿಯಾಗಲು ಮೂರು ಅಂಶಗಳು ಪ್ರಮುಖವಾಗಿದೆ. ಅದು ಆಡಿಸುವವರು, ಆಡುವರು ಮತ್ತು ಪ್ರೇಕ್ಷಕರು ಈ ಮೂರರಲ್ಲಿ ಹೊಂದಾಣಿಕೆ ಸಮನಾಗಿ ಇರಬೇಕು ಆಗ ಮಾತ್ರ ಪ್ರಯೋಗ ಜನಮಾನಸಕ್ಕೆ ಮುದ ನೀಡುತ್ತದೆ ಎಂದರು.

> ಒಬ್ಬ ವ್ಯಕ್ತಿಯ ಅಥವಾ ಒಂದು ಕುಟುಂಬದ ನೆಲೆಯಲ್ಲಿ ಯಕ್ಷಗಾನಕ್ಕೆ ಏನೆಲ್ಲಾ ಸಾಧ್ಯತೆಗಳಿವೆಯೋ ಅವನ್ನೆಲ್ಲಾ ಮಾಡುತ್ತಾ ಹೊಸ ಹೊಸ ಉಪಯುಕ್ತ ಯೋಜನೆಗಳನ್ನು ಜಾರಿಗೆ ತರುತ್ತ ವಿಶ್ವಸಂಸ್ಥೆಯ ಪಾರಂಪರಿಕ ಕಲೆಗಳಲ್ಲಿ ಯಕ್ಷಗಾನವು ಸೇರಿಕೊಳ್ಳುವ ಪ್ರಯತ್ನಗಳನ್ನು ಮಾಡುತ್ತಲೇ ಬಂದಿದೆ. ಇದನ್ನು ಗಮನಿಸಿದ ವಿಶ್ವಸಂಸ್ಥೆಯ ಅಂಗ ಸಂಸ್ಥೆಯಾದ ಯುನೆಸ್ಕೋ ಕಳೆದ ವರ್ಷ ನಮ್ಮ ಮೇಳಕ್ಕೆ ಯುನೆಸ್ಕೋ ಮಾನ್ಯತೆ ನೀಡಿ ಗೌರವಿಸಿದೆ. ಈ ಗೌರವಕ್ಕೆ ಎಲ್ಲಾ ಕಲಾವಿದರು, ನಮ್ಮ ಹಿರಿಯರು ಹಾಗೂ ಸಹೃದಯಿ ಪ್ರೇಕ್ಷಕರು ಕಾರಣ.
> **-ಶಿವಾನಂದ ಹೆಗಡೆ ಕೆರೆಮನೆ.**

ಒಬ್ಬ ವ್ಯಕ್ತಿಯ ಅಥವಾ ಒಂದು ಕುಟುಂಬದ ನೆಲೆಯಲ್ಲಿ ಯಕ್ಷಗಾನಕ್ಕೆ ಏನೆಲ್ಲಾ ಸಾಧ್ಯತೆಗಳಿವೆಯೋ ಅವನ್ನೆಲ್ಲಾ ಮಾಡುತ್ತಾ ಹೊಸ ಹೊಸ ಉಪಯುಕ್ತ ಯೋಜನೆಗಳನ್ನು ಜಾರಿಗೆ ತರುತ್ತ ವಿಶ್ವಸಂಸ್ಥೆಯ ಪಾರಂಪರಿಕ ಕಲೆಗಳಲ್ಲಿ ಯಕ್ಷಗಾನವು ಸೇರಿಕೊಳ್ಳುವ ಪ್ರಯತ್ನಗಳನ್ನು ಮಾಡುತ್ತಲೇ ಬಂದಿದೆ. ಇದನ್ನು ಗಮನಿಸಿದ ವಿಶ್ವಸಂಸ್ಥೆಯ ಅಂಗ ಸಂಸ್ಥೆಯಾದ ಯುನೆಸ್ಕೋ ಕಳೆದ ವರ್ಷ ನಮ್ಮ ಮೇಳಕ್ಕೆ ಯುನೆಸ್ಕೋ ಮಾನ್ಯತೆ ನೀಡಿ ಗೌರವಿಸಿದೆ. ಈ ಗೌರವಕ್ಕೆ ಎಲ್ಲಾ ಕಲಾವಿದರು, ನಮ್ಮ ಹಿರಿಯರು ಹಾಗೂ ಸಹೃದಯಿ ಪ್ರೇಕ್ಷಕರು ಕಾರಣ ಎಂದರು.

ವೇದಿಕೆಯಲ್ಲಿ ರಿಮಿಕ್ಸ್, ಪ್ರಚಾರದ ಬ್ಯಾನರ್ ಅಳವಡಿಸದೆ ಸರಳವಾಗಿ ಪ್ರೇಕ್ಷಕರಿಗೆ ಕಲಾತ್ಮಕವಾಗಿ ಕಲೆಯನ್ನು ನೀಡುವ ಕೆಲಸ ಮಾಡಿದರೆ ಅದು ಪರಿಣಾಮಕಾರಿಯಾಗಿ ಪ್ರೇಕ್ಷಕರನ್ನು ಮುಟ್ಟುತ್ತದೆ. ಇದನ್ನು ನಮ್ಮ ಮೇಳ ಮಾಡುತ್ತಿದೆ ಎಂದು ಹೇಳಿದರು. ಶಿವಮೊಗ್ಗ ನಗರದ ಜನತೆ ಒಳ್ಳೆಯ ಕಲಾ ಪ್ರೇಮಿಗಳು. ಇಲ್ಲಿ ಕಲೆಗೆ ಪ್ರೋತ್ಸಾಹ ನೀಡುವಂತಹ ಸಹೃದಯರಿದ್ದಾರೆ. ನಮ್ಮ ತಂದೆ ಶಂಭು ಹೆಗಡೆಯವರ ಕಾಲದಿಂದಲೂ ನಾವು ಇಲ್ಲಿ ಹಲವಾರು ಬಾರಿ ಯಕ್ಷಗಾನ ಪ್ರದರ್ಶನ ನೀಡಿದ್ದು, ಎಲ್ಲಾ ಸಮಯದಲ್ಲೂ ತುಂಬಾ ಸಹಕಾರ ನೀಡಿದ್ದಾರೆ. ನಮ್ಮ ಮೇಳ ಆರ್ಥಿಕ ಸಂಕಷ್ಟದಲ್ಲಿದ್ದಾಗ ಇಲ್ಲಿಯ ಜನತೆ ನಮ್ಮ ಕೈ ಹಿಡಿದು ನಮ್ಮನ್ನು ಹರಸಿದ್ದು ಎಂದೂ ಮರೆಯುವಂತಿಲ್ಲ ಎಂದು ಶಿವಮೊಗ್ಗ ನಗರದ ಕಲಾಭಿಮಾನಿಗಳನ್ನು ಕೊಂಡಾಡಿದರು.

ಕಾರ್ಯಕ್ರಮದ ಆಯೋಜಕರಾದ ಅಭ್ಯುದಯದ ಲಕ್ಷ್ಮೀನಾರಾಯಣ ಕಾಶಿ ಮಾತನಾಡಿ, ಶಿವಾನಂದ ಹೆಗಡೆ ಕೆರೆಮನೆಯವರು ತಮ್ಮ ಮಾರ್ಗದರ್ಶನದಲ್ಲಿ ಮೇಳವನ್ನು ಎತ್ತರಕ್ಕೆ ಬೆಳೆಸುತ್ತಿದ್ದಾರೆ. ಇವರ ಮೇಳದ ಪ್ರತಿಯೊಬ್ಬ ಕಲಾವಿದರು ಕಲಾತ್ಮಕವಾಗಿ ಕಲೆಯನ್ನು ಪ್ರದರ್ಶಿಸಿ ಅಪಾರ ಜನ ಮನ್ನಣೆ ಪಡೆದಿದ್ದಾರೆ. ಇವರು ನಡೆಸುವ ಯಕ್ಷಗಾನ ಶಾಲೆ ಇಂದು ಯಕ್ಷಗಾನ ಕಲಾ ಲೋಕಕ್ಕೆ ಅಪೂರ್ವವಾದ ಕೊಡುಗೆಯಾಗಿದೆ ಎಂದರು. ಶ್ರೀನಿವಾಸ ಕಾಮತ್, ಡಾ. ಕೃಷ್ಣ ಭಟ್, ಎನ್. ರಾಮಚಂದ್ರ, ಡಾ. ಟಿ.ಜೆ. ಲಕ್ಷ್ಮೀನಾರಾಯಣ, ಡಾ. ಅನಿಲಕುಮಾರಿ, ಡಾ. ರತ್ನಾಕರ್ ಮೊದಲಾದವರಿದ್ದರು.

# ಎಟಿಎಂನಲ್ಲಿ ಹಣ ದೋಚಲು ಕಳ್ಳ ಪ್ರಯತ್ನ



ಶಿವಮೊಗ್ಗ: ನಗರದ ನೆಹರು ರಸ್ತೆಯಲ್ಲಿನ ರಾಷ್ಟ್ರೀಕೃತ ಬ್ಯಾಂಕ್ ಒಂದರ ಎಟಿಎಂ ನಲ್ಲಿನ ಹಣ ಕಳ್ಳತನಕ್ಕೆ ಖದೀಮರು ವಿಫಲ ಯತ್ನ ನಡೆಸಿರುವ ಘಟನೆ ತಡರಾತ್ರಿ ನಡೆದಿದೆ. ಘಟನೆ ನಡೆದ ಅರ್ಧ ಘಂಟೆಯೊಳಗೆ ಕೋಟೆ ಪೊಲೀಸರು ಆರೋಪಿಯನ್ನು ವಶಕ್ಕೆ ಪಡೆದಿದ್ದಾರೆ.ಇತ್ತೀಚಿಗೆ ಹಾಡಹಗಲೇ ಬೀದರ್ ಮತ್ತು ಮಂಗಳೂರಲ್ಲಿ ಬ್ಯಾಂಕ್ ದರೋಡೆ ಪ್ರಕರಣ ಬೆನ್ನಲ್ಲೇ ಶಿವಮೊಗ್ಗದಲ್ಲೂ ಎಟಿಎಂನಲ್ಲಿನ ಹಣ ದೋಚಲು ಕಳ್ಳ ಪ್ರಯತ್ನ ನಡೆಸಿರುವುದು ಬೆಳಕಿಗೆ ಬಂದಿದೆ.ನಗರದ ನೆಹರೂ ರಸ್ತೆಯಲ್ಲಿನ ಕೆನರಾ ಬ್ಯಾಂಕ್ ಎಟಿಎಂ ಕಳ್ಳತನ ಮಾಡಲು ಖದೀಮರು ಯತ್ನಿಸಿದ್ದಾರೆ. ಅಷ್ಟರಲ್ಲಿ ಎಟಿಎಂ ಅಲರಾಂ ಶಬ್ದ ಮಾಡಿದೆ. ಆಗ ಕಳ್ಳ ಸ್ಥಳದಿಂದ ಪರಾರಿಯಾಗಿದ್ದಾನೆ.ಎಟಿಎಂನಿಂದ ಸೈರನ್ ಬರುತ್ತಿದ್ದಂತೆ ಸ್ಥಳಕ್ಕೆ 112 ಪೊಲೀಸರು ಸೇರಿದಂತೆ ಕೋಟೆ ಪೊಲೀಸರು ಸ್ಥಳಕ್ಕೆ ಆಗಮಿಸಿದ್ದಾರೆ. ಎಟಿಎಂ ಮಷಿನ್ ಓಪನ್ ಮಾಡಿ ಹಣ ತೆಗೆದು ಹೋಗುವ ಯತ್ನದಲ್ಲಿದ್ದಾಗ ಸೈರನ್ ಕೂಗಿದ್ದರಿಂದ ಕಳ್ಳ ಓಡಿ ಹೋಗಿದ್ದಾನೆ. ಇದರಿಂದ ಎಟಿಎಂನಲ್ಲಿ ಯಾವುದೇ ಹಣ ಕಳ್ಳತನ ಆಗಿಲ್ಲ.ಎಟಿಎಂನಲ್ಲಿ ಸಿಸಿ ಕ್ಯಾಮರಗಳನ್ನು ಅಳವಡಿಸಲಾಗಿದೆ. ಎಟಿಎಂ ಕಳ್ಳತನ ಯತ್ನದ ಮಾಹಿತಿ ಸಿಕ್ಕ ಕೂಡಲೇ ಬ್ಯಾಂಕ್ ಅಧಿಕಾರಿಗಳು ಸ್ಥಳಕ್ಕೆ ಬಂದು ಪರಿಶೀಲಿಸಿದ್ದಾರೆ. ಬ್ಯಾಂಕಿನ ಪ್ರಮುಖರಿಗೆ ಮಾಹಿತಿ ನೀಡಿದ್ದಾರೆ. ಅವರ ದೂರಿನ ಮೇರೆಗೆ ಕಾರ್ಯಾಚರಿಸಿದ ಪೊಲೀಸರು ಆರೋಪಿ ಬಿಹಾರ ಮೂಲದ ಮೊಹಮ್ಮದ್ ವಾಸೀಂ ಬಿನ್ ಅಲಿಹಸನ್ (22) ಬಂಧಿಸಿದ್ದಾರೆ. ಪೊಲೀಸರ ಕಾರ್ಯಕ್ಕೆ ಹಿರಿಯ ಅಧಿಕಾರಿಗಳು ಪ್ರಶಂಸಿದ್ದಾರೆ.

# ರಾಜ್ಯಾಧ್ಯಕ್ಷ ಸ್ಥಾನದ ಗದ್ದಲ: ಪ್ರತ್ಯೇಕ ಸಭೆಗಳ ಬಳಿಕ ದಿಢೀರ್ ದೆಹಲಿ ಪ್ರವಾಸ ಮಾಡಿದ ವಿಜಯೇಂದ್ರ



**ಬೆಂಗಳೂರು:** ರಾಜ್ಯ ಬಿಜೆಪಿಯಲ್ಲಿ ರಾಜ್ಯಾಧ್ಯಕ್ಷ ಸ್ಥಾನಕ್ಕೆ ನಡೆಯುತ್ತಿರುವ ಗದ್ದಲದ ಹಿನ್ನೆಲೆಯಲ್ಲಿ ಬಿವೈ ವಿಜಯೇಂದ್ರ ಅವರು ದಿಢೀರ್ ಆಗಿ ದೆಹಲಿಗೆ ತೆರಳಿದ್ದಾರೆ. ದೆಹಲಿಯಲ್ಲಿ ವರಿಷ್ಠರನ್ನು ಭೇಟಿ ಮಾಡಿ ರಾಜ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳ ಕುರಿತಾಗಿ ಮಾಹಿತಿ ನೀಡುವ ಸಾಧ್ಯತೆ ಇದೆ.

ಬಿವೈ ವಿಜಯೇಂದ್ರ ರಾಜ್ಯಾಧ್ಯಕ್ಷರಾಗಿ ಮುಂದುವರಿಯಬಾರದು ಎಂಬ ನಿಟ್ಟಿನಲ್ಲಿ ಯತ್ನಾಳ್ ನೇತೃತ್ವದ ರೆಬೆಲ್ ಬಣ ಪಟ್ಟು ಹಿಡಿದಿದೆ. ವಿಜಯೇಂದ್ರ ಅವರನ್ನು ರಾಜ್ಯಾಧ್ಯಕ್ಷರನ್ನಾಗಿ ಮುಂದುವರಿಸುವುದಾದರೆ ಚುನಾವಣೆಯಲ್ಲಿ ತಮ್ಮ ಅಭ್ಯರ್ಥಿಯನ್ನು ಕಣಕ್ಕಿಳುತ್ತೇವೆ ಎಂಬ ಎಚ್ಚರಿಕೆ ನೀಡಿದೆ. ಇದು ಹೈಕಮಾಂಡ್ ತಲೆನೋವಿಗೆ ಕಾರಣವಾಗಿದೆ.

ಈ ನಡುವೆ ಬಿವೈ ವಿಜಯೇಂದ್ರ ಪರವಾಗಿ ಮಾಜಿ ಶಾಸಕರ ತಂಡ ನಿರಂತರ ಬ್ಯಾಟಿಂಗ್ ಮಾಡುತ್ತಿದೆ. ಮಾಜಿ ಶಾಸಕ ಎಂಪಿ ರೇಣುಕಾಚಾರ್ಯ ನೇತೃತ್ವದಲ್ಲಿ ವಿಜಯೇಂದ್ರ ಪರವಾಗಿ ನಿರಂತರ ಸಭೆಗಳನ್ನು ನಡೆಸಲಾಗುತ್ತಿದೆ. ಅಲ್ಲದೆ, ರಾಜ್ಯ ಬಿಜೆಪಿ ಉಸ್ತುವಾರಿ ರಾಧಾ ಮೋಹನ್ ಅಗರವಾಲ್ ಅವರನ್ನು ಭೇಟಿ ಮಾಡಿ ಮನವಿ ಸಲ್ಲಿಸಲಾಗಿದೆ.

ಈ ಎಲ್ಲಾ ಬೆಳವಣಿಗೆಗಳ ನಡುವೆ ಎರಡು ತಂಡದ ಜೊತೆಗೆ ಅಂತರವನ್ನು ಕಾಯ್ದುಕೊಂಡಿದ್ದ ಸೈಲೆಂಟ್ ಗುಂಪು ಪ್ರತ್ಯೇಕ ಸಭೆಯನ್ನು ನಡೆಸಿದೆ. ಮಾಜಿ ಸಿಎಂ ಡಿವಿ ಸದಾನಂದ ಗೌಡ ಅವರ ನಿವಾಸದಲ್ಲಿ ಸಭೆ ನಡೆಸಿದ್ದ ಗುಂಪು ಸದ್ಯದ ವಿದ್ಯಮಾನಗಳ ಕುರಿತಾಗಿ ಚರ್ಚೆ ನಡೆಸಿದೆ.

ಈ ತಂಡದಲ್ಲಿ ವಿರೋಧ ಪಕ್ಷದ ನಾಯಕ ಆರ್. ಅಶೋಕ್, ಮಾಜಿ ಸಿಎಂ ಹಾಗೂ ಸಂಸದ ಬಸವರಾಜ ಬೊಮ್ಮಾಯಿ, ಅಶ್ವತ್ಥ ನಾರಾಯಣ, ಸಿಟಿ ರವಿ ಇದ್ದರು. ಈ ಸಭೆಯಲ್ಲಿ ರಾಜ್ಯಾಧ್ಯಕ್ಷ ಸ್ಥಾನದ ಬಗ್ಗೆ ಸೃಷ್ಟಿಯಾಗಿರುವ ಗೊಂದಲದ ಬಗ್ಗೆ ಚರ್ಚೆ ನಡೆಸಲಾಗಿದೆ. ಅಲ್ಲದೆ, ಎರಡು ಬಣಗಳ ನಡುವೆ ಯಾವ ರೀತಿಯಲ್ಲಿ ಸಮನ್ವಯವನ್ನು ಸಾಧಿಸಬೇಕು ಎಂಬ ನಿಟ್ಟಿನಲ್ಲೂ ಚರ್ಚೆ ನಡೆಸಲಾಗಿದೆ.

ಈ ಎಲ್ಲಾ ಬೆಳವಣಿಗೆಗಳ ನಡುವೆ ಬಿವೈ ವಿಜಯೇಂದ್ರ ಅವರು ದಿಢೀರ್ ದೆಹಲಿಗೆ ತೆರಳಿದ್ದಾರೆ. ದೆಹಲಿಯಲ್ಲಿ ವರಿಷ್ಠರನ್ನು ಭೇಟಿ ಮಾಡಿ ರಾಜ್ಯದಲ್ಲಿ ನಡೆಯುತ್ತಿರುವ ಬೆಳವಣಿಗೆಗಳಿಂದ ಉಂಟಾಗುತ್ತಿರುವ ಸಮಸ್ಯೆಗಳ ಬಗ್ಗೆ ಮನವರಿಕೆ ಮಾಡುವ ಸಾಧ್ಯತೆ ಇದೆ ಎಂದು ತಿಳಿದುಬಂದಿದೆ. ಒಂದು ಕಡೆಗೆ ಬಿಜೆಪಿಯಲ್ಲಿ ಒಗ್ಗಟ್ಟಿಲ್ಲ ಎಂಬ ವಿಪಕ್ಷಗಳ ಟೀಕೆಗಳು ಇದ್ದಾಗಲೇ ಗಾಲಿ ಜನಾರ್ದನ ರೆಡ್ಡಿ ಹಾಗೂ ಶ್ರೀರಾಮುಲು ನಡುವಿನ ಭಿನ್ನಾಭಿಪ್ರಾಯ ಬಹಿರಂಗವಾಗಿ ಸ್ಫೋಟವಾಗಿದೆ.

ಈ ಎಲ್ಲಾ ಬೆಳವಣಿಗೆಗಳಿಂದ ಕರ್ನಾಟಕ ಬಿಜೆಪಿಯು ತೀವ್ರ ಮುಜುಗರಕ್ಕೀಡಾಗಿದೆ. ಅತ್ತ, ಯತ್ನಾಳ್ ಮತ್ತು ಅವರ ತಂಡದವರು ನಾವು ಇಟ್ಟ ಹೆಜ್ಜೆ ಹಿಂದಿಡೋಲ್ಲ. ವಿಜಯೇಂದ್ರ ಅವರನ್ನು ಬಿಜೆಪಿ ರಾಜ್ಯಾಧ್ಯಕ್ಷ ಸ್ಥಾನದಿಂದ ಕೆಳಗಿಳಿಸಿಯೇ ತೀರುತ್ತೇವೆ ಎಂದು ಪಟ್ಟು ಹಿಡಿದಿದ್ದಾರೆ. ಇಂಥ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷರ ಬದಲಾವಣೆ ಮಾಡುವುದು ಸೂಕ್ತವಾದ ನಿರ್ಧಾರವೇ ಎಂಬಿತ್ಯಾದಿ ವಿಚಾರಗಳನ್ನು ಹೈಕಮಾಂಡ್ ಮುಂದಿಡಲು ವಿಜಯೇಂದ್ರ ಬಣ ನಿರ್ಧರಿಸಿದೆ ಎನ್ನಲಾಗಿದೆ.

# ಶ್ರೀರಾಮಲು ಕಾಂಗ್ರೆಸ್ ಸೇರ್ಪಡೆ ವಿಚಾರ; ಕುತೂಹಲ ಮೂಡಿಸಿದ ಸತೀಶ್ ಜಾರಕಿಹೊಳಿ ಹೇಳಿಕೆ



**ಬೆಳಗಾವಿ:** ಶ್ರೀರಾಮುಲು ಕಾಂಗ್ರೆಸ್ ಸೇರ್ಪಡೆ ವಿಚಾರ ಚರ್ಚೆಯಲ್ಲಿ ಇದೆ. ನಮಗೂ ಅದರ ಬಗ್ಗೆ ಸ್ಪಷ್ಟವಾದ ಮಾಹಿತಿ ಇಲ್ಲ ಎಂದು ಲೋಕೋಪಯೋಗಿ ಇಲಾಖೆ ಸಚಿವ ಸತೀಶ ಜಾರಕಿಹೊಳಿ ಹೇಳಿದರು.

ಬೆಳಗಾವಿಯಲ್ಲಿ ಮಾಧ್ಯಮಗಳ ಜೊತೆಗೆ ಮಾತನಾಡಿದ ಅವರು, 'ಬೆಂಗಳೂರಿಗೆ ಹೋಗಿ ಸಂಪೂರ್ಣ ಮಾಹಿತಿ ಪಡೆಯುವೆ. ಪೂರ್ಣ ಪ್ರಮಾಣದಲ್ಲಿ ಏನು ಬೆಳವಣಿಗೆ ಆಗಿದೆ ಗೊತ್ತಿಲ್ಲ. ಟಿವಿಯಲ್ಲಿ ನೋಡಿದ್ದೇನಷ್ಟೇ. ಪೂರ್ಣ ಮಾಹಿತಿ ಪಡೆದು ಮಾತನಾಡುತ್ತೇನೆ' ಎಂದರು.

ಶಾಸಕ ಜನಾರ್ದನ ರೆಡ್ಡಿ ಹಾಗೂ ಮಾಜಿ ಸಚಿವ ಶ್ರೀರಾಮುಲು ನಡುವೆ ಅಸಮಾಧಾನ ಸ್ಫೋಟಿಸಿದೆ. ಕೋರ್ ಕಮಿಟಿ ಸಭೆಯಲ್ಲಿ ರಾಜ್ಯ ಉಸ್ತುವಾರಿ ಸಮ್ಮುಖದಲ್ಲೇ ರಾಜೀನಾಮೆ ವಿಚಾರ ಪ್ರಸ್ತಾಪಿಸುವ ಮೂಲಕ ಒಳ ಬೇಗುದಿ ಭುಗಿಲೆದ್ದಿದೆ. ಇಬ್ಬರ ನಡುವಿನ ಜಟಾಪಟಿ ಶಮನ ಮಾಡಲು ಬಿಜೆಪಿ ಹೈಕಮಾಂಡ್ ಮಧ್ಯ ಪ್ರವೇಶಿಸಿದೆ. ಶ್ರೀರಾಮುಲುಗೆ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ ಪಿ ನಡ್ಡಾ ಕರೆ ಮಾಡಿ ಮನವೊಲಿಕೆಗೆ ಮುಂದಾಗಿದ್ದಾರೆ. ದಿಲ್ಲಿಗೆ ಬಂದು ಮಾತನಾಡುವಂತೆ ಬುಲಾವ್ ನೀಡಿದ್ದಾರೆ. ಇದೇ ವೇಳೆ ಕೋರ್ ಕಮಿಟಿ ಸಭೆಯಲ್ಲಿ ನಡೆದ ಬೆಳವಣಿಗೆಗಳ ಬಗ್ಗೆ ಶ್ರೀರಾಮುಲು ವಿವರಣೆ ನೀಡಿದ್ದಾರೆ. ಮುಂದಿನ ವಾರ ಶ್ರೀರಾಮುಲು ದಿಲ್ಲಿಗೆ ಹಾರುವ ಸಾಧ್ಯತೆ ಇದೆ.

ರಾಜ್ಯದಲ್ಲಿ ಫೈನಾನ್ಸ್ ಕಿರುಕುಳ ಆರೋಪಕ್ಕೆ ಇದೇ ವೇಳೆ ಪ್ರತಿಕ್ರಿಯಿಸಿದ ಸತೀಶ ಜಾರಕಿಹೊಳಿ ಅವರು, ಸುಮಾರು ಕಡೆ ಕಿರುಕುಳ ಕೊಡುವ ವರದಿಗಳು ಬರುತ್ತಿವೆ. ತೊಂದರೆ ಕೊಟ್ಟರೆ ದೂರು ದಾಖಲು ಮಾಡುವಂತೆ ತಿಳಿಸಿದ್ದೇವೆ. ಫೈನಾನ್ಸ್ ಕಿರುಕುಳದ ಬಗ್ಗೆ ಗೊಂದಲ ಇದೆ, ಸಾಲ ಪಡೆಯೋದು, ಕಿರುಕುಳ ಕೊಡುವುದು ಬೇರೆ ವಿಚಾರ. ಆದರೆ, ಸಬ್ಸಿಡಿ ಹೆಸರಿನಲ್ಲಿ ಸಾವಿರಾರು ಜನರಿಗೆ ಸಾಲ ಕೊಟ್ಟಿದ್ದಾರೆ. ಹಣ ತುಂಬುವ ವಿಚಾರದಲ್ಲಿ ಈಗ ಸಂಘರ್ಷ ಆರಂಭವಾಗಿದೆ. ಈಗಾಗಲೇ ಡಿಸಿ ನೇತೃತ್ವದಲ್ಲಿ ಒಂದು ಸಭೆ ನಡೆಸಿದ್ದೇನೆ. ಎರಡು ತಿಂಗಳ ಸಮಯ ಕೇಳಿದ್ದೇವೆ, ಏನಾದರೂ ಅದಕ್ಕೆ ಪರಿಹಾರ ಹುಡುಕುತ್ತೇವೆ ಎಂದರು.

ಒಂದು ತಿಂಗಳಲ್ಲಿ ಏನು ಸಾಧ್ಯವೋ ಅದಕ್ಕೆ ಪರಿಹಾರಕ್ಕೆ ಮಾಡುತ್ತೇವೆ. ಶಿರೂರಿನಲ್ಲಿ ಕೂಡ ಮಹಿಳೆ ಆತ್ಮಹತ್ಯೆ ಪ್ರಕರಣ ನಡೆದಿದೆ. ದೂರು ದಾಖಲು ಮಾಡಲು ತಿಳಿಸಿರುವೆ ಎಂದ ಅವರು, ಮಧ್ಯವರ್ತಿಗಳ ಜತೆಗೆ ಫೈನಾನ್ಸ್ ನವರು ಭಾಗಿಯಾಗಿದ್ದಾರೆ ಎಂಬ ಆರೋಪಕ್ಕೆ ಮಧ್ಯವರ್ತಿಗಳಿಗೆ ಹಣ ಕೊಟ್ಟಿದ್ದಾರೆ. ಈ ಕುರಿತು ಪೊಲೀಸ್ ತನಿಖೆಗೆ ಸೂಚನೆ ಕೊಟ್ಟಿದ್ದೇನೆ. ವರದಿ ಬಂದ ಮೇಲೆ ಕ್ರಮ ಕೈಗೊಳ್ಳುತ್ತೇವೆ ಎಂದು ಸ್ಪಷ್ಟಪಡಿಸಿದರು.

ತಾರಿಹಾಳದಲ್ಲಿ ಒಂದು ತಿಂಗಳ ಬಾಣಂತಿಯನ್ನು ಮನೆಯಿಂದ ಹೊರಹಾಕಿ ಮನೆ ಹರಾಜಿಗಿಟ್ಟ ಪ್ರಕರಣ ಕುರಿತು ಮಾಧ್ಯಮಗಳ ಪ್ರಶ್ನೆಗೆ ಉತ್ತರಿಸಿದ ಸತೀಶ್ ಜಾರಕಿಹೊಳಿ, ಕುಟುಂಬಸ್ಥರು ದೂರು ಕೊಟ್ಟರೆ, ಫೈನಾನ್ಸ್ ನವರ ಮೇಲೆ ಕ್ರಮ ಕೈಗೊಳ್ಳುತ್ತೇವೆ ಎಂದು ಹೇಳಿದರು.

# ವಿಧಾನಸೌಧದಲ್ಲಿ ನಡೆಯಲಿದೆ 3 ದಿನ ಪುಸ್ತಕ, ಆಹಾರ ಮೇಳ ; ಸಾರ್ವಜನಿಕರಿಗೂ ಮುಕ್ತ ಪ್ರವೇಶ

**ಬೆಂಗಳೂರು:** ವಿಧಾನಸೌಧದ ಆವರಣದಲ್ಲಿ ಮೂರು ದಿನಗಳ ಕಾಲ ಬುಕ್ ಹಾಗೂ ಆಹಾರ ಮೇಳವನ್ನು ಹಮ್ಮಿಕೊಳ್ಳಲಾಗುತ್ತಿದೆ. ಫೆಬ್ರವರಿ 28 ರಂದು ಸಂಜೆ ಮೇಳಕ್ಕೆ ಸಿಎಂ ಸಿದ್ದರಾಮಯ್ಯ ಚಾಲನೆ ನೀಡಲಿದ್ದು, ಮಾರ್ಚ್ 3 ವರೆಗೆ ಈ ಮೇಳ ನಡೆಯಲಿದೆ.

ಕಾರ್ಯಕ್ರಮದ ಬಗ್ಗೆ ವಿವರ ನೀಡಿದ ಸ್ಪೀಕರ್ ಯು.ಟಿ ಖಾದರ್, ಕರ್ನಾಟಕ ವಿಧಾನಸಭೆ ಸಚಿವಾಲಯ ಮೂಲಕ ಬುಕ್ ಮೇಳ ಹಾಗೂ ಆಹಾರ ಮೇಳವನ್ನು ಹಮ್ಮಿಕೊಳ್ಳಲಾಗಿದೆ. ಸಾರ್ವಜನಿಕರಿಗೂ ಮುಕ್ತ ಪ್ರವೇಶ ಇರಲಿದೆ ಎಂದು ತಿಳಿಸಿದರು.

ಈ ಕಾರ್ಯಕ್ರಮದಲ್ಲಿ ಸಾಹಿತ್ಯ ಕ್ಷೇತ್ರದಲ್ಲಿ ಇರುವವರು, ಬುದ್ಧಿ ಜೀವಿಗಳು, ವಿದ್ವಾಂಸರನ್ನು ಒಳಗೊಳ್ಳಲಾಗುವುದು. ಇವರನ್ನು ವಿಧಾನಸೌಧಕ್ಕೆ ಹತ್ತಿರಗೊಳಿಸುವ ಉದ್ದೇಶ ಹಾಗೂ ಪುಸ್ತಕ ಓದಿಗೆ ಪ್ರೋತ್ಸಾಹ ನೀಡುವ ನಿಟ್ಟಿನಲ್ಲಿ ಕಾರ್ಯಕ್ರಮ ಆಯೋಜನೆ ಮಾಡಲಾಗಿದೆ ಎಂದು ತಿಳಿಸಿದರು.

ಮೂರು ದಿನಗಳ ಕಾರ್ಯಕ್ರಮದಲ್ಲಿ ಪುಸ್ತಕ ಬಿಡುಗಡೆ, ಸಾಹಿತ್ಯ ಚರ್ಚೆ ಹಾಗೂ ಉತ್ತಮ ಸಾಹಿತಿಗಳಿಗೆ ಪ್ರಶಸ್ತಿ ನೀಡಲಾಗುವುದು. ಅಲ್ಲದೆ ಕಡಿಮೆ ದರದಲ್ಲಿ ಪುಸ್ತಕ ಸಿಗುವ ನಿಟ್ಟಿನಲ್ಲಿಯೂ ಕ್ರಮ ಕೈಗೊಳ್ಳಲಾಗಿದೆ ಎಂದು ತಿಳಿಸಿದರು.

# ಜಿಲ್ಲೆಯಲ್ಲಿ ಗ್ಯಾರಂಟಿ ಯೋಜನೆ ಪರಿಣಾಮಕಾರಿಯಾಗಿ ಅನುಷ್ಠಾನವಾಗಬೇಕು : ಚಂದ್ರಶೇಖರ್ ಗೌಡ




**ತುಮಕೂರು :** ಸರ್ಕಾರ ಜಾರಿಗೆ ತಂದಿರುವ ಪಂಚ ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಿಗೆ ಯಾವ ತೊಂದರೆಯೂ ಆಗದೆ ನೇರವಾಗಿ ಅವರ ಖಾತೆಗೆ ಹಣ ಜಮೆಯಾಗುವಂತೆ ಅಧಿಕಾರಿಗಳು ಕ್ರಮ ವಹಿಸಬೇಕು. ಫಲಾನುಭವಿಗಳ ಬ್ಯಾಂಕ್ ಖಾತೆಗಳು ಆಧಾರ್ ಜೋಡಣೆಗೆ ಸಂಬಂಧಿಸಿದ ದೂರುಗಳು ಬರುತ್ತಿದ್ದು, ಶೀಘ್ರವಾಗಿ ಇವುಗಳನ್ನು ಪರಿಹಾರ ಮಾಡಬೇಕೆಂದು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಚಂದ್ರಶೇಖರ್ ಗೌಡ ತಿಳಿಸಿದರು.

ತುಮಕೂರು ಜಿಲ್ಲಾ ಪಂಚಾಯತಿ ಸಭಾಂಗಣದಲ್ಲಿ ಶುಕ್ರವಾರ ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಬಗ್ಗೆ ಪ್ರಗತಿ ಪರಿಶೀಲನಾ ಸಭೆಯಯಲ್ಲಿ ಮಾತನಾಡಿದ ಅವರು, ಜಿಲ್ಲೆಯಲ್ಲಿ ಈಗಾಗಲೇ ಗ್ಯಾರಂಟಿಯೋಜನೆಗಳು ಪರಿಣಾಮಕಾರಿಯಾಗಿ ಅನುಷ್ಠಾನವಾಗುತ್ತಿವೆ. ಕೆಲವರು ಮಾತ್ರ ಗೃಹ ಲಕ್ಷ್ಮಿ ಹಣ ಪಾವತಿಯಾಗಿಲ್ಲ ಎಂದು ದೂರು ನೀಡುತ್ತಿದ್ದಾರೆ. ಯಾವ ಕಾರಣಕ್ಕೆ ಬ್ಯಾಂಕ್ ಖಾತೆಗಳಿಗೆ ಹಣ ಜಮೆಯಾಗಿಲ್ಲ ಎಂಬುದರ ಬಗ್ಗೆ ಶೀಘ್ರ ಮಾಹಿತಿ ಪಡೆದು ಪರಿಹಾರ ನೀಡುವಂತೆ ನಿರ್ದೇಶಿಸಿದರು.

ಜಿಲ್ಲೆಯಲ್ಲಿ ಈವರೆಗೆ ಗೃಹ ಲಕ್ಷ್ಮಿ ಯೋಜನೆಗೆ 1807 ಕೋಟಿ ರೂ., ಗೃಹ ಜ್ಯೋತಿ ಯೋಜನೆಗೆ 314 ಕೋಟಿ ರೂ., ಅನ್ನಭಾಗ್ಯ ಯೋಜನೆಗೆ 474 ಕೋಟಿ ರೂ.ಗಳ ಅನುದಾನ ಬಿಡುಗಡೆಯಾಗಿದೆ. ಪ್ರಸ್ತುತ 2024ನೇ ಸೆಪ್ಟಂಬರ್ ಮಾಹೆಗೆ ಅನುದಾನ ಬಿಡುಗಡೆಯಾಗಿದ್ದು, ನೇರ ನಗದು ಮೂಲಕ ಹಣ ವರ್ಗಾವಣೆ ಮಾಡುವ ಪ್ರಕ್ರಿಯೆ ಪ್ರಗತಿಯಲ್ಲಿದೆ. ನವೆಂಬರ್ ಮತ್ತು ಡಿಸೆಂಬರ್ ಮಾಹೆಯ ಅನುದಾನ ಬಿಡುಗಡೆಯಾಗಬೇಕಿದೆ ಎಂದು ಮಾಹಿತಿ ನೀಡಿದರು.

ಯುವನಿಧಿ ಯೋಜನೆಯಡಿ 6410 ಅಭ್ಯರ್ಥಿಗಳು ನೋಂದಣಿಯಾಗಿದ್ದು, ನಿರುದ್ಯೋಗ ಭತ್ಯೆ ಪಡೆಯಲು ಅರ್ಹರಾಗಿದ್ದಾರೆ. ಶಕ್ತಿ ಯೋಜನೆಯಡಿ ತುಮಕೂರು ಜಿಲ್ಲೆಯಲ್ಲಿ ಪ್ರತಿದಿನ ಸರಾಸರಿ 3.09 ಲಕ್ಷ ಪ್ರಯಾಣಿಕರಿಗೆ ಸಾರಿಗೆ ಸೌಲಭ್ಯವನ್ನು ಒದಗಿಸುತ್ತಿದ್ದು, ಇದರಲ್ಲಿ 1.98 ಲಕ್ಷಕ್ಕೂ ಅಧಿಕ ಮಹಿಳಾ ಪ್ರಯಾಣಿಕರು ಶಕ್ತಿ ಯೋಜನೆಯ ಪ್ರಯೋಜನ ಪಡೆಯುತ್ತಿದ್ದಾರೆ ಎಂದು ತಿಳಿಸಿದರು.

ಸಭೆಯಲ್ಲಿ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಉಪಾಧ್ಯಕ್ಷರು ಹಾಗೂ ಸದಸ್ಯರು, ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ಜಿ.ಪ್ರಭು, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ (ಅಭಿವೃದ್ಧಿ), ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ(ಆಡಳಿತ), ವಿವಿಧ ಇಲಾಖೆಗಳ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ಭಾಗಿಯಾಗಿದ್ದರು.

# ಗರ್ಭಿಣಿ ಮಹಿಳೆಯರು ಪ್ರತಿ ತಿಂಗಳು ಎರಡು ಬಾರಿ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು : ಡಾ.ಯಲ್ಲಾ ರಮೇಶ್ ಬಾಬು



**ಬಳ್ಳಾರಿ:** ಜಿಲ್ಲೆಯಲ್ಲಿ ತಾಯಿ ಮಗುವಿನ ಮರಣ ಪ್ರಮಾಣ ಕಡಿಮೆಗೊಳಿಸುವ ನಿಟ್ಟಿನಲ್ಲಿ ಪ್ರತಿ ತಿಂಗಳು 9 ಮತ್ತು 24 ರಂದು ಎರಡು ಬಾರಿ ಗರ್ಭಿಣಿ ಮಹಿಳೆಯರು ತಮ್ಮ ಆರೋಗ್ಯ ತಪಾಸಣೆ ಮಾಡಿಸಿಕೊಳ್ಳಬೇಕು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ತಾಲೂಕು ಆರೋಗ್ಯ ಅಧಿಕಾರಿಗಳ ಕಾರ್ಯಾಲಯ ಸಂಯುಕ್ತಾಶ್ರಯದಲ್ಲಿ ಕುಡತಿನಿ ಪಟ್ಟಣದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಶುಕ್ರವಾರ ಹಮ್ಮಿಕೊಂಡಿದ್ದ ಸುರಕ್ಷಾ ಮಾತೃತ್ವ ಅಭಿಯಾನ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಮಾತೃತ್ವ ಸುರಕ್ಷಾ ಅಭಿಯಾನದ ಮೂಲಕ ಗರ್ಭಿಣಿಯರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಹಲವು ಸುರಕ್ಷಾ ಕ್ರಮಗಳು ಜಾರಿಗೊಳಿಸಿದೆ. ಗರ್ಭಿಣಿಯರ ಸುರಕ್ಷತೆ ದೃಷ್ಟಿಯಿಂದ ಪ್ರತಿ ತಿಂಗಳು 2 ಬಾರಿ ಗರ್ಭಿಣಿಯರ ಆರೋಗ್ಯ ತಪಾಸಣೆ ಕೈಗೊಂಡು, ಗರ್ಭಿಣಿಯರಿಗೆ ಗುಣಮಟ್ಟದ ಆರೋಗ್ಯ ಸೇವೆ ಒದಗಿಸುವ ನಿಟ್ಟಿನಲ್ಲಿ ಆರೋಗ್ಯ ಇಲಾಖೆ ಕ್ರಮ ವಹಿಸುತ್ತಿದೆ ಎಂದರು.

ಗರ್ಭಿಣಿಯರಿಗೆ ಅಗತ್ಯವಾದ ಪೌಷ್ಠಿಕಾಂಶದ ಆಹಾರ, ಆರೋಗ್ಯ ಸೇವೆ ಒದಗಿಸಿ ಪ್ರಸವಪೂರ್ವ ತಪಾಸಣೆ ಸ್ತ್ರೀರೋಗ ವೈದ್ಯರಿಂದ 2ನೇ ಅಥವಾ 3ನೇ ತ್ರೈಮಾಸಿಕದಲ್ಲಿ ಕನಿಷ್ಠ 1 ಬಾರಿ ತಪಾಸಣೆ ನಡೆಸಲಾಗುತ್ತದೆ. ಗರ್ಭಧಾರಣೆಯ 3 ತಿಂಗಳ ಮೊದಲು ಮತ್ತು ಗರ್ಭಧಾರಣೆಯ 1ನೆ ತ್ರೈಮಾಸಿಕದಲ್ಲಿ ಫೋಲಿಕ್ ಆಮ್ಲ ಮಾತ್ರೆಗಳನ್ನು ಸಹ ನೀಡಲಾಗುತ್ತಿದೆ. 500 ಎಂಸಿಜಿ ಕ್ಯಾಲ್ಸಿಯಂ ಅನ್ನು ಗರ್ಭಧಾರಣೆಯ 14ನೆ ವಾರದಿಂದ ಹೆರಿಗೆ ಮತ್ತು 6 ತಿಂಗಳ ನಂತರದ ಅವಧಿಯವರೆಗೆ ನೀಡಲಾಗುತ್ತಿದೆ. 3ನೆ ತ್ರೈಮಾಸಿಕ ಪಿಡಬ್ಲ್ಯೂಗಳ ಲೈನ್ ಪಟ್ಟಿ ಮಾಡಲಾಗುತ್ತಿದೆ. ಓರಲ್ ಗ್ಲೂಕೋಸ್ ಟಾಲರೆನ್ಸ್ ಟೆಸ್ಟ್ ಬಳಸಿಕೊಂಡು ಗರ್ಭಾವಸ್ಥೆಯ ಮಧುಮೇಹ ಮೆಲ್ಲಿಟಸ್‌ಗಾಗಿ ಪ್ರತಿ ಗರ್ಭಿಣಿಯ ಕಡ್ಡಾಯ ತಪಾಸಣೆ ಮಾಡಲಾಗುತ್ತಿದೆ ಎಂದು ಅವರು ತಿಳಿಸಿದರು.


ಚೊಚ್ಚಲು ಗರ್ಭಿಣಿ, ಎತ್ತರ ಕಡಿಮೆ, ಅಧಿಕ ರಕ್ತದೊತ್ತಡ, ರಕ್ತದಲ್ಲಿ ಕಬ್ಬಿಣಾಂಶ ಕೊರತೆ, ಅವಳಿ ಜವಳಿ ಗರ್ಭಿಣಿ, ವಿವಾಹವಾಗಿ ಐದಕ್ಕಿಂತ ಹೆಚ್ಚು ವರ್ಷಗಳ ನಂತರ ಗರ್ಭಿಣಿಯಾಗಿರುವುದು, ಮೊದಲ ಹೆರಿಗೆ ಸಿಸೇರಿಯನ್ ಮುಂತಾದ ಕಾರಣಗಳಿದ್ದರೆ ಆಯಾ ವ್ಯಾಪ್ತಿಯ ಪ್ರಾಥಮಿಕ ಆರೋಗ್ಯ ಕೇಂದ್ರ, ಸಮುದಾಯ ಆರೋಗ್ಯ ಕೇಂದ್ರ, ತಾಲ್ಲೂಕು ಸಾರ್ವಜನಿಕ ಆಸ್ಪತ್ರೆ ಹಾಗೂ ಜಿಲ್ಲಾ ಆಸ್ಪತ್ರೆಯಲ್ಲಿ ದಾಖಲಿಸಿ ನಿಗಾವಹಿಸುವ ಮೂಲಕ ಹೆರಿಗೆ ಅವಧಿಯಲ್ಲಿ ಕಂಡು ಬರಬಹುದಾದ ಸಂಭವನಿಯ ತೊಂದರೆಗಳನ್ನು ವೈದ್ಯರ ನಿಗಾವಣೆ ಮೂಲಕ ಗುರ್ತಿಸಿ ಸುರಕ್ಷಿತ ಹೆರಿಗೆ ಕೈಗೊಳ್ಳಲಾಗುವುದು ಎಂದರು.

ಯಾವುದೇ ಗ್ರಾಮದಿಂದ ರಾತ್ರಿ ವೇಳೆ ತುರ್ತು ಚಿಕಿತ್ಸೆ ಕೋರಿ ಬರುವ ಬಾಣಂತಿಯರಿಗೆ ವೈದ್ಯರು ಮತ್ತು ಆಸ್ಪತ್ರೆಯಲ್ಲಿನ ಸಿಬ್ಬಂದಿ ತಕ್ಷಣವೇ ಸ್ಪಂದನೆ ನೀಡಬೇಕು ಎಂದು ಇದೇ ಸಂದರ್ಭದಲ್ಲಿ ತಿಳಿಸಿದರು.

ಅಭಿಯಾನದಲ್ಲಿ ತಪಾಸಣೆಗೆ ಆಗಮಿಸಿದ ಗರ್ಭಿಣಿಯರಿಗೆ ಸೀಮಂತ ಕಾರ್ಯಕ್ರಮ ಮತ್ತು ವಿಶೇಷ ಭೋಜನ ವ್ಯವಸ್ಥೆ ಏರ್ಪಡಿಸಲಾಗಿತ್ತು.

ಈ ವೇಳೆ ಕುಡುತಿನಿ ಪಟ್ಟಣ ಪಂಚಾಯಿತಿ ಅಧ್ಯಕ್ಷರಾದ ಬಸಮ್ಮ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ ಹೆಚ್ ದಾಸಪ್ಪನವರ, ಕುಡುತಿನಿ ಪ್ರಾಥಮಿಕ ಆರೋಗ್ಯ ಕೇಂದ್ರದ ಆಡಳಿತ ವೈದ್ಯಾಧಿಕಾರಿ ಡಾ.ಗುರುಬಸವರಾಜ್, ಡಾ.ಭಾಗ್ಯಲಕ್ಷ್ಮಿ, ಸಮುದಾಯ ಆರೋಗ್ಯ ಅಧಿಕಾರಿಗಳು, ಆಸ್ಪತ್ರೆ ಸಿಬ್ಬಂದಿಗಳು, ಆಶಾ ಕಾರ್ಯಕರ್ತರು ಸೇರಿದಂತೆ ಇತರರು ಉಪಸ್ಥಿತರಿದ್ದರು.

# ರಾಷ್ಟ್ರೀಯ ಮತದಾರರ ದಿನಾಚರಣೆ : ಪ್ರತಿಜ್ಞಾವಿಧಿ ಸ್ವೀಕಾರ



**ತುಮಕೂರು : ರಾಷ್ಟ್ರೀಯ ಮತದಾರರ ದಿನಾಚರಣೆ ಪ್ರಯುಕ್ತ ಜಿಲ್ಲಾಧಿಕಾರಿಗಳ ಕಚೇರಿಯಲ್ಲಿ ಶುಕ್ರವಾರ ಪ್ರತಿಜ್ಞಾವಿಧಿ ಬೋಧಿಸಲಾಯಿತು. ಈ ಸಂದರ್ಭದಲ್ಲಿ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಉಪವಿಭಾಗಾಧಿಕಾರಿ ಗೌರವ್ ಕುಮಾರ್ ಶೆಟ್ಟಿ, ಚುನಾವಣಾ ತಹಶೀಲ್ದಾರ್ ರೇಷ್ಮ, ಜಿಲ್ಲಾ ಮಟ್ಟದ ವಿವಿಧ ಅಧಿಕಾರಿಗಳು ಹಾಗೂ ಜಿಲ್ಲಾಧಿಕಾರಿಗಳ ಕಚೇರಿ ಸಿಬ್ಬಂದಿ ಪ್ರತಿಜ್ಞಾವಿಧಿ ಸ್ವೀಕರಿಸಿದರು. ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ ಅವರು ಪ್ರತಿಜ್ಞಾವಿಧಿ ಬೋಧಿಸಿದರು.**

# ಬೆಂಗಳೂರಿನಲ್ಲಿ ಬಾಂಗ್ಲಾದೇಶಿ ಮಹಿಳೆ ಮೇಲೆ ಅತ್ಯಾಚಾರ ಎಸಗಿ ಕೊಲೆ



**ಬೆಂಗಳೂರು:** ಕಲ್ಕೆರೆಯ ದುಬಾರಿ ವಸತಿ ಅಪಾರ್ಟ್‌ಮೆಂಟ್‌ನಲ್ಲಿ ಮನೆಗೆಲಸ ಮಾಡುತ್ತಿದ್ದ ಬಾಂಗ್ಲಾದೇಶದ 28 ವರ್ಷದ ಮಹಿಳೆ ಶುಕ್ರವಾರ ಬೆಳಗ್ಗೆ ಕಲ್ಕೆರೆ ಕೆರೆ ಬಳಿ ಶವವಾಗಿ ಪತ್ತೆಯಾಗಿದ್ದಾರೆ.

ಮಹಿಳೆ ಮೇಲೆ ಅತ್ಯಾಚಾರ ಎಸಗಿ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಆರೋಪಿಗಳು ಆಕೆಯ ತಲೆ ಮೇಲೆ ಕಲ್ಲು ಎತ್ತಿಹಾಕಿ ಕೊಂದಿದ್ದು, ಈ ಸಂಬಂಧ ರಾಮಮೂರ್ತಿನಗರ ನಗರ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಸಂತ್ರಸ್ತೆಯನ್ನು ನಜ್ಮಾ ಎಂದು ಗುರುತಿಸಲಾಗಿದ್ದು, ಕಲ್ಕೆರೆ ನಿವಾಸಿಯಾಗಿದ್ದರು. ಆಕೆಯ ಪತಿ ಸುಮನ್ ಬಿಬಿಎಂಪಿಯಲ್ಲಿ ಪೌರಕಾರ್ಮಿಕರಾಗಿದ್ದಾರೆ.

ಮೂರು ಮಕ್ಕಳ ತಾಯಿಯಾಗಿರುವ ನಜ್ಮಾ ಗುರುವಾರ ಮಧ್ಯಾಹ್ನ ಕೆಲಸ ಮುಗಿಸಿ ಮನೆಗೆ ಮರಳುತ್ತಿದ್ದಾಗ ಅವರ ಮೇಲೆ ಹಲ್ಲೆ ನಡೆಸಲಾಗಿದೆ ಎಂದು ಶಂಕಿಸಲಾಗಿದೆ.

ಪತ್ನಿ ಮನೆಗೆ ಹಿಂತಿರುಗದ ಕಾರಣ, ಆಕೆಯ ಪತಿ ಹುಡುಕಾಟ ನಡೆಸಿದ್ದರು ಮತ್ತು ನಂತರ ಹಿಂತಿರುಗಬಹುದೆಂದು ಭಾವಿಸಿ ಮನೆಗೆ ಹಿಂತಿರುಗಿ ಕಾಯುತ್ತಿದ್ದರು. ಆದರೆ ಶುಕ್ರವಾರ ಬೆಳಗ್ಗೆ, ಬೆಳಗಿನ ವಾಕರ್ ಒಬ್ಬರು ಕೆರೆಯ ಬಳಿ ಶವವನ್ನು ನೋಡಿ ಪೊಲೀಸ್ ನಿಯಂತ್ರಣ ಕೊಠಡಿಗೆ ಕರೆ ಮಾಡಿ ಘಟನೆಯ ಬಗ್ಗೆ ಮಾಹಿತಿ ನೀಡಿದ್ದಾರೆ.

ಮೊದಲ ನೋಟದಲ್ಲೇ ಕೊಲೆಗೂ ಮುನ್ನ ಮಹಿಳೆಯ ಮೇಲೆ ಲೈಂಗಿಕ ದೌರ್ಜನ್ಯ ನಡೆದಿರುವುದು ಕಂಡುಬರುತ್ತಿದೆ. ಘಟನೆ ಗುರುವಾರ ಸಂಜೆ ಅಥವಾ ರಾತ್ರಿ ನಡೆದಿರಬೇಕು. ಸಂತ್ರಸ್ತೆ ಅಕ್ರಮ ಮಾರ್ಗದ ಮೂಲಕ ದೇಶ ಪ್ರವೇಶಿಸಿರುವ ಶಂಕೆ ವ್ಯಕ್ತವಾಗಿದೆ. ಆಕೆಯ ಬಗ್ಗೆ ಯಾವುದೇ ಸ್ಥಳೀಯ ದಾಖಲೆ ಪುರಾವೆಗಳಿಲ್ಲ ಎಂದು ಪೊಲೀಸರ್ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಆದಾಗ್ಯೂ, ಆಕೆಯ ಪತಿ ಬಳಿ ದಾಖಲೆಗಳಿದ್ದು, ಅವರು ಬಾಂಗ್ಲಾದೇಶದವರೇ ಎಂದು ನಾವು ಪರಿಶೀಲಿಸುತ್ತಿದ್ದೇವೆ. ಕುಟುಂಬವು ಕಳೆದ ಐದು ವರ್ಷಗಳಿಂದ ನಗರದಲ್ಲಿ ವಾಸಿಸುತ್ತಿದೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಆವಲಹಳ್ಳಿಯ ವಿರ್ಗೋ ನಗರದಲ್ಲಿರುವ ಖಾಸಗಿ ಆಸ್ಪತ್ರೆಯ ಶವಾಗಾರಕ್ಕೆ ಸ್ಥಳಾಂತರಿಸಲಾಗಿದೆ" ಎಂದು ಅಧಿಕಾರಿ ಹೇಳಿದ್ದಾರೆ.

# ಫೈನಾನ್ಸ್ ಕಂಪನಿ ಹಾವಳಿ: ಕಿರುಕುಳ ತಾಳಲಾರದೆ ಪಲಾಯನಗೈದ ಗದಗ ಹೋಟೆಲ್ ಉದ್ಯಮಿ!

**ಗದಗ:** ಮೈಕ್ರೋಫೈನಾನ್ಸ್ ಕಂಪನಿಗಳ ಕಿರುಕುಳ ತಾಳಲಾರದೆ ಗದಗ ಜಿಲ್ಲೆಯ ಅನೇಕ ಕುಟುಂಬಗಳು ಪಟ್ಟಣವನ್ನು ತೊರೆಯುತ್ತಿವೆ ಎಂದು ಜನರು ದೂರು ನೀಡುತ್ತಿದ್ದಾರೆ. ಹಣಕಾಸು ಕಂಪನಿಗಳು 50,000 ರೂ. ಸಾಲ ನೀಡುವ ಮೊದಲು 1.5 ಲಕ್ಷ ರೂ. ಮೌಲ್ಯದ ಬಾಂಡ್‌ಗಳನ್ನು ಪಡೆದುಕೊಂಡಿವೆ ಎಂದು ಆರೋಪಿಸಿವೆ.

ಇಂತದ್ದೆ ಒಂದು ಪ್ರಕರಣದಲ್ಲಿ, ಗದಗದ ಹೋಟೆಲ್ ಮಾಲೀಕರೊಬ್ಬರು ಮೈಕ್ರೋಫೈನಾನ್ಸ್ ಕಂಪನಿಯಿಂದ ಕಿರುಕುಳ ಅನುಭವಿಸುತ್ತಿದ್ದಾರೆ. ಫೈನಾನ್ಸ್ ಕಂಪನಿಯ ಕಿರುಕುಳದಿಂದ ತಮ್ಮ ಹೋಟೆಲ್‌ಗೆ ಬೀಗ ಹಾಕಿ ಕುಟುಂಬದೊಂದಿಗೆ ಬೇರೆ ಪಟ್ಟಣಕ್ಕೆ ಸ್ಥಳಾಂತರಗೊಂಡರು.

ಪರಶುರಾಮ್ ಹಬೀಬ್ ಗದಗ ಪಟ್ಟಣದ ಎಪಿಎಂಸಿ ಯಾರ್ಡ್‌ನಲ್ಲಿ ಕ್ಯಾಂಟೀನ್ ಹೊಂದಿದ್ದರು. ಇತ್ತೀಚೆಗೆ ಅವರು ರಹಸ್ಯಸ್ಥಳದಿಂದ ತಮ್ಮ ಸ್ನೇಹಿತರಿಗೆ ವೀಡಿಯೊ ಕರೆ ಮಾಡಿ ಹಣಕಾಸು ಕಂಪನಿಯ ಚಿತ್ರಹಿಂಸೆಯನ್ನು ಸಹಿಸಲಾಗದೆ ಆತ್ಮಹತ್ಯೆ ಮಾಡಿಕೊಳ್ಳಲು ನಿರ್ಧರಿಸಿರುವುದಾಗಿ ಹೇಳಿದರು.

ಪ್ರತಿ ವಾರ ಬಡ್ಡಿಯನ್ನು ಪಾವತಿಸಬೇಕಾಗಿರುವುದರಿಂದ ಈಗ 60 ಲಕ್ಷ ರೂ.ಗಳ ಹೊಣೆಗಾರಿಕೆಯನ್ನು ಹೊಂದಿದ್ದೇನೆ ಎಂದು ಅವರು ಅವರಿಗೆ ತಿಳಿಸಿದರು. ಸಾಲ ಪಡೆದ ಮೊತ್ತ ಎಷ್ಟು ಎಂಬ ಪ್ರಶ್ನೆಗೆ ಅವರು ಸರಿಯಾಗಿ ಉತ್ತರಿಸಿಲ್ಲ. ಅವರ ಸಹೋದರನಿಗೂ ತಿಳಿದಿಲ್ಲ. ಮಹಿಳಾ ಕಾನ್‌ಸ್ಟೆಬಲ್‌ನ ಪತಿ ಸಾಲವನ್ನು ಮರುಪಾವತಿಸಲು ಕಿರುಕುಳ ನೀಡುತ್ತಿದ್ದಾರೆ ಎಂದು ಪರಶುರಾಮ್ ಹೇಳಿದ್ದಾರೆ. ಹಣವನ್ನು ಬೇಗ ಪಾವತಿಸದಿದ್ದರೆ ಪರಶುರಾಮ್‌ನನ್ನು ಕೊಲೆ ಮಾಡುವುದಾಗಿ ಮಹಿಳಾ ಪೊಲೀಸ್ ಪೇದೆ ಪತಿ ಬೆದರಿಕೆ ಹಾಕಿದ್ದಾರೆ ಎಂದು ಅವರು ಹೇಳಿದರು.

## ವಿದ್ಯಾರ್ಥಿಗಳಿಗೆ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಕರೆ

# ಭ್ರಷ್ಟಾಚಾರ ಸಹಿಸದಿರಿ, ಭ್ರಷ್ಟಾಚಾರದಲ್ಲಿ ತೊಡಗದಿರಿ

**ಚಿತ್ರದುರ್ಗ :** ಸರ್ಕಾರ ವಿದ್ಯಾರ್ಥಿ ನಿಲಯಗಳನ್ನು ತೆರೆದು, ಎಲ್ಲ ಸೌಲಭ್ಯಗಳನ್ನು ನೀಡಿದೆ. ಚೆನ್ನಾಗಿ ಓದಿ ಕೆಲಸ ಸಂಪಾದಿಸುವುದರ ಜೊತೆಗೆ ನಾಡಿಗೂ ಒಳಿತು ಮಾಡಿ. ಪ್ರಾಮಾಣಿಕ ಜೀವನ ನಡೆಸಿ, ಭ್ರಷ್ಟಾಚಾರವನ್ನು ಸಹಿಸದಿರಿ, ಭ್ರಷ್ಟಾಚಾರದಲ್ಲಿ ತೊಡಗದಿರಿ ಎಂದು ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಹಾಸ್ಟೆಲ್ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಶುಕ್ರವಾರ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ನಗರದಲ್ಲಿ ನಡೆಸುತ್ತಿರುವ ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ಹಾಗೂ ಬಾಲಕಿಯರ ವಸತಿ ನಿಲಯಗಳು ಹಾಗೂ ಮಕ್ಕಳ ರಕ್ಷಣಾ ಘಟಕದಿಂದ ನಿರ್ವಹಿಸುತ್ತಿರುವ ಸರ್ಕಾರಿ ಬಾಲಕಿಯರ ಬಾಲ ಮಂದಿರಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ, ವಿದ್ಯಾರ್ಥಿ ದೆಸೆಯಿಂದಲೇ ಲಂಚ, ಭ್ರಷ್ಟಾಚಾರದ ವಿರುದ್ಧ, ಹೋರಾಟ ಮಾಡುವ ಮನೋಭಾವ ಬೆಳಸಿಕೊಳ್ಳಿ. ಭ್ರಷ್ಟಾಚಾರ ಎಲ್ಲೇ ಕಂಡುಬಂದರೂ ಖಂಡಿಸಿ, ಭ್ರಷ್ಟಾಚಾರಕ್ಕೆ ಆಸ್ಪದ ನೀಡದಿರಿ. ಮುಂದೆ ಸರ್ಕಾರಿ ನೌಕರರಾದರೆ, ನಿಮ್ಮ ವೃತ್ತಿ ಜೀವನದಲ್ಲಿ ಪ್ರಾಮಾಣಿಕತೆಯನ್ನು ತಪ್ಪದೇ ಅಳವಡಿಸಿಕೊಳ್ಳಿ. ಇಂದು ಭ್ರಷ್ಟಾಚಾರ ಎಲ್ಲೆಡೆ ಕಂಡುಬರುತ್ತಿದೆ. ಇದರಿಂದಾಗಿಯೇ ನಮ್ಮ ದೇಶ ಇನ್ನೂ ಅಭಿವೃದ್ಧಿಯಲ್ಲಿ ನಿರೀಕ್ಷಿತ ಯಶಸ್ಸು ಕಂಡಿಲ್ಲ. ಇಂದಿನ ಯುವಜನತೆಯ ಕೈಯಲ್ಲೇ ದೇಶದ ಮುಂದಿನ ಭವಿಷ್ಯವಿದೆ. ಮುಂದುವರೆದ ರಾಷ್ಟ್ರಗಳ ಸಾಲಿಗೆ ನಮ್ಮ ದೇಶವು ಸೇರ್ಪಡೆಯಾಗಬೇಕು. ಇದಕ್ಕೆ ವಿದ್ಯಾರ್ಥಿಗಳು ಶ್ರಮಿಸಬೇಕು ಎಂದರು.



**ವಿದ್ಯಾರ್ಥಿನಿಲಯ ನಿರ್ವಹಣೆಗೆ ಮೆಚ್ಚುಗೆ:** ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ನಗರದ ವಿದ್ಯಾರ್ಥಿನಿಲಯಗಳ ನಿರ್ವಹಣೆಗೆ ಮೆಚ್ಚುಗೆ ವ್ಯಕ್ತಪಡಿಸಿದರು. ಬೇರೆ ಜಿಲ್ಲೆಗಳಿಗೆ ಭೇಟಿ ನೀಡಿದ ಸಂದರ್ಭದಲ್ಲಿ ಹಾಸ್ಟೆಲ್‌ಗಳ ನಿರ್ವಹಣೆಯಲ್ಲಿ ಸಾಕಷ್ಟು ಲೋಪದೋಷಗಳು ಕಂಡುಬಂದಿದ್ದವು. ಆದರೆ ಇಲ್ಲಿನ ಹಾಸ್ಟೆಲ್‌ಗಳಲ್ಲಿ ಇದಕ್ಕೆ ಆಸ್ಪದ ನೀಡಿಲ್ಲ ಎಂದರು.

ಜಿಲ್ಲೆಯ ಹಾಸ್ಟೆಲ್‌ಗಳ ನಿರ್ವಹಣೆಗೆ ವಿವಿಧ ಇಲಾಖೆಗಳ ಜಿಲ್ಲಾ ಮಟ್ಟದ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳನ್ನು ನೇಮಿಸಲಾಗಿದೆ. ಜಿಲ್ಲಾ ಕೇಂದ್ರವಾದ ಚಿತ್ರದುರ್ಗ ವಿದ್ಯಾರ್ಥಿನಿಲಯಗಳಿಗೆ ಜಿಲ್ಲಾ ಮಟ್ಟದ ಅಧಿಕಾರಿಗಳು ವಾರಕ್ಕೊಮ್ಮೆ ಭೇಟಿ ನೀಡಿ ಪರಿಶೀಲಿಸುತ್ತಾರೆ. ವಿದ್ಯಾರ್ಥಿಗಳೊಂದಿಗೆ ಆಹಾರ ಸೇವಿಸಿ ಗುಣಮಟ್ಟ ಪರೀಕ್ಷಿಸುತ್ತಾರೆ. ಮೂಲಭೂತ ಸೌಕರ್ಯಗಳ ಬಗ್ಗೆಯೂ ವರದಿ ನೀಡುತ್ತಾರೆ. ಜಿಲ್ಲೆಯಲ್ಲಿ ಸರ್ಕಾರಿ ಶಾಲೆಗಳು, ವಿದ್ಯಾರ್ಥಿ ನಿಲಯಗಳು ಹಾಗೂ ಆಸ್ಪತ್ರೆಗಳ ನಿರ್ವಹಣೆಗೆ ಹೆಚ್ಚಿನ ಒತ್ತು ನೀಡಲಾಗಿದೆ. ಡಿಎಂಎಫ್, ಕೆಎಂಇಆರ್‌ಸಿ, ಸಿಎಸ್‌ಆರ್ ಅನುದಾನದಲ್ಲಿ ಹೆಚ್ಚಿನ ಹಣವನ್ನು ಈ ಕ್ಷೇತ್ರಗಳ ಅಭಿವೃದ್ಧಿ ಮೀಸಲಿರಿಸಿರುವುದಾಗಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಹಾಗೂ ಜಿ.ಪಂ. ಸಿಇಒ ಎಸ್. ಜೆ. ಸೋಮಶೇಖರ್ ಅವರು, ನ್ಯಾಯಮೂರ್ತಿ ಕೆ. ಎನ್.ಫಣೀಂದ್ರ ಅವರಿಗೆ ವಿವರಿಸಿದರು.

**ಕಂಪ್ಯೂಟರ್ ಕೇಂದ್ರ ಹಾಗೂ ಲೈಬ್ರರಿ ತೆರೆಯಲು ಸೂಚನೆ:** ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯದಲ್ಲಿನ ಪಿ.ಯು. ವಿದ್ಯಾರ್ಥಿಗಳಿಗೆ ಅನುಕೂಲವಾಗುವಂತೆ ಕಂಪ್ಯೂಟರ್ ಕಲಿಕಾ ಕೇಂದ್ರ ಹಾಗೂ ಲೈಬ್ರರಿ ತೆರೆಯಲು ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಸೂಚನೆ ನೀಡಿದರು.

ಸರ್ಕಾರಿ ನೇಮಕಾತಿಗಳಲ್ಲಿ ಕಂಪ್ಯೂಟರ್ ಸಾಕ್ಷರತೆಯನ್ನು ಕಡ್ಡಾಯಗೊಳಿಸಲಾಗಿದೆ. ಉನ್ನತ ಶಿಕ್ಷಣಕ್ಕೂ ಕಂಪ್ಯೂಟರ್ ಜ್ಞಾನ ಅವಶ್ಯಕವಾಗಿದೆ. ವಿದ್ಯಾರ್ಥಿಗಳು ಕಲಿಕೆ ಹಾಗೂ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗೆ ಅನುಕೂಲವಾಗುವಂತೆ, ಸಿಎಸ್‌ಆರ್ ನಿಧಿಯಡಿ ಕಂಪ್ಯೂಟರ್ ಕೇಂದ್ರ ಹಾಗೂ ಲೈಬ್ರರಿ ತೆರೆಯಲು ಹೇಳಿದರು. ವಿದ್ಯಾರ್ಥಿಗಳ ಓದಿನ ಅನುಕೂಲಕ್ಕಾಗಿ ಟೇಬಲ್ ಹಾಗೂ ಚೇರ್ ವ್ಯವಸ್ಥೆ ಕಲ್ಪಿಸುವಂತೆ ಸೂಚಿಸಿದರು. ಮೆಟ್ರಿಕ್ ನಂತರದ ಬಾಲಕಿಯರ ವಸತಿ ನಿಲಯದ ಸ್ಪರ್ಧಾತ್ಮಕ ಅಧ್ಯಯನ ಕೇಂದ್ರದ ಅಚ್ಚುಕಟ್ಟಿನ ನಿರ್ವಹಣೆಗೆ ನ್ಯಾಯಮೂರ್ತಿ ಕೆ.ಎನ್.ಫಣೀಂದ್ರ ಸಂತಸ ವ್ಯಕ್ತಪಡಿಸಿದರು.

ಬಾಲಕಿಯರ ಸರ್ಕಾರಿ ಬಾಲಮಂದಿರ ಬಳಿ ಆಗಮಿಸಿದ ಪೋಷಕರು ಬಾಲಮಂದಿರ ನಿರ್ವಹಣೆಯ ಬಗ್ಗೆ ಮೆಚ್ಚುಗೆ ವ್ಯಕ್ತಪಡಿಸಿ, ಮನೆಗಿಂತಲೂ ಹೆಚ್ಚಿನ ಸೌಲಭ್ಯ ನಮ್ಮ ಮಕ್ಕಳಿಗೆ ಇಲ್ಲಿ ದೊರೆಯುತ್ತಿದೆ ಎಂಬ ಅಭಿಪ್ರಾಯವನ್ನು ನ್ಯಾಯಮೂರ್ತಿಗಳ ಮುಂದೆ ತಿಳಿಸಿದರು. ಬಾಲಮಂದಿರದ ಮಕ್ಕಳಿಗೆ ಜಿಪಂ ಸಿಇಒ ಸೋಮಶೇಖರ್ ಅವರು ಸ್ವಂತ ಹಣದಲ್ಲಿ ವಿವಿಧ ಬಗೆಯ ಆಟಿಕೆಗಳನ್ನು ಪೂರೈಸಿದ್ದನ್ನು ತಿಳಿದು, ನ್ಯಾಯಮೂರ್ತಿಗಳು ಸಂತಸ ವ್ಯಕ್ತಪಡಿಸಿದರು.

ಜಿ.ಪಂ. ಸಿಇಓ ಎಸ್.ಜೆ.ಸೋಮಶೇಖರ್, ಲೋಕಾಯುಕ್ತ ಅಪರ ನಿಬಂಧಕರಾದ ಪೃಥ್ವಿರಾಜ್ ವರ್ಣೇಕರ್ ಹಾಗೂ ಜಿ.ವಿ. ವಿಜಯಾನಂದ, ಉಪಲೋಕಾಯುಕ್ತರ ಆಪ್ತ ಕಾರ್ಯದರ್ಶಿ ಹಾಗೂ ಸಿವಿಲ್ ನ್ಯಾಯಾಧೀಶರಾದ ಕಿರಣ್ ಪಿ. ಎಂ. ಪಾಟೀಲ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ನ್ಯಾ.ಎಂ.ವಿಜಯ್, ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಕುಮಾರಸ್ವಾಮಿ, ಲೋಕಾಯುಕ್ತ ಜಿಲ್ಲಾ ಪೊಲೀಸ್ ಅಧೀಕ್ಷಕ ಎನ್.ವಾಸುದೇವರಾಮ್, ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ, ಹಿಂದುಳಿದ ವರ್ಗಗಳ ಜಿಲ್ಲಾ ಅಧಿಕಾರಿ ಸುಬ್ರಾ ನಾಯಕ್, ಸೇರಿದಂತೆ ಇತರೆ ಅಧಿಕಾರಿಗಳು ಉಪಸ್ಥಿತರಿದ್ದರು.

## ಮೈಕ್ರೋ ಫೈನಾನ್ಸ್ ಸಂಸ್ಥೆಗಳ ದಬ್ಬಾಳಿಕೆ ತಡೆಗೆ ಸರ್ಕಾರದ ಕ್ರಮ

# ಕಿರುಕುಳ ನೀಡಿದರೆ ಸಹಾಯವಾಣಿಗೆ ಮಾಹಿತಿ ನೀಡಿ

**ಬೆಂಗಳೂರು:** ಮಧ್ಯಮ ಹಾಗೂ ಕೆಳ ಮಧ್ಯಮ ವರ್ಗದವರು ತಮ್ಮ ಅವಶ್ಯಕತೆಗಳಿಗಾಗಿ ಸಣ್ಣ ಫೈನಾನ್ಸ್ ಕಂಪನಿಗಳಲ್ಲಿ ಸಾಲ ಪಡೆದು,ಮರುಪಾವತಿಸುವಲ್ಲಿ ವಿಳಂಬ ಮಾಡಿದ ಸಾಲಗಾರರ ಮೇಲೆ ಅನಧಿಕೃತ ಲೇವಾದೇವಿದಾರರು,ಹಣಕಾಸು ಸಂಸ್ಥೆಗಳಿಂದ ಆಗುತ್ತಿರುವ ದಬ್ಬಾಳಿಕೆ,ದೌರ್ಜನ್ಯಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ದೌರ್ಜನ್ಯ ತಡೆಗೆ ಹಲವು ಕ್ರಮಗಳನ್ನು ತೆಗೆದುಕೊಂಡಿದೆ.

ತುರ್ತು ವೈದ್ಯಕೀಯ ಚಿಕಿತ್ಸೆ, ಮಕ್ಕಳ ವಿದ್ಯಾಭ್ಯಾಸ, ಮದುವೆ ಇನ್ನಿತರ ಖರ್ಚಿಗಾಗಿ ತುರ್ತಾಗಿ ಕೈ ಸಾಲ ಪಡೆಯುವ ಪದ್ಧತಿ ರೂಢಿಯಲ್ಲಿದೆ.ಬಹುತೇಕರು ಪಡೆದ ಸಾಲವನ್ನು ವಾಪಸ್ಸು ನೀಡುತ್ತಾರೆ. ಆದರೆ ಕೆಲವು ವ್ಯಕ್ತಿಗಳು ಸಾಮಾಜಿಕ,ವೈಯಕ್ತಿಕ ಅಥವಾ ಉತ್ಪಾದಕವಲ್ಲದ ಕಾರ್ಯಗಳಿಗಾಗಿ ಹಣ ಖರ್ಚು ಮಾಡುವುದರಿಂದ, ಮರುಪಾವತಿ ಕ್ಷಮತೆ ಕಡಿಮೆ ಇರುತ್ತದೆ. ಇಂತಹ ಸಂದರ್ಭಗಳಲ್ಲಿ ಸಾಲ ನೀಡಿದವರು ಮರು ವಸೂಲಿಗಾಗಿ ಒತ್ತಾಯಿಸುತ್ತಾರೆ. ಕೆಲವೆಡೆ ಇದು ಕಿರುಕುಳವಾಗಿ ಬೆಳೆಯುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ.

ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ

ಕಳೆದ ಜನವರಿ 25 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ, ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕರ್ನಾಟಕ ವಲಯದ ಅಧ್ಯಕ್ಷರು, ಭಾರತೀಯ ರಿಸರ್ವ್ ಬ್ಯಾಂಕ್ (ಖಃಖ) ನ ಪ್ರಾಂತೀಯ ನಿರ್ದೇಶಕರು, ಹಾಗೂ ಸಾ-ಧನ್(ಖಂ-ಆಊಂಓ),ಎಕೆಎಂಐ,ಎಂಎಫ್ಐಎನ್ ಮತ್ತು ಪ್ರಮುಖ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳು , ರಾಜ್ಯಮಟ್ಟದ ಬ್ಯಾಂಕರುಗಳ ಸಮಿತಿ ಸಂಚಾಲಕರು, ಅಧಿಕಾರಿಗಳು , ಪೊಲೀಸ್, ಕಂದಾಯ, ಸಹಕಾರ ಹಾಗೂ ಆರ್ಥಿಕ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ಸಭೆ ನಡೆಸಿ. ಕಿರುಕುಳವನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ನಿರ್ದೇಶನ ನೀಡಿದ್ದಾರೆ.

ಕರ್ನಾಟಕದ ಅಧಿನಿಯಮಗಳು:

ಕರ್ನಾಟಕ ಲೇವಾದೇವಿದಾರರ ಅಧಿನಿಯಮ-1961

ಅಡಿಯಲ್ಲಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

ಈ ಅಧಿನಿಯಮದಡಿಯಲ್ಲಿ 2024ರ ಡಿಸೆಂಬರ್ 31 ರವರೆಗೆ 20,425 ಸಂಸ್ಥೆಗಳು ನೋಂದಣಿಯಾಗಿವೆ. ಅದರಲ್ಲಿ 6590 ಲೇವಾದೇವಿದಾರರು, 6772 ಪಾನ್ ಬ್ರೋಕರ್ಗಳು, 7063 ಹಣಕಾಸಿನ ಸಂಸ್ಥೆಗಳು (ಈುಟಿಚಿಟಿಛಿಜ ಅಂಡಿಂಂಡಿಚಿಣುಂಟ) ಇವೆ.

ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆ ನಿಷೇಧ ಕಾಯಿದೆ- 2004 ಪ್ರಕಾರ ಭದ್ರತಾ ಸಾಲಗಳಿಗೆ ವರ್ಷಕ್ಕೆ ಶೇ.14 ಹಾಗೂ ಭದ್ರತೆ ಇಲ್ಲದ ಸಾಲಗಳಿಗೆ ವರ್ಷಕ್ಕೆ ಗರಿಷ್ಠ ಶೇ.16 ಗರಿಷ್ಠ ಬಡ್ಡಿ ದರವನ್ನು ಲೇವಾದೇವಿದಾರರಿಗೆ ನಿಗದಿಪಡಿಸಲಾಗಿದೆ.

ಇಂತಹ ಮಾಹಿತಿಗಳನ್ನು ಸಾರ್ವಜನಿಕವಾಗಿ ಫಲಕಗಳ ಮೂಲಕ ಪ್ರದರ್ಶಿದಲು ಸಂಸ್ಥೆಗಳು ಹಾಗೂ ಸಂಬಂಧಿಸಿದ ಕಚೇರಿಗಳಿಗೆ ತಿಳಿಸಲಾಗಿದೆ. ಸಾಲಗಾರರು ಇವುಗಳನ್ನು ಸೂಕ್ಷ್ಮವಾಗಿ ಗಮನಿಸಿ ಸಾಲ ಪಡೆಯುವ ಮುನ್ನ ಲೇವಾದೇವಿ ಸಂಸ್ಥೆಗಳ ಅಧಿಕೃತ ನೋಂದಣಿ ಪತ್ರ, ಬಡ್ಡಿದರ, ವಸೂಲಿ ಪ್ರಕ್ರಿಯೆ ಇತ್ಯಾದಿಗಳ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಈ ಪ್ರಕ್ರಿಯೆಗಳಿಂದ ಸಾಲ ಮರುಪಾವತಿ ಸಂದರ್ಭದಲ್ಲಿನ ಕಿರುಕುಳ ತಪ್ಪಿಸಲು ಸಾಧ್ಯವಾಗುತ್ತದೆ.

**ಸೂಕ್ಷ್ಮ ಹಣಕಾಸು (Micro finance) ಸಂಸ್ಥೆಗಳು ಎಂದರೇನು?:**

3 ಲಕ್ಷ ರೂ.ವರೆಗೂ ಆದಾಯವಿರುವ ಸಾರ್ವಜನಿಕರಿಗೆ ಸಾಲವನ್ನು ಒದಗಿಸುವ ವ್ಯವಸ್ಥೆಯನ್ನು ಮೈಕ್ರೋ ಫೈನಾನ್ಸ್ ಎಂದು ಘೋಷಿಸಲಾಗಿದೆ. ಬ್ಯಾಂಕುಗಳಲ್ಲದ ಸಹಕಾರ ಸಂಘಗಳು, ಎನ್ಬಿಎಫ್ಸಿಗಳು, ಸರ್ಕಾರೇತರ ಸಂಸ್ಥೆಗಳು, ಟ್ರಸ್ಟ್ಗಳು, ಸಣ್ಣ ಅಂಗಡಿ ಮಾಲೀಕರು, ಇನ್ನಿತರರು ಸಾಲ ನೀಡುತ್ತಾರೆ.

ಸಹಕಾರಿ ಸಂಸ್ಥೆಗಳ



ಮೇಲ್ವಿಚಾರಣೆಯನ್ನು ಸಹಕಾರ ಇಲಾಖೆ. ಬ್ಯಾಂಕ್ ಅಲ್ಲದ ಆರ್ಥಿಕ ಸಂಸ್ಥೆಗಳ (ಎನ್ಬಿಎಫ್ಸಿ) ಮೇಲ್ವಿಚಾರಣೆಯನ್ನು ಭಾರತೀಯ ರಿಸರ್ವ್ ಬ್ಯಾಂಕ್ (ಆರ್ಬಿಐ) ಮೂಲಕ ನೋಂದಣಿ ಮತ್ತು ಮೇಲ್ವಿಚಾರಣೆ ಮಾಡಲಾಗುತ್ತಿದೆ. ಸಾ-ಧನ್ (SA-Dhan)ಮತ್ತು ಮೈಕ್ರೋ ಫೈನಾನ್ಸ್ ಇಂಡಸ್ಟ್ರಿ ನೆಟ್ವರ್ಕ್ (MFIN) ಸಂಸ್ಥೆಗಳನ್ನು ಭಾರತೀಯ ರಿಸರ್ವ್ ಬ್ಯಾಂಕ್ (RBI) ಸ್ವಯಂ ನಿಯಂತ್ರಣಾ ಸಂಸ್ಥೆಗಳನ್ನಾಗಿ (elf-regulatory organisation) ನೇಮಿಸಿದೆ.ನಿಗದಿತ ಉತ್ತಮ ಲೇವಾದೇವಿ ಪದ್ಧತಿಗಳನ್ನು ಅನುಷ್ಠಾನಗೊಳಿಸಲು ಈ ಸಂಸ್ಥೆಗಳನ್ನು ರಚಿಸಲಾಗಿದೆ.

ಕರ್ನಾಟಕ ರಾಜ್ಯದಲ್ಲಿ ಕೇವಲ 31 ಮೈಕ್ರೋ ಫೈನಾನ್ಸ್ ಇಂಡಸ್ಟ್ರಿಗಳು ಅಸ್ತಿತ್ವದಲ್ಲಿ ಇವೆ. ಈ 31 ಸಂಸ್ಥೆಗಳು ಅಸೋಸಿಯೇಷನ್ ಆಫ್ ಕರ್ನಾಟಕ ಮೈಕ್ರೋ ಫೈನಾನ್ಸ್ ಇನಸ್ಟಿಟ್ಯೂಷನ್ (ಂಏಒಖ) ಸದಸ್ಯತ್ವ ಪಡೆದಿವೆ. ರಾಜ್ಯದಲ್ಲಿ ಈ ಸಂಸ್ಥೆಗಳ 3090 ಶಾಖೆಗಳಿದ್ದು 37,967 ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದಾರೆ. 1,09,88,332 ಖಾತೆಗಳಲ್ಲಿ 59,367.76 ಕೋಟಿ ರೂ. ಬಾಕಿ ಉಳಿದಿದೆ.

ನಿಯಮಗಳನ್ನು ಪಾಲಿಸದ ಹಣಕಾಸು ಸಂಸ್ಥೆಗಳ ಬಗ್ಗೆ ಮೇಲ್ವಿಚಾರಣಾ ಸಂಸ್ಥೆಗಳ ಮೂಲಕ ಭಾರತೀಯ ರಿಸರ್ವ್ ಬ್ಯಾಂಕಿಗೆ ವರದಿ ನೀಡಲಾಗುತ್ತದೆ , ಆರ್ಬಿಐ ಒಪ್ಪಿಗೆಯೊಂದಿಗೆ ಸೂಕ್ತ ಶಿಸ್ತಿನ ಕ್ರಮವನ್ನು ಜರುಗಿಸಲಾಗುತ್ತದೆ.

ದಬ್ಬಾಳಿಕೆಯ ಸಾಲ ಮರುಪಾವತಿ ಕ್ರಮದಿಂದ ಸಂರಕ್ಷಿಸಲು ಅಧಿಕೃತವಾಗಿ ಭಾರತೀಯ ರಿಸರ್ವ್ ಬ್ಯಾಂಕ್ ಮಾರ್ಗಸೂಚಿಗಳು

ಎಲ್ಲಾ ಎನ್ಬಿಎಫ್ಸಿ-ಎಂಎಫ್ಐಗಳು ಬಡ್ಡಿಯ ದರ, ಮರುಪಾವತಿಯ ಕಂತು ಮತ್ತು ಅಸಲು ಸಾಲ ಮುಂತಾದವುಗಳ ಬಗ್ಗೆ ?ಫ್ಯಾಕ್ಟ್ ಶೀಟ್ನಲ್ಲಿ ಸಾಲ ವಿತರಣೆಯ ಸಮಯದಲ್ಲಿ ಪ್ರತಿಯೊಬ್ಬ ಸಾಲಗಾರನಿಗೆ ಮಾಹಿತಿ ಒದಗಿಸಬೇಕು.

### ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಅನುಸರಿಸಬೇಕಾದ ಕ್ರಮಗಳು

**ಮೈಕ್ರೋ ಫೈನಾನ್ಸ್ ಇನ್ಸ್ಟಿಟ್ಯೂಷನ್ (ಎಂಎಫ್ಐ) , ಮನಿ ಲೆಂಡಿಂಗ್ ಏಜೆನ್ಸಿ ಅಥವಾ ಸಂಸ್ಥೆಯಿಂದ ನೀಡುವ ಎಲ್ಲಾ ಸಾಲಗಳ ಮಂಜೂರಾತಿ, ವಿತರಣೆಯ ಪ್ರಕ್ರಿಯೆಯಲ್ಲಿ ಈ ಅಂಶಗಳನ್ನು ಅನುಸರಿಸಬೇಕು:**

*** ಸಾಲಗಾರನಿಗೆ ಸಾಲದ ನಿಯಮಗಳ ಬಗ್ಗೆ ಸ್ಥಳೀಯ ಭಾಷೆಯಲ್ಲಿ ಅಥವಾ ಆತನಿಗೆ ಅರ್ಥವಾಗುವ ಭಾಷೆಯಲ್ಲಿ ತಿಳಿಸಬೇಕು**

*** ಸಾಲದ ಅರ್ಜಿಯಲ್ಲಿ ಷರತ್ತುಗಳ ಬಗ್ಗೆ ಮಾಹಿತಿ ನೀಡಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲು ಸಹಾಯ ಮಾಡಬೇಕು.**

*** ಯಾವ ದಾಖಲೆಗಳನ್ನು ನೀಡುವ ಅವಶ್ಯಕತೆ ಇದೆ ಎನ್ನುವ ಸೂಕ್ತ ಮಾಹಿತಿ ನೀಡಬೇಕು.**

*** ನಗದು ಪುಸ್ತಕ, ಲೆಡ್ಜರ್ ಮತ್ತು ಇತರ ದಾಖಲೆಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು.**

***ಸಾಲ ನೀಡಿದ ದಿನಾಂಕದಿಂದ ಏಳು ದಿನಗಳ ಒಳಗೆ ಸಾಲಗಾರನಿಗೆ ನಿಗದಿತ ನಮೂನೆಯಲ್ಲಿ ಸಾಲದ ಮೊತ್ತ ,ನೀಡಿದ ದಿನಾಂಕ ಮತ್ತು ಅವಧಿಯ ಮುಕ್ತಾಯ, ಸಂಸ್ಥೆಯ ಕಾರ್ಯನಿರ್ವಾಹಕರ ಹೆಸರು ಮತ್ತು ವಿಳಾಸ, ನಿಯಮಾನುಸಾರ ವಿಧಿಸಲಾಗುವ ಬಡ್ಡಿದರ ಸ್ಪಷ್ಟವಾಗಿರುವ ಲಿಖಿತ ದಾಖಲೆಯನ್ನು ತಲುಪಿಸಬೇಕು.**

*** ಸಾಲಗಾರನು ಮಾಡುವ ಪಾವತಿಗೆ ಪ್ರತಿಯಾಗಿ ಸಹಿ ಮಾಡಿದ ರಶೀದಿ ನೀಡಬೇಕು.**

*** ಸಾಲಗಾರನ ಲಿಖಿತ ಬೇಡಿಕೆಯ ಮೇರೆಗೆ ಸಾಲಕ್ಕೆ ಸಂಬಂಧಿಸಿದ ಯಾವುದೇ ದಾಖಲೆಯ ನಕಲನ್ನು ನೀಡಬೇಕು.**

*** ಸಾಲಗಾರರಿಂದ ಪಡೆದ ಭದ್ರತೆಯನ್ನು ಸ್ಪಷ್ಟವಾಗಿ ತಿಳಿಸಬೇಕು**

***ಜನಸಾಮಾನ್ಯರು ಈ ವಿಧಾನಗಳ ಬಗ್ಗೆ ತಿಳುವಳಿಕೆ ಹೊಂದಿರಬೇಕು. ತಮ್ಮ ಅಧಿಕೃತ ಹಕ್ಕುಗಳು,ಬಾಧ್ಯತೆಗಳ ಬಗ್ಗೆ ಖಚಿತ ಪಡಿಸಿಕೊಂಡ ನಂತರ ಸಾಲ ತೆಗೆದುಕೊಳ್ಳಬೇಕು.**

**ಸ್ವಸಹಾಯ ಗುಂಪುಗಳಲ್ಲಿ ಸಾಲ**

**ಮಹಿಳಾ ಸ್ವ-ಸಹಾಯ ಗುಂಪುಗಳಿಂದ ಹಲವು ಕಡೆ ಬಳಕೆ ಸಾಲವನ್ನು (Consumption Loan) ಪಡೆಯುವ ವ್ಯವಸ್ಥೆ ಇದೆ. ಇವುಗಳಲ್ಲಿ ಶೇ. 99 ರಷ್ಟು ಯಶಸ್ವಿಯಾಗಿ ಮರುಪಾವತಿ ಕೂಡ ಆಗುತ್ತವೆ. ಬ್ಯಾಂಕುಗಳಲ್ಲಿ ಇರುವಂತೆ ದಾಖಲಾತಿ ಒದಗಿಸುವ, ಜಾಮೀನು ನೀಡುವ ಹಾಗೂ ತಮ್ಮ ಆಸ್ತಿಗಳ ಅಡಮಾನ ಮಾಡುವ ಕ್ಲಿಷ್ಟ ವಿಧಾನ ಇಲ್ಲಿರುವುದಿಲ್ಲ. ಸರಳ ವಿಧಾನ ಅನುಸರಿಸಿ ಸಾಲ ಸಿಗುವುದರಿಂದ ಜನರು ಇಂತಹ ವ್ಯವಸ್ಥೆಗಳಿಗೆ ಹೆಚ್ಚಾಗಿ ಮೊರೆ ಹೋಗುತ್ತಾರೆ.**

## ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆಗಾಗಿ ಅರ್ಜಿ ಆಹ್ವಾನ

**ಶಿವಮೊಗ್ಗ:** ಶಿವಮೊಗ್ಗ-ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರದ ವ್ಯಾಪ್ತಿಯಲ್ಲಿರುವ ನಾಗರೀಕ ಸೌಲಭ್ಯಕ್ಕಾಗಿ ಪ್ರಾಧಿಕಾರ/ಖಾಸಗಿ ಬಡವಣೆಯಲ್ಲಿ ಮೀಸಲಿರಿಸಿದ ನಾಗರೀಕ ಸೌಲಭ್ಯ ನಿವೇಶನಗಳನ್ನು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1960 ರಡಿಯಲ್ಲಿ ನೋಂದಾಣಿಯಾದ ಸಹಕಾರ ಸಂಘ ಅಥವಾ ಸಂಘಗಳಿಂದ ನೋಂದಾಯಿತ ಶೈಕ್ಷಣಿಕ, ಧಾರ್ಮಿಕ ಚಾರಿಟಬಲ್ ಟ್ರಸ್ಟ್ನವರಿಂದ ಕರ್ನಾಟಕ ನಗರಾಭಿವೃದ್ಧಿ ಪ್ರಾಧಿಕಾರಗಳ ನಾಗರೀಕ ಸೌಲಭ್ಯ ನಿವೇಶನಗಳ ಹಂಚಿಕೆ ನಿಯಮ 1991 ರ ಪ್ರಕಾರ 30 ವರ್ಷಗಳ ಗುತ್ತಿಗೆ ಆಧಾರದ ಮೇಲೆ ನೀಡುವ ಸಂಬಂಧ ಅರ್ಜಿಯನ್ನು ಆಹ್ವಾನಿಸಲಾಗಿದೆ. ನೊಂದಾಣಿಗಾಗಿ ಅರ್ಜಿ ನಮೂನೆ-1, ನಿವೇಶ ಮಂಜೂರಾತಿ ಅರ್ಜಿ ನಮೂನೆ-2 ಗಳನ್ನು ಫೆ.2 ರಿಂದ 15 ರ ಮಧ್ಯಾಹ್ನ 3 ಗಂಟೆವರೆಗೆ ಅವಕಾಶವಿದ್ದು, ಶಿವಮೊಗ್ಗ- ಭದ್ರಾವತಿ ನಗರಾಭಿವೃದ್ಧಿ ಪ್ರಾಧಿಕಾರ ಕಚೇರಿಯಲ್ಲಿ ರೂ.500 ಶುಲ್ಕ ಪಾವತಿಸಿ ಪಡೆಯಬೇಕು. ಅರ್ಜಿಯನ್ನು ಮಾ.3 ರ ಸಂಜೆ 5 ಗಂಟೆಯೊಳಗೆ ಭರ್ತಿ ಮಾಡಿ ಖುದ್ದಾಗಿ ಕಚೇರಿಗೆ ಅಥವಾ ನೋಂದಣಿ ಅಂಚೆಯ ಮೂಲಕ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ತಿತಿತಿ.ಳಿತಚಿಟಂರಂರಚಿ.ಣಾಜಚಿ.ಟಿ ನಲ್ಲಿ ಅಥವಾ ಪ್ರಾಧಿಕಾರದ ಕಚೇರಿಗೆ ಸಂಪರ್ಕಿಸಬಹುದು ಎಂದು ಸೂಡಾ ಅಧ್ಯಕ್ಷರಾದ ಹೆಚ್ ಎಸ್ ಸುಂದರೇಶ್ ಹಾಗೂ ಆಯುಕ್ತರಾದ ವಿಶ್ವನಾಥ ಪಿ.ಮುದಜ್ಜಿ ತಿಳಿಸಿದ್ದಾರೆ.

## ವರ್ತಕರ ಲೈಸೆನ್ಸ್ ನವೀಕರಣಕ್ಕೆ ಅರ್ಜಿ

**ಶಿವಮೊಗ್ಗ:** 20215 ರಿಂದ 2025 ನೇ ಸಾಲಿಗೆ ಲೈಸೆನ್ಸ್ ಪಡೆದ ವರ್ತಕರ/ಪೇಟೆ ಕಾರ್ಯರ್ತರ ಪರವಾನಿಗೆ ಅವಧಿಯು 2025 ರ ಮಾರ್ಚ್ 31 ರಂದು ಮುಕ್ತಾಯಗೊಳ್ಳಲಿದೆ.

ಲೈಸೆನ್ಸ್ ನವೀಕರಿಸಲು ಇಚ್ಚಿಸುವ ಪೇಟೆ ಕಾರ್ಯಕರ್ತರು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ(ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966 ರ ಕಲಂ 72 ಮತ್ತು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ(ನಿಯಂತ್ರಣ ಮತ್ತು ಅಭಿವೃದ್ಧಿ) ನಿಯಮಾವಳಿ 1968 ರ ನಿಯಮ 76(ಎ)ರನ್ವಯ ಲೈಸೆನ್ಸ್ ನವೀಕರಿಸಲು ಇಚ್ಚಿಸುವ ಪೇಟೆ ಕಾರ್ಯಕರ್ತರು ನಿಗದಿತ ಲೈಸೆನ್ಸ್ ಫಾರಂನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಿ, ಅವಶ್ಯಕ ದಾಖಲೆಗಳೊಂದಿಗೆ ದಿ: 28-02-2025 ರ ಒಳಗಾಗಿ ಕಾರ್ಯದರ್ಶಿ, ಎಪಿಎಂಸಿ, ಶಿವಮೊಗ್ಗ ಮತ್ತು ಉಪ/ಸಹಾಯಕ ನಿರ್ದೇಶಕರು, ಕೃಷಿ ಮಾರಾಟ ಇಲಾಖೆ, ಶಿವಮೊಗ್ಗ ಇವರಿಗೆ ಸಲ್ಲಿಸಬೇಕು. ದಿ: 28-02-2025 ರ ನಂತರ ಲೈಸೆನ್ಸ್ಗಳನ್ನು ನವೀಕರಿಸಲು ಕಾನೂನಿನಲ್ಲಿ ಅವಕಾಶವಿರುವುದಿಲ್ಲ. ಆದ್ದರಿಂದ ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಸುವುದು. ತಪ್ಪಿದಲ್ಲಿ ಲೈಸೆನ್ಸ್ ನವೀಕರಿಸಿಕೊಳ್ಳದಿರುವುದಕ್ಕೆ ನೀವೇ ಹೊಣೆಗಾರರಾಗಿರುತ್ತೀರಿ ಹಾಗೂ ಸಮಿತಿಯಿಂದ ನಿಯಮಾನುಸಾರ ಕಾನೂನಾತ್ಮಕ ಕ್ರಮ ಕೈಗೊಳ್ಳಲಾಗುವುದು.ಹೆಚ್ಚಿನ ಮಾಹಿತಿಗಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಶಿವಮೊಗ್ಗ ಈ ಕಚೇರಿಯ ಅಧಿಕಾರಿಗಳನ್ನು ಸಂಪರ್ಕಿಸಬಹುದೆಂದು ಸಮಿತಿಯ ಕಾರ್ಯದರ್ಶಿ(ದರ್ಜೆ-1) ತಿಳಿಸಿದ್ದಾರೆ.

## ಬೆಂಬಲ ಬೆಲೆಯಲ್ಲಿ ಕಡಲೆಕಾಳು ಖರೀದಿ

**ಚಿಕ್ಕಮಗಳೂರು:** ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಎಫ್ಎಕ್ಯೂ ಗುಣಮಟ್ಟದ ಕಡಲೆಕಾಳು ಉತ್ಪನ್ನವನ್ನು ಪ್ರತಿ ಕ್ವಿಂಟಾಲ್ಗೆ ರೂ. 5,650 ರಂತೆ ಖರೀದಿಸಲಾಗುವುದು ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ಸಿ.ಎನ್. ತಿಳಿಸಿದರು.

ಜಿಲ್ಲಾಧಿಕಾರಿಗಳ ಕಛೇರಿ ಸಭಾಂಗಣದಲ್ಲಿ ಇತ್ತೀಚಿಗೆ ನಡೆದ ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರ ಆದೇಶ ಹೊರಡಿಸಿದ ದಿನದಿಂದ ಖರೀದಿ ಕೇಂದ್ರಗಳಲ್ಲಿ ರೈತರ ಅಗತ್ಯ ದಾಖಲೆಗಳೊಂದಿಗೆ ನೋಂದಣಿಯನ್ನು ಮಾಡಿಕೊಳ್ಳಲಾಗುತ್ತದೆ. ರೈತರ ನೋಂದಣಿ ಕಾಲಾವಧಿಯನ್ನು 22ರ ಏಪ್ರಿಲ್ 2025ರ ವರೆಗೆ ನಿಗಧಿಪಡಿಸಲಾಗಿದೆ. ನೋಂದಣಿ ಕಾರ್ಯದ ಜೊತೆಗೆ ಖರೀದಿ ಪ್ರಕ್ರಿಯೆಯನ್ನು ಪ್ರಾರಂಭಿಸಲಾಗಿದೆ. ಸರ್ಕಾರಿ ರಜಾ ದಿನಗಳನ್ನು ಹೊರತು ಪಡಿಸಿ ಉಳಿದ ದಿನಗಳಲ್ಲಿ ಬೆಳಿಗ್ಗೆ 10 ರಿಂದ ಸಂಜೆ 6 ರವರೆಗೆ ಕಡಲೆಕಾಳು ಉತ್ಪನ್ನಗಳನ್ನು ಖರೀದಿಸಲಾಗುವುದು ಎಂದರು.

ಕಡಲೇಕಾಳು ಪ್ರತಿ ಎಕರೆಗೆ ನಾಲ್ಕು ಕ್ವಿಂಟಾಲ್ನಂತೆ ಪ್ರತಿ ರೈತರಿಂದ ಗರಿಷ್ಠ 20 ಕ್ವಿಂಟಾಲ್ ಪ್ರಮಾಣದ ಎಫ್ಎಕ್ಯೂ ಗುಣಮಟ್ಟದ ಕಡಲೆಕಾಳು ಉತ್ಪನ್ನವನ್ನು ಸರ್ಕಾರದ ಬೆಂಬಲ ಬೆಲೆಯಂತೆ ಪ್ರತಿ ಕ್ವಿಂಟಾಲ್ಗೆ ರೂ. 5,650 ರಂತೆ ಖರೀದಿಸಲಾಗುವುದು ಎಂದು ಹೇಳಿದರು.

ಉತ್ಪನ್ನ ಖರೀದಿಸಲು ಅಗತ್ಯ ದಾಖಲೆ:

ಎಫ್ಎಕ್ಯೂ ಗುಣಮಟ್ಟದ ಕಡಲೆಕಾಳು ಉತ್ಪನ್ನಗಳನ್ನು ಮಾರಾಟ ಮಾಡಲು ರೈತರು ನೋಂದಣಿಗಾಗಿ ತಮ್ಮ ಆಧಾರ್ ಗುರುತಿನ ಚೀಟಿಯ ನಕಲು ಪ್ರತಿ, ಪಹಣಿಯಲ್ಲಿರುವ ಹೆಸರಿನ ರೈತರ ಆಧಾರ್ ಸಂಖ್ಯೆ ಜೋಡಣೆಗೊಂಡ ಬ್ಯಾಂಕ್ ಖಾತೆ ಪುಸ್ತಕದ ನಕಲು ಪ್ರತಿಯನ್ನು ಸಲ್ಲಿಸಬೇಕು.

ಕೇಂದ್ರ ಸರ್ಕಾರದ ಬೆಂಬಲ ಬೆಲೆ ಯೋಜನೆಯಡಿ ಖರೀದಿಸುವ ಕಡಲೆಕಾಳು ಉತ್ಪನ್ನವು ನಿರ್ಧಿಷ್ಟ ಪಡಿಸಿದ ಎಫ್ಎಕ್ಯೂ ಗುಣಮಟ್ಟ ಹೊಂದಿರಬೇಕು. ಕಡಲೆ ಕಾಳು ಚೆನ್ನಾಗಿ ಒಣಗಿಸಬೇಕು. ತೇವಾಂಶವು ಶೇ. 14ಕ್ಕಿಂತ ಕಡಿಮೆ ಇರಬೇಕು. ಕಡಲೆಕಾಳು ಉತ್ಪನ್ನವು ಗುಣಮಟ್ಟದ ಗಾತ್ರ, ಬಣ್ಣ ಮತ್ತು ಆಕಾರವನ್ನು ಹೊಂದಿರಬೇಕು. ಗಟ್ಟಿಯಾಗಿರಬೇಕು ಮತ್ತು ಮಣ್ಣಿನಿಂದ ಬೇರ್ಪಡಿಸಲ್ಪಟ್ಟು ಸ್ವಚ್ಛವಾಗಿರಬೇಕು ಎಂದು ತಿಳಿಸಿದ ಅವರು ಕಡಲೆಕಾಳು ಉತ್ಪನ್ನವು ಕ್ರಿಮಿಕೀಟಗಳಿಂದ ಮುಕ್ತವಾಗಿರಬೇಕು. ರೈತರಿಗೆ ಕರ್ನಾಟಕ ರಾಜ್ಯ ಸಹಕಾರ ಮಾರಾಟ ಮಹಾಮಂಡಳಿಯವರು ನೀಡುವ ಗೋಣಿ ಚೀಲದಲ್ಲಿ 50 ಕೆ.ಜಿ ಪ್ರಮಾಣದಲ್ಲಿ ತುಂಬ ಬೇಕು ಎಂದು ಹೇಳಿದರು.

ಜಿಲ್ಲೆಯ ಕಡೂರು ಹಾಗೂ ಅಜ್ಜಂಪುರಗಳಲ್ಲಿ ಖರೀದಿ ಕೇಂದ್ರಗಳನ್ನು ತೆರಯಾಲಾಗಿದ್ದು, ರೈತರು ಖರೀದಿ ಕೇಂದ್ರದ ಅಧಿಕಾರಿಗಳನ್ನು ಅವರ ಮೊಬೈಲ್ ಸಂಖ್ಯೆ : 9449864428, 9449206938, 9686466869 ಸಂಪರ್ಕಿಸಿ ಮಾಹಿತಿ ಪಡೆಯುವಂತೆ ತಿಳಿಸಿದ ಅವರು ರೈತರು ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು.

ಸಭೆಯಲ್ಲಿ ಕೃಷಿ ಇಲಾಖೆ ಜಂಟಿ ನಿರ್ದೇಶಕಿ ಸುಜಾತಾ, ಕೃಷಿ ಮಾರಾಟ ಇಲಾಖೆ ಸಹಾಯಕ ನಿರ್ದೇಶಕ ವಿಶ್ವನಾಥರೆಡ್ಡಿ, ಸಹಾಯಕ ಕಾರ್ಯದರ್ಶಿ ಭವ್ಯ, ಕೃಷಿ ಮಾರಾಟ ಮಹಾಮಂಡಳಿ ವ್ಯವಸ್ಥಾಪಕ ಚೇತನ್, ಸಹಕಾರ ಸಂಘಗಳ ನಿಬಂಧಕರ ಕಛೇರಿಯ ತ್ರಿವೇಣಿ ಮುಂತಾದವರಿದ್ದರು.

## ಯುವನಿಧಿ ನೋಂದಣಿ ಅವಧಿ ವಿಸ್ತರಣೆ

**ಹಾಸನ :** ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಯುವನಿಧಿ ಯೋಜನೆಯಲ್ಲಿ 2022-23 ಮತ್ತು 2023-24 ನೇ ಸಾಲಿನಲ್ಲಿ ಸ್ನಾತಕ ಪದವಿ/ ಸ್ನಾತಕೋತ್ತರ ಪದವಿ ಮತ್ತು ಡಿಪ್ಲೋಮಾ ಪದವಿಯಲ್ಲಿ ತೇರ್ಗಡೆಯಾಗಿ ಉದ್ಯೋಗ ಸಿಗದ ಅರ್ಹ ಅಭ್ಯರ್ಥಿಗಳು https://sevasindhugs.karnataka.gov.in ಸೇವಾಸಿಂಧು ವೆಬ್ಪೋರ್ಟಲ್ನಲ್ಲಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಲು ಜ.6 ರಿಂದ ಜ.20 ರವರೆಗೆ ವಿಶೇಷ ನೋಂದಣಿ ಅಭಿಯಾನ ಹಮ್ಮಿಕೊಳ್ಳಲಾಗಿತ್ತು, ನೋದಣಿಗೆ ಫೆ.15 ರವರೆಗೆ ಅವಧಿ ವಿಸ್ತರಿಸಲಾಗಿದೆ.

ಈ ಅಭಿಯಾನವು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಹಾಸನ ಹಾಗೂ ಎಲ್ಲಾ ತಾಲ್ಲೂಕು ಪಂಚಾಯತ್ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದ್ದು, ಉಚಿತವಾಗಿ ಅರ್ಜಿ ಹಾಕಲಾಗುತ್ತದೆ. ಅರ್ಹ ಫಲಾನುಭವಿಗಳು ಈ ಸದವಕಾಶವನ್ನು ಉಪಯೋಗಿಸಿಕೊಂಡು ಇದರ ಪ್ರಯೋಜನವನ್ನು ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಉದ್ಯೋಗಾಧಿಕಾರಿ, ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಹಾಸನ ಇವರ ದೂರವಾಣಿ ಸಂಖ್ಯೆ: 08172-296374 ನ್ನು ಸಂಪರ್ಕಿಸಲು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗ ಅಧಿಕಾರಿ ತಿಳಿಸಿದ್ದಾರೆ.

## ಜಿಲ್ಲಾಡಳಿತ ಭವನದಲ್ಲಿ ಸವಿತಾ ಮಹರ್ಷಿ ಜಯಂತಿ



**ಗದಗ :** ಗದಗ ಜಿಲ್ಲಾಡಳಿತ ಭವನದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಸವಿತಾ ಮಹರ್ಷಿ ಜಯಂತಿಯನ್ನು ಭಾವಚಿತ್ರಕ್ಕೆ ಪುಷ್ಪಾರ್ಚನೆ ನೆರವೇರಿಸುವ ಮೂಲಕ ಆಚರಿಸಲಾಯಿತು.

ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ತಾಲೂಕ ಗ್ಯಾರಂಟಿ ಸಮಿತಿ ಸದಸ್ಯ ಕೃಷ್ಣಗೌಡ ಎಚ್ ಪಾಟೀಲ, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಹೆಚ್ಚುವರಿ ಪೊಲೀಸ ವರಿಷ್ಠಾಧಿಕಾರಿ ಎಂ.ಬಿ.ಸಂಕದ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ವೀರಯ್ಯ ಸ್ವಾಮಿ, ಖಜಾನೆ ಇಲಾಖೆ ಉಪನಿರ್ದೇಶಕ ಹರಿನಾಥ ಬಾಬು, ವಾರ್ತಾಧಿಕಾರಿ ವಸಂತ ಮಡ್ಲೂರ ಸೇರಿದಂತೆ ಸವಿತಾ ಮಹರ್ಷಿ ಸಮಾಜದ ಗಣ್ಯರು ಹಾಜರಿದ್ದು ಪುಷ್ಪಾರ್ಚನೆ ಮಾಡುವ ಮೂಲಕ ಗೌರವ ಸಮರ್ಪಿಸಿದರು.

## ಒಬ್ಬ ಕಿಶೋರ ಕಾರ್ಮಿಕ ವಶಕ್ಕೆ

ಹಾಸನ ಫೆ.4(ಕರ್ನಾಟಕ ವಾರ್ತೆ):- ನವದೆಹಲಿಯ ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಹಾಗೂ ಮಾನ್ಯ ಕಾರ್ಮಿಕ ಆಯುಕ್ತರ ನಿರ್ದೇಶನದಂತೆ ಬಾಲಕಾರ್ಮಿಕ ಮತ್ತು ಕಿಶೋರಾವಸ್ಥೆ ಕಾರ್ಮಿಕರ ದುಡಿಮೆಯನ್ನು ನಿಯಂತ್ರಿಸಲು ಹಾಗೂ ನಿಥಜೇಧಿಸಲು ಕೆಲಸದಲ್ಲಿ ತೊಡಗಿರುವ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ರಕ್ಷಿಸಿ ಪುನರ್ವಸತಿಗೊಳಿಸಿ.

ಶಿಕ್ಷಣ ಮುಂದುವರಿಕೆಗೆ ಅವಕಾಶ ಮಾಡಿಕೊಡುವ ಉದ್ದೇಶದಿಂದ ಹಾಸನ ಜಿಲ್ಲೆಯಾದ್ಯಂತ ಬಾರ್ & ರೆಸ್ಟೋರೆಂಟ್, ಗ್ಯಾರೇಜ್, ಕಾರ್ಖಾನೆಗಳು, ಇಟ್ಟಿಗೆ ಗೂಡುಗಳು ಹಾಗೂ ಇತರೆ ವಾಣಿಜ್ಯ ಸಂಸ್ಥೆಗಳಲ್ಲಿ ಬಾಲ ಹಾಗೂ ಕಿಶೋರ ಕಾರ್ಮಿಕರ ರಕ್ಷಣಾ ಕಾರ್ಯಾಚರಣೆಯನ್ನು ಹಮ್ಮಿಕೊಳ್ಳಲಾಗಿದೆ.

ಜ.24 ರಂದು ಮಾಡಿದ ಕಾರ್ಯಾಚರಣೆಯಲ್ಲಿ ಹೊಳೆನರಸೀಪುರ ತಾಲ್ಲೂಕಿನ ಜೈನಿಗರ ಬೀದಿಯಲ್ಲಿರುವ ನೂರುಲ್ಲಾ ಬಿನ್ ಹನೀಫ್ ಎಂಬುವವರ ಶೈನ್ ಮೈ ಕಾರ್ (ಕಾರ್ ವಾಸಿಂಗ್) ಅಂಗಡಿಯಲ್ಲಿ ಮಧ್ಯಪ್ರದೇಶ ರಾಜ್ಯದ, ಶಿಂಗ್ರೌಳಿ ಜಿಲ್ಲೆಯ, ನಿವಾಸ್ ಕವಟ್ನ ರಹೀಸ್ ಬಿನ್ ರಾಮ ಎಂಬ 14 ರಿಂದ 16 ವರ್ಷದ ಒಬ್ಬ ಕಿಶೋರ ಕಾರ್ಮಿಕನನ್ನು ಪಾಲನೆ-ಪೋಷಣೆ, ರಕ್ಷಣೆಯ ಹಿತದೃಷ್ಟಿಯಿಂದ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯ ವಶಕ್ಕೆ ಒಪ್ಪಿಸಲಾಗಿದೆ.

ಜ.24 ರಂದು ಮಾಡಿದ ಕಾರ್ಯಾಚರಣೆಯಲ್ಲಿ ಆಯಾ ತಾಲ್ಲೂಕು ಟಾಸ್ಕ್ಫೋರ್ಸ್ ಅಧಿಕಾರಿಗಳು, ಕಾರ್ಮಿಕ ಇಲಾಖೆಯ ಅಧಿಕಾರಿಗಳು ಹಾಗೂ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಸಿಬ್ಬಂದಿ, ಎಸ್.ಜೆ.ಪಿ.ಯು ಘಟಕದ ಸಿಬ್ಬಂದಿಗಳು, 14 ವರ್ಷದೊಳಗಿನ ಮಕ್ಕಳನ್ನು ಯಾವುದೇ ಉದ್ದಿಮೆಯಲ್ಲಿ ಹಾಗೂ 14 ರಿಂದ 18 ವರ್ಷದೊಳಗಿನ ಕಿಶೋರರನ್ನು ಅಪಾಯಕಾರಿ ಕೆಲಸದಲ್ಲಿ ದುಡಿಸಿಕೊಳ್ಳುವುದು ಶಿಕ್ಷಾರ್ಹ ಅಪರಾಧವಾಗಿದೆ.

## ದೇವಿರಮ್ಮ ಸ್ಪಂದನ ಬಳಗದ ಗೆಳತಿಯರಿಂದ ಸಹಾಯಹಸ್ತ



**ಚಿಕ್ಕಮಗಳೂರು:** ಚಿಕ್ಕಮಗಳೂರು ನಿವಾಸಿಗಳಾದ ನಾಗರಾಜ್ ಮತ್ತುರಜನಿ ದಂಪತಿಯ ಮಗಳಾದ ಕೀರ್ತನತಲೆಸೆಮಿಯಾಕಾಯಿಲೆಯಿಂದ ಬಳಲುತ್ತಿದ್ದು, ತಂದೆಒಕ್ಕಲಿಗರ ಸಂಘದಲ್ಲಿ ಪಿಒನ್(ಜವಾನ) ರಾಗಿ ಹಾಗೂ ತಾಯಿಒಕ್ಕಲಿಗರ ವಸತಿನಿಲಯದಲ್ಲಿ ಸಹಾಯಕಿಯಾಗಿಕರ್ತವ್ಯ ನಿರ್ವಹಿಸುತ್ತಿದ್ದಾರೆ. ಕೀರ್ತನ ಹುಟ್ಟಿದಾಗಿನಿಂದ ಪ್ರತಿ 15 ದಿವಸಕ್ಕೊಮ್ಮೆ ಬೆಂಗಳೂರಿನ ಆಸ್ಪತ್ರೆಗೆರಕ್ತ ಹಾಗೂ ಚಿಕಿತ್ಸೆಗೆಂದು ಹೋಗಿ ಬರುತಿದ್ದುಕುಟುಂಬವು ಆರ್ಥಿಕವಾಗಿ ಸಂಕಷ್ಟವನ್ನುಎದುರಿಸುತ್ತಿದ್ದಾರೆ.

ಇದನ್ನರಿತ ಶ್ರೀ ದೇವಿರಮ್ಮ ಸ್ಪಂದನ ಬಳಗದ ಗೆಳತಿಯರು ನಾಗರಾಜ್ ಮತ್ತುರಜನಿ ದಂಪತಿಗಳಿಗೆ 15 ಸಾವಿರ

ರೂಗಳ ಧನ ಸಹಾಯ ಮಾಡುವುದರ ಮೂಲಕ ಕೀರ್ತನಾಳ ಚಿಕಿತ್ಸೆಗೆ ಸಹಕರಿಸಿದ್ದಾರೆ

ಈ ಸಂದರ್ಭದಲ್ಲಿರೀನಾ ಸುಜೇಂದ್ರ, ಪ್ರನೂಪ ನಾಗರಾಜ್, ಪ್ರೀತಿಯೋಗೀಶ್, ಮಾಲತಿಜಗಧೀಶ್, ಕಲಾವತಿ, ಚಿತ್ರಗೌಡ ಉಪಸ್ಥಿತರಿದ್ದರು.


# ವಿಶ್ವ ಕ್ಯಾನ್ಸರ್ ದಿನಾಚರಣೆ

**ಗದಗ :** ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸಮೀಕ್ಷಾ ಘಟಕ, ಜಿಲ್ಲಾ ಅಸಾಂಕ್ರಾಮಿಕ ರೋಗಗಳ ವಿಭಾಗ, ತಂಬಾಕು ನಿಯಂತ್ರಣಕೋಶ ಹಾಗೂ ಎಸ್.ಟಿ.ಎಸ್.ಕೆ.ಕೆ.ಪಾಲಿಟೆಕ್ನಿಕ್ ಕಾಲೇಜ್, ಗದಗ ಇವರ ಸಂಯುಕ್ತಾಶ್ರಯದಲ್ಲಿ ವಿಶ್ವ ಕ್ಯಾನ್ಸರ್ ದಿನದ ಅಂಗವಾಗಿ ಮಂಗಳವಾರ ವಿದ್ಯಾರ್ಥಿಗಳಿಗೆ ?ಕ್ಯಾನ್ಸರ್? ಕುರಿತು ಅರಿವು ಮೂಡಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನು ಡಾ. ಗಣೇಶರಾವ್ ಕುಂದಾಪೂರ ಅವರು ಉದ್ಘಾಟಿಸಿ ಮಾತನಾಡುತ್ತ ವಿಶ್ವ ಕ್ಯಾನ್ಸರ್ ದಿನಾಚರಣೆಯನ್ನು ಪ್ರತಿ ವರ್ಷ ಫೆಬ್ರುವರಿ-4 ರಂದು ಆಚರಿಸಲಾಗುತ್ತಿದ್ದು, ಕ್ಯಾನ್ಸರ್ ಖಾಯಿಲೆಯ ಭೀಕರತೆ ಹಾಗೂ ಸಮಾಜದ ಮೇಲಾಗುವ ಗಂಭೀರ ಪರಿಣಾಮಗಳ ಕುರಿತು ಮಾತನಾಡುತ್ತಾ ಕ್ಯಾನ್ಸರ್ ಖಾಯಿಲೆಯನ್ನು ಮುನ್ನೆಚ್ಚರಿಕೆ ಮತ್ತು ಆರಂಭಿಕ ಹಂತದಲ್ಲಿ ಪತ್ತೇ ಮಾಡುವುದು ಮುಖ್ಯವಾಗಿದೆ ಎಂದರು.

ಅಸಾಂಕ್ರಾಮಿಕ ರೋಗಗಳಲ್ಲಿ ಹೃದಯ ಸಂಬಂಧಿತ ಖಾಯಿಲೆಯ ನಂತರದಲ್ಲಿ 2ನೇ ಸ್ಥಾನದಲ್ಲಿ ಕ್ಯಾನ್ಸರ್ನಿಂದ ಅತೀ ಹೆಚ್ಚು ಸಾವು ಸಂಭವಿಸುತ್ತಿವೆ ಎಂದು ತಿಳಿಸಿದರು. ಕ್ಯಾನ್ಸರ್ ಖಾಯಿಲೆಯು ಅನಿಯಂತ್ರಿತ ಜೀವಕೋಶ ವಿಭಜನೆಗಳಿಂದ ದೇಹದಲ್ಲಿ ಬೆಳವಣಿಗೆಯಾಗುವಂತಹ ಗಡ್ಡೆ. ಕ್ಯಾನ್ಸರ್ ಜೀವಕೋಶವು ಲಿಂಫ್ನೋಡ್ಸ ಮುಖಾಂತರ ದೇಹದ ಎಲ್ಲಾ ಭಾಗಗಳಲ್ಲಿ ಪಸರಿಸುತ್ತದೆ. ಕ್ಯಾನ್ಸರ್ ರೋಗದಲ್ಲಿ ನಾಲ್ಕು ಹಂತಗಳಿದ್ದು, ಮೊದಲನೇ ಮತ್ತು ಎರಡನೇ ಹಂತದಲ್ಲಿರುವ ಕ್ಯಾನ್ಸರ್ ರೋಗವನ್ನು ತಜ್ಞ ವೈದ್ಯರಲ್ಲಿ ಚಿಕಿತ್ಸೆ ಪಡೆದರೆ ಸಂಪೂರ್ಣ ಗುಣಪಡಿಸಬಹುದೆಂದು ತಿಳಿಸಿದರು.

ಈಗಿನ ಆಧುನಿಕ ಜೀವನ ಶೈಲಿ ಮತ್ತು ತಂಬಾಕು ಸೇವನೆಯಿಂದ ಅತೀ ಹೆಚ್ಚು ಕ್ಯಾನ್ಸರ್ ರೋಗಗಳು ಕಂಡುಬರುತ್ತಿವೆ. ಪುರುಷರಲ್ಲಿ ಬಾಯಿ, ಅನ್ನನಾಳ, ಶ್ವಾಸಕೋಶ ಮತ್ತು ಲೀವರ್ ಕ್ಯಾನ್ಸರ್ಗಳು ಹೆಚ್ಚಾಗಿ ಕಂಡುಬರುತ್ತಿದ್ದು, ಮಹಿಳೆಯರಲ್ಲಿ ಸ್ತನ, ಗರ್ಭಕಂಠ ಮತ್ತು ಅಂಡಾಣುವಿನ ಕ್ಯಾನ್ಸರ್ ಸಾಮಾನ್ಯವಾಗಿ ಕಂಡುಬರುತ್ತವೆ. ಕ್ಯಾನ್ಸರ್ ರೋಗಿಗಳಿಗೆ ಸರಿಯಾದ ಚಿಕಿತ್ಸೆ, ಆರೈಕೆ ಹಾಗೂ ಮನೋಸ್ಥೈರ್ಯ ಮಾತುಗಳಿಂದ ಗುಣಪಡಿಸಬಹುದು. ಉತ್ತಮ ಜೀವನ ಶೈಲಿ, ಸಮತೋಲನ ಆಹಾರ, ತರಕಾರಿ ಹಣ್ಣು ಹಂಪಲಗಳ ಸೇವನೆ, ಪ್ರತಿನಿತ್ಯ ಯೋಗ, ಧ್ಯಾನ ಮತ್ತು ದೈಹಿಕ ಚಟುವಟಿಕೆಯಿಂದ ಕ್ಯಾನ್ಸರ್ ಖಾಯಿಲೆ ಬರದಂತೆ ತಡೆಯಬಹುದೆಂದು ತಿಳಿಸಿದರು.



ಡಾ.ವೆಂಕಟೇಶ ರಾಠೋಡ, ಜಿಲ್ಲಾ ಸಮೀಕ್ಷಣಾಧಿಕಾರಿಗಳು ಹಾಗೂ ಕಾರ್ಯಕ್ರಮಾಧಿಕಾರಿಗಳು ಗದಗ ರವರು ವಿಶ್ವ ಕ್ಯಾನ್ಸರ್ ದಿನಾಚರಣೆ ಕುರಿತು ಮಾತನಾಡುತ್ತ ನಮ್ಮ ದೇಶದಲ್ಲಿ ಪ್ರತಿ ವರ್ಷ 14,13,316 ಹೊಸ ಕ್ಯಾನ್ಸರ್ ಪ್ರಕರಣಗಳು ಪತ್ತೆ ಆಗುತ್ತಿದ್ದು, ಅವುಗಳಲ್ಲಿ 30-60 ವಯಸ್ಸಿನವರಲ್ಲಿ 9,16,827 ರೋಗಿಗಳು ಸಾವನ್ನಪ್ಪುತ್ತಿದ್ದಾರೆ. ಮಹಿಳೆಯರಲ್ಲಿ ಸ್ತನ ಮತ್ತು ಗರ್ಭಕಂಠದ ಕ್ಯಾನ್ಸರ್ನಿಂದ ಅತೀ ಹೆಚ್ಚಾಗಿ ಸಾವನ್ನಪ್ಪುತ್ತಿದ್ದಾರೆ ಎಂದು ತಿಳಿಸಿದರು.ಕ್ಯಾನ್ಸರ್ನಿಂದ ಅತೀ ಹೆಚ್ಚಾಗಿ ಸಾವನ್ನಪ್ಪುತ್ತಿದ್ದಾರೆ ಎಂದು ತಿಳಿಸಿದರು.

ರಾಷ್ಟ್ರೀಯ ಅಸಾಂಕ್ರಾಮಿಕ ರೋಗಗಳ ತಡೆಗಟ್ಟುವಿಕೆ ಮತ್ತು ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಸಾಮಾನ್ಯ ಕ್ಯಾನ್ಸರ್ಗಳಾದ ಬಾಯಿ, ಸ್ತನ ಹಾಗೂ ಗರ್ಭಕಂಠದ ಕ್ಯಾನ್ಸರ್ ತಪಾಸಣೆಯನ್ನು ಜಿಲ್ಲೆಯ ಪ್ರತಿಯೊಂದು ಆರೋಗ್ಯ ಕೇಂದ್ರಗಳಲ್ಲಿ ಕೈಗೊಳ್ಳಲಾಗುತ್ತಿದ್ದು,30 ವರ್ಷ ಮೇಲ್ಪಟ್ಟ ಪ್ರತಿಯೊಬ್ಬರೂ ಕ್ಯಾನ್ಸರ್ ತಪಾಸಣೆಯನ್ನು ಮಾಡಿಸಿಕೊಳ್ಳಬೇಕೆಂದು ತಿಳಿಸಿದರು.

ಜಿಲ್ಲೆಯಲ್ಲಿ ಅಸಾಂಕ್ರಾಮಿಕ ಕಾಯಿಲೆಗಳ ಪ್ರಾಥಮಿಕ ಹಂತದ ತಪಾಸಣೆಯು ಪ್ರತಿ ಗ್ರಾಮಗಳಲ್ಲಿ ಕೈಗೊಳ್ಳಲಾಗುತ್ತಿದ್ದು, ಒಟ್ಟು 7 ಎನ್.ಸಿ.ಡಿ. ಕ್ಲಿನಿಕ್ಗಳು ಕಾರ್ಯ ನಿರ್ವಹಿಸುತ್ತಿವೆ ಹಾಗೂ ಪ್ರತಿ ಆರೋಗ್ಯ ಕೇಂದ್ರಗಳಲ್ಲಿ ಅಸಾಂಕ್ರಾಮಿಕ ಕಾಯಿಲೆಗಳಿಗೆ ಉಚಿತ ತಪಾಸಣೆ ಮತ್ತು ಔಷಧ ವಿತರಿಸಲಾಗುತ್ತಿದೆ. ವಿಶ್ವ ಆರೋಗ್ಯ ಸಂಸ್ಥೆಯು 2025 ರ ಒಳಗಾಗಿ ಸುಮಾರು 25% ಅಸಾಂಕ್ರಾಮಿಕ ಕಾಯಿಲೆಗಳಿಂದ ಮರಣ ಹೊಂದುವುದನ್ನು ತಡೆಯುವ ಗುರಿಯನ್ನು ಹೊಂದಿದೆ ಎಂದು ತಿಳಿಸಿದರು.

ಎಸ್.ಟಿ.ಎಸ್.ಕೆ.ಕೆ.ಪಾಲಿಟೆಕ್ನಿಕ್ ಕಾಲೇಜ್ ಪ್ರಾಂಶುಪಾಲರು ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿ ಮಾತನಾಡುತ್ತ ಕ್ಯಾನ್ಸರ್ ಖಾಯಿಲೆ ಕುರಿತು ಇಂತಹ ಅಭೂತಪೂರ್ವ ಮಾಹಿತಿ ಹೊಂದಿದ ಕಾರ್ಯಕ್ರಮಗಳು ಎಲ್ಲ ಶಾಲಾ-ಕಾಲೇಜುಗಳಲ್ಲಿ ಹಮ್ಮಿಕೊಳ್ಳುವುದು ಅವಶ್ಯಕವಾಗಿದ್ದು, ಇಂತಹ ಕಾರ್ಯಕ್ರಮಗಳು ವಿದ್ಯಾರ್ಥಿಗಳ ಮೂಲಕ ಮನೆ ಹಾಗೂ ಸಮುದಾಯ ಮಟ್ಟದಲ್ಲಿ ಜಾಗೃತಿ ಮೂಡಿಸಲು ಅನುಕೂಲವಾಗುವುದೆಂದು ತಿಳಿಸಿದರು. ದುಷ್ಚಟಗಳಿಂದ ದೂರವಿದ್ದು, ಉತ್ತಮ ಆಹಾರ ಪದ್ಧತಿಯಿಂದ ಆರೋಗ್ಯಕರ ಸಮಾಜವನ್ನು ನಿರ್ಮಾಣ ಮಾಡಿ ಕ್ಯಾನ್ಸರ್ನಂತಹ ಅಸಾಂಕ್ರಾಮಿಕ ಖಾಯಿಲೆಯಿಂದ ದೂರವಿರಬಹುದೆಂದು ತಿಳಿಸಿದರು.

ಎಸ್.ಎಸ್.ಪೀರಾ ಕಾರ್ಯಕ್ರಮ ನಿರೂಪಿಸಿದರು. ಮುತ್ತುನಗೌಡ ಎಸ್. ರಬ್ಬನಗೌಡ್ರ ಸ್ವಾಗತಿಸಿ ವಂದಿಸಿದರು. ಶ್ರೀಮತಿ ಗಂಗಾ ಸಜ್ಜಗಾರ ರವರು ಪ್ರಾರ್ಥಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ ಚವ್ಹಾಣ, ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಶ್ರೀಮತಿ ಗೀತಾ ಕಾಂಬ್ಳೆ, ಶ್ರೀಮತಿ ಪುಷ್ಪಾ ಪಾಟೀಲ, ಜಿಲ್ಲಾ ಕಾರ್ಯಕ್ರಮ ಸಂಯೋಜಕರಾದ ಡಾ.ರವಿ ಕಡಗಾವಿ,ಎನ್.ಸಿ.ಡಿ.ವಿಭಾಗ, ಡಾ.ಪ್ರವೀಣ ನಿಡಗುಂದಿ, ಗೋಪಾಲ ಸುರಪುರ, ಪ್ರತೀಕ ಹುರಕಡ್ಲಿ, ವಿರೇಶ ಮದಕಟ್ಟಿ, ಐಡಿಎಸ್ಪಿ ವಿಭಾಗ, ರಮೇಶ ಅರಹುಣಸಿ, ಜಿಲ್ಲಾ ಸಮೀಕ್ಷಾಧಿಕಾರಿಗಳ ಕಚೇರಿಯ ಸಿಬ್ಬಂದಿಗಳು ಹಾಗೂ ಎಸ್.ಟಿ.ಎಸ್.ಕೆ.ಕೆ. ಪಾಲಿಟೆಕ್ನಿಕ್ ಕಾಲೇಜಿನ ಎಲ್ಲ ಉಪನ್ಯಾಸಕರು, ಆಡಳಿತ ವರ್ಗದವರು, ಕಾಲೇಜಿನ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಬೈಕ್ ಗೆ ಸಾರಿಗೆ ಬಸ್ ಡಿಕ್ಕಿ; ಒಂದೇ ಕುಟುಂಬದ ಐವರ ದುರ್ಮರಣ

**ಯಾದಗಿರಿ:** ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಬಸ್ ಡಿಕ್ಕಿಯಾಗಿ ಮಕ್ಕಳು ಸೇರಿ ಒಂದೇ ಕುಟುಂಬದ ಐವರು ಮೃತಪಟ್ಟಿರುವ ದಾರುಣ ಘಟನೆ ಯಾದಗಿರಿಯಲ್ಲಿ ನಡೆದಿದೆ. ಯಾದಗಿರಿಯ ಸುರಪುರದ ತಿಂಥಣಿ ಬಳಿ ಐವರು ತೆರಳುತ್ತಿದ್ದ ಬೈಕ್ ಗೆ ಬಸ್ ಹೊಡೆದಿತ್ತು. ಮೃತರನ್ನು ಯಾದಗಿರಿಯ ಶಹಾಪುರದ ಹಳಿಸಗರ ನಿವಾಸಿಗಳಾದ ಆಂಜನೇಯ(35) ಗಂಗಮ್ಮ(28) ಮತ್ತು ಅವರ ಪುತ್ರ 1 ವರ್ಷದ ಹನುಮಂತು ಮತ್ತು ಸಹೋದರನ ಮಕ್ಕಳಾದ ಪವಿತ್ರ(5) ಮತ್ತು ರಾಯಪ್ಪ(3) ಮೃತ ದುರ್ದೈವಿಗಳು.

ಡಿಕ್ಕಿಯ ರಭಸಕ್ಕೆ ಬೈಕ್ ಸಂಪೂರ್ಣ ನಜ್ಜುಗುಜ್ಜಾಗಿದೆ.ಮೂವರು ಸ್ಥಳದಲ್ಲೇ ಸಾವನ್ನಪ್ಪಿದ್ದರು. ಗಂಭೀರವಾಗಿ ಗಾಯಗೊಂಡಿದ್ದ ಮತ್ತಿಬ್ಬರು ಆಸ್ಪತ್ರೆಯಲ್ಲಿ ಚಿಕಿತ್ಸೆ ಫಲಕಾರಿಯಾಗದೇ ಮೃತಪಟ್ಟಿದ್ದಾರೆ. ಘಟನಾ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಯುವ ಜನತೆ ಉತ್ತಮ ಶಿಕ್ಷಣ ಪಡೆದು ಪ್ರಜ್ಞಾವಂತರಾಗಿ ಬಾಳಬೇಕು

**ಹಾವೇರಿ:** ಯಾವುದೇ ಒಂದು ಸಮಾಜ, ಜಾತಿ ಸುಭದ್ರವಾಗಿ ಬೆಳೆಯಬೇಕಾದರೆ ಶಿಕ್ಷಣ ಮತ್ತು ಆರ್ಥಿಕತೆ ಬಹಳ ಮುಖ್ಯವಾದದ್ದು. ಸಮಾಜದ ಜ್ಯೋತಿಗಳಾಗಿರುವ ಯುವ ಜನತೆ, ಹಾದಿ ತಪ್ಪಿದರೆ ಸಮಾಜದ ಸ್ವಾಸ್ಥ್ಯ ಹಾಳಾಗುತ್ತದೆ. ಈ ನಿಟ್ಟಿನಲ್ಲಿ ಯುವ ಜನತೆ ಉತ್ತಮ ಶಿಕ್ಷಣ ಪಡೆದುಕೊಂಡು ಪ್ರಜ್ಞಾವಂತರಾಗಿ ಬಾಳಬೇಕು ಎಂದು ಕಾಗಿನೆಲೆ ಕನಕಗುರುಪೀಠದ ನಿರಂಜನಾನಂದಪುರಿ ಸ್ವಾಮೀಜಿ ಹೇಳಿದರು.

ತಾಲೂಕಿನ ಬಸಾಪುರ ಗ್ರಾಮದಲ್ಲಿ ನೂತನವಾಗಿ ನಿರ್ಮಿಸಿದ ಶ್ರೀ ಇಪ್ಪಿಕೊಪ್ಪ ಆಲದಮ್ಮದೇವಿ ಹಾಗೂ ಬಸಾಪುರ ಆಲದಮ್ಮದೇವಿ ದೇವಸ್ಥಾನಗಳ ಉದ್ಘಾಟನೆ, ಮೂರ್ತಿ ಪ್ರಾಣ ಪ್ರತಿಷ್ಠಾಪನೆ ಹಾಗೂ ಕಳಸಾರೋಹಣ ಕಾರ್ಯಕ್ರಮವನ್ನು ಮಂಗಳವಾರ ಉದ್ಘಾಟಿಸಿ ಅವರು ಮಾತನಾಡಿದರು.

ದೇಶದಲ್ಲಿ ಶಿಕ್ಷಣ ಮತ್ತು ಆರ್ಥಿಕತೆ ಇರುವ ಸಮಾಜ ಯಾವಾಗಲೂ ಬಲಿಷ್ಠವಾಗಿರುತ್ತದೆ. ಪ್ರತಿ ಮನೆಯಲ್ಲಿ ಎಷ್ಟು ಜನ ವಿದ್ಯಾವಂತರು ಇದ್ದೀರಿ ಎಂಬುದನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕು. ಹಿಂದುಳಿದ ಶೋಷಿತ ಜನಾಂಗದವರು ಬಾಯಿಚಪಲ ಹಬ್ಬಗಳಿಗೆ ಕಡಿವಾಣ ಹಾಕದೆ ಇದ್ದರೇ ಉದ್ದಾರ ಆಗುವುದಿಲ್ಲ. ಆಹಾರ ಪದ್ಧತಿಯಲ್ಲಿ ಮಾಂಸಾಹಾರವೂ ಒಂದು. ಮಂಥನ ಮತ್ತು ಮನೆತನ ಹಾಳು ಮಾಡುವ ರೀತಿಯಲ್ಲಿ ಮಾಂಸಾಹಾರ ಸೇವನೆ ಮಾಡುತ್ತಿದ್ದು ,ಅದಕ್ಕೆ ನನ್ನ ವಿರೋಧವಿದೆ. ಮೂಢನಂಬಿಕೆ ಹಬ್ಬ ಹಾಗೂ ಸಂಪ್ರದಾಯಗಳಿಗೆ ತಿಲಾಂಜಲಿ ಹಾಡಿದಾಗ ಮಾತ್ರ ಸಮಾಜ ಅಭಿವೃದ್ಧಿಯಾಗುತ್ತದೆ ಎಂದರು.




ಡಾ.ಬಿ.ಆರ್ ಅಂಬೇಡ್ಕರ್ ಅವರು ನೀವು ನಿಲ್ಲಿಸುವ ವಿಗ್ರಹದಲ್ಲಿ ನಾನಿಲ್ಲ. ತಲೆ ತಗ್ಗಿಸಿ ಓದುವ ಪುಸ್ತಕದಲ್ಲಿ ನಾನಿದ್ದೇನೆ. ದೇವಸ್ಥಾನ ಗಂಟೆಯ ಶಬ್ದದಲ್ಲಿ ನಾನಿಲ್ಲ, ಶಾಲಾ ಗಂಟೆಯ ಶಬ್ದದಲ್ಲಿ ನಾನಿದ್ದೇನೆ ಎಂದು ಹೇಳುತ್ತಾರೆ. ಆದ್ದರಿಂದ ಸಮಾಜದ ಬಂಧುಗಳೇ ಮಕ್ಕಳಿಗೆ ಶಿಕ್ಷಣ ಕೊಡಿಸುವ ಹಾಗೂ ದುಡಿಯುವ ವ್ಯವಸ್ಥೆ ಕಲ್ಪಿಸಿ ಕೊಡಬೇಕು. ದೇವಸ್ಥಾನ ಕಟ್ಟಿ, ಪೂಜೆ ಮಾಡಿದಷ್ಟೇ ಊರಿನ ಶಾಲೆ, ಶಿಕ್ಷಕರನ್ನು ಗೌರವಿಸಿ.ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸಿ ಎಂದು ಹರಸಿದರು.

ವಿಧಾನಸಭೆ ಉಪಸಭಾಧ್ಯಕ್ಷ ಹಾಗೂ ಶಾಸಕ ರುದ್ರಪ್ಪ ಲಮಾಣಿ ಮಾತನಾಡಿ ಹಿಂದಿನ ಕಾಲದಲ್ಲಿ ಅಮರಶಿಲ್ಪಿ ಜಕಣಾಚಾರಿ ಕಲ್ಲಿನ ದೇವಾಲಯ ನಿರ್ಮಿಸಿದ್ದರು. ಆದರೆ 21ನೇ ಶತಮಾನದಲ್ಲಿ ಜಕಣಾಚಾರಿ ಮಾದರಿಯಲ್ಲಿ ಬಸಾಪುರ ಗ್ರಾಮಸ್ಥರು ಆಲದಮ್ಮ ದೇವಿ ದೇವಸ್ಥಾನ ಕಟ್ಟಿಸಿದ್ದಾರೆ. ಆಲದಮ್ಮದೇವಿ ಗ್ರಾಮದ ಜನತೆಗೆ ಸುಖ, ಶಾಂತಿ ನೆಮ್ಮದಿ ಕೊಡಲಿ. ಈ ಕಾರ್ಯ ಬೇರೆ ಊರಿನವರಿಗೆ ಮಾದರಿಯಾಗಿದೆ. ಸಮುದಾಯ ಭವನ ನಿರ್ಮಾಣ ಮಾಡಿದರೆ, ಬಡವರಿಗೆ ಅನುಕೂಲವಾಗಲಿದ್ದು , ಸಮುದಾಯ ಭವನ ನಿರ್ಮಾಣಕ್ಕೆ ವೈಯಕ್ತಿಕವಾಗಿ ವಿವಿಧ ಯೋಜನೆಗಳ ಅಡಿಯಲ್ಲಿ 25 ಲಕ್ಷ ರೂ. ನೀಡುವುದಾಗಿ ಭರವಸೆ ನೀಡಿದರು.

ತೂಗಣಸಿ ಅಮರೇಶ್ವರಮಠ ಶ್ರೀ ನೀಲಕಂಠ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ ದೇವಸ್ಥಾನ ಕಟ್ಟುವುದು ಪುಣ್ಯದ ಕೆಲಸ. ಉತ್ತಮ ಸಂಸ್ಕಾರ ಸಿಗಲಿ ಎನ್ನುವ ಉದ್ದೇಶದಿಂದ ದೇವಸ್ಥಾನ ಕಟ್ಟುತ್ತೇವೆ. ನಮ್ಮ ಸಂಸ್ಕೃತಿ, ಆಚಾರ, ವಿಚಾರವನ್ನು ಎಂದು ಬಿಟ್ಟುಕೊಡಬಾರದು. ಭಾರತೀಯತೆಯನ್ನು ಎತ್ತಿ ಹಿಡಿಯಬೇಕು. ದೇವಸ್ಥಾನ ಹಾಗೂ ಸಂಸ್ಕೃತಿಯನ್ನು ಉಳಿಸುವ ಕೆಲಸ ಮಾಡಬೇಕು. ದೇವಸ್ಥಾನದ ನೂರರಷ್ಟು ಮಕ್ಕಳಿಗೆ ಉತ್ತಮ ಶಿಕ್ಷಣ ಕೊಡಿಸುತ್ತೇವೆಂದು ಗ್ರಾಮಸ್ಥರು ಸಂಕಲ್ಪ ಮಾಡಬೇಕು ಎಂದರು.

ಶಿರಹಟ್ಟಿ ಫಕ್ಕೀರೇಶ್ವರ ಸಂಸ್ಥಾನ ಭಾವೈಕ್ಯತಾಪೀಠ ಜಗದ್ಗುರು ಫಕ್ಕೀರಸಿದ್ದರಾಮ ಮಹಾಸ್ವಾಮಿಗಳು, ನೆಗಳೂರ ಸಂಸ್ಥಾನ ಹಿರೇಮಠದ ಗುರುಶಾಂತೇಶ್ವರ ಶಿವಯೋಗಿ ಶಿವಾಚಾರ್ಯರು ಮಹಾಸ್ವಾಮಿಗಳು,ಗುತ್ತಲದ ಕಲ್ಮಠದ ಗುರುಸಿದ್ಧ ಮಹಾಸ್ವಾಮಿಗಳು ಆರ್ಶಿವಚನ ನೀಡಿದರು.

ಧರ್ಮಸಭೆಯಲ್ಲಿ ಬಂಕಾಪುರ ಕೆಂಡದಮಠದ ರೇವಣಸಿದ್ದೇಶ್ವರ ಮಹಾಸ್ವಾಮಿಗಳು,ಮುಂಬೈ ರಾಮಕೃಷ್ಣ ಸಾಕಾವರದ ಸ್ವಾಮಿತತ್ವರೂಪಾನಂಧಜೀ ಮಹಾರಾಜ, ಮಾಜಿ ಶಾಸಕ ಶಿವರಾಜ ಸಜ್ಜನರ, ಕೆಸಿಸಿ ಬ್ಯಾಂಕ್ ನಿರ್ದೇಶಕ ಕೊಟ್ರೇಶಪ್ಪ ಬಸೇಗಣ್ಣಿ, ಹಾವೇರಿ ನಗರಾಭಿವೃದ್ಧಿ ಪ್ರಾಕಾರದ ಅಧ್ಯಕ್ಷ ಎಸ್.ಎಫ್.ಎನ್ ಗಾಜಿಗೌಡ್ರ ಮಾತನಾಡಿದರು.ದೇವಿ ಪ್ರಾಣಪ್ರತಿಷ್ಠಾಪನೆ ವೇಳೆ ರಾಜನಹಳ್ಳಿ ವಾಲ್ಮೀಕಿ ಗುರುಪೀಠದ ಪ್ರಸನ್ನಾನಂದಪುರಿ ಸ್ವಾಮೀಜಿ, ಕೂಡಲ ಗುರುನಂಜೇಶ್ವರ ಮಠದ ಗುರುಮಹೇಶ್ವರ ಶಿವಾಚಾರ್ಯ ಸ್ವಾಮೀಜಿ, ರಾಜ್ಯ ಅರಣ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಬಸವರಾಜ ಶಿವಣ್ಣನವರ ಸೇರಿದಂತೆ ವಿವಿಧ ಮಠಾಶರು, ಪಕ್ಷಾತೀತ ರಾಜಕೀಯ ಧುರೀಣರು ಪಾಲ್ಗೊಂಡಿದ್ದರು. ಎಂ.ಎಂ ಮೈದೂರ, ಶ್ರೀಧರ ದೊಡ್ಡಮನಿ, ಪ್ರಭು ಬಿಷ್ಟನಗೌಡ್ರ, ಮುತ್ತಣ್ಣ ಯಲಿಗಾರ ಸೇರಿದಂತೆ ದೇವಸ್ಥಾನ ಸಮಿತಿ ಪದಾಕಾರಿಗಳು ವೇದಿಕೆಯಲ್ಲಿ ಹಾಜರಿದ್ದರು.

## ಬಳ್ಳಾರಿಯಲ್ಲಿ ಸಂಭ್ರಮದ ಸವಿತಾ ಮಹರ್ಷಿ ಜಯಂತ್ಯೋತ್ಸವ

# ಸವಿತಾ ಮಹರ್ಷಿಗಳ ಆಚಾರ-ವಿಚಾರ ಮೈಗೂಡಿಸಿಕೊಳ್ಳಬೇಕು: ಎಸಿ ಪ್ರಮೋದ್



**ಬಳ್ಳಾರಿ:** ಸವಿತಾ ಮಹರ್ಷಿಗಳು ಇಂದಿನ ಸಮಾಜಕ್ಕೆ ದಾರಿದೀಪವಾಗಿದ್ದಾರೆ. ಅವರ ಆಚಾರ-ವಿಚಾರಗಳನ್ನು ಮೈಗೂಡಿಸಿಕೊಂಡರೆ ಸಮಾಜದಲ್ಲಿ ಸತ್ಪ್ರಜೆಗಳಾಗಬಹುದು ಎಂದು ಸಹಾಯಕ ಆಯುಕ್ತ ಪಿ.ಪ್ರಮೋದ್ ಅವರು ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದ ವೇದಿಕೆ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮವನ್ನು ಸವಿತಾ ಮಹರ್ಷಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಸವಿತಾ ಸಮಾಜವು ಎಲ್ಲ ವರ್ಗದ ಜನರಿಗೂ ತಾರತಮ್ಯವಿಲ್ಲದೆ ಸೇವೆ ನೀಡುತ್ತಿದೆ. ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಈ ಸಮುದಾಯ ಮತ್ತಷ್ಟು ಸದೃಢವಾಗಬೇಕಿದೆ. ಪ್ರತಿಯೊಬ್ಬರೂ ತಾನು ಮಾಡುವ ವಚನ ವೃತ್ತಿಯ ಮೇಲೆ ಗೌರವ, ನಿಷ್ಠೆ ಇಟ್ಟುಕೊಂಡಾಗ ಬದುಕಿನಲ್ಲಿ ಉತ್ತುಂಗಕ್ಕೇರಲು ಸಾಧ್ಯವಿದೆ ಎಂದು ತಿಳಿಸಿದರು.

ಸವಿತಾ ಸಮಾಜದ ಬಂಧುಗಳು ಮಹರ್ಷಿಗಳ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು ಎಂದು ಹೇಳಿದರು.

ಬಾಲಕಿಯರ ಸರ್ಕಾರಿ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ಶ್ರೀನಿವಾಸಮೂರ್ತಿ. ಯು ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಪುರಾಣ ಗ್ರಂಥಗಳ ಪ್ರಕಾರ ಸವಿತಾ ಮಹರ್ಷಿ ಎಲ್ಲಾ ದೇವತೆಗಳ ಆಯುಷ್ಕರ್ಮ ಸೇವೆಯನ್ನು ಮಾಡುತ್ತಿದ್ದಾರೆಂದು ಕಾಶಿ ಕ್ಷೇತ್ರದಲ್ಲಿ ದೊರೆತ ಮಹಾಗ್ರಂಥದಲ್ಲಿ ಉಲ್ಲೇಖಿಸಲಾಗಿದೆ ಎಂದು ತಿಳಿಸಿದರು.

ಶಿವನ ದಿವ್ಯ ದೃಷ್ಠಿಯಲ್ಲಿ ಜನ್ಮ ತಾಳಿದ ಸವಿತಾ ಮಹರ್ಷಿ ಬ್ರಹ್ಮಜ್ಞಾನ ಹೊಂದಿರುವುದರಿಂದಲೇ ಚತುರ್ವೇದಗಳಲ್ಲಿ ಒಂದಾದ ಸಾಮವೇದವನ್ನು ಬರೆದ್ದಾರೆ. ಪೌರಾಣಿಕ ವ್ಯಕ್ತಿಯಾದ ಸವಿತಾ ಮಹರ್ಷಿಯು ರಥಸಪ್ತಿಯ ದಿನ ಮಾಘ ಮಾಸದ ಶುಕ್ಲ ಪಕ್ಷದಲ್ಲಿ ಜನಿಸಿದವರು. ಧಾರ್ಮಿಕವಾಗಿ ಶಿವನ ಎಡಗಣ್ಣನ್ನು ಚಂದ್ರನಿಗೆ ಬಲಗಣ್ಣನ್ನು ಸೂರ್ಯನಿಗೆ ಹೋಲಿಸಲಾಗುತ್ತದೆ. ಶಿವನ ಬಲಗಣ್ಣಿನಿಂದ ಜನಿಸಿದವರೇ ಸವಿತಾ ಮಹರ್ಷಿ ಎಂಬ ಪ್ರತೀತಿ ಇದೆ. ಇವರ ಮಗಳಾದ ಗಾಯತ್ರಿದೇವಿಯು ಶ್ರೇಷ್ಠ ಮಂತ್ರವಾದ ಗಾಯತ್ರಿ ಮಂತ್ರವನ್ನು ರಚಿಸಿದ್ದಾರೆ ಎಂಬುದನ್ನು ಕೂಡ ಉಲ್ಲೇಖಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕಂಪ್ಲಿಯ ಜಿ.ಕೆ.ಸಿಂಧು ತಂಡದವರು ಭಕ್ತಿ ಗಾಯನ ಪ್ರಸ್ತುತ ಪಡಿಸಿದರು ಹಾಗೂ ಸಮುದಾಯದ ಎಸ್‌ಎಸ್‌ಎಲ್‌ಸಿ, ಪಿಯುಸಿ ಹಾಗೂ ಪದವಿ ಮಟ್ಟದಲ್ಲಿ ಅತ್ಯುತ್ತಮ ಶ್ರೇಣಿ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ್, ಜಿಲ್ಲಾ ಸವಿತಾ ಸಮಾಜ ಸಂಘದ ಅಧ್ಯಕ್ಷ ಸಣ್ಣಗೊಂಡ್ಲ ರಾಕೇಶ್ ಸೇರಿದಂತೆ ಸಮಾಜದ ಮುಖಂಡರು, ಜನಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

# ಅಡಿಕೆ ಸಿಪ್ಪೆಯಿಂದ ಉತ್ತಮ ಗೊಬ್ಬರ ತಯಾರಿಸಿ

**ಮೂಡಿಗೆರೆ:** ಅಡಿಕೆ ಸಿಪ್ಪೆಯಿಂದ ವೈಜ್ಞಾನಿಕವಾಗಿ ಕಾಂಪೋಸ್ಟ್ ಮಾಡಿ ಉತ್ತಮ ಗೊಬ್ಬರ ತಯಾರಿಸಬಹುದು ಎಂದು ಕೃಷಿ ವಿಜ್ಞಾನ ಕೇಂದ್ರದ ಬೇಸಾಯಶಾಸ್ತ್ರ ವಿಭಾಗದ ವಿಜ್ಞಾನಿ ಬಿ.ಜಿ.ಯಮುನ ಕರೆ ನೀಡಿದರು.

ತಾಲ್ಲೂಕಿನ ಕೃಷಿ ವಿಜ್ಞಾನ ಕೇಂದ್ರದ ವತಿಯಿಂದ ಏರ್ಪಡಿಸಲಾಗಿದ್ದ ಅಡಿಕೆ ಸಿಪ್ಪೆಯಿಂದ ಕಾಂಪೋಸ್ಟ್ ಗೊಬ್ಬರ ತಯಾರಿಕೆ ಪ್ರಾತ್ಯಕ್ಷಿಕೆಯಲ್ಲಿ ಮಾತನಾಡಿದ ಅವರು, ಅಡಿಕೆ ಮಲೆನಾಡು, ಕರಾವಳಿ ಪ್ರದೇಶದ ಪ್ರಮುಖ ಬೆಳೆಯಾಗಿದ್ದು, ಒಂದು ಎಕರೆ ಅಡಿಕೆ ತೋಟದಿಂದ 600-700 ಕೆ.ಜಿ.ಯಷ್ಟು ಸಿಪ್ಪೆ, ಎರಡುವರೆ ಸಾವಿರದಿಂದ ಮೂರುವರೆ ಸಾವಿರ ಎಲೆ, 130-160 ಕೆ.ಜಿ. ಗೊನೆಯ ಒಣ ತ್ಯಾಜ್ಯ ಲಭ್ಯವಾಗುತ್ತದೆ ಎಂದರು.

ಈ ತ್ಯಾಜ್ಯವನ್ನು ನಿರ್ವಹಿಸುವುದೇ ಹಲವು ರೈತರಿಗೆ ಸವಾಲಾಗುತ್ತದೆ. ಆದರೆ, ಈ ಎಲ್ಲ ತ್ಯಾಜ್ಯವನ್ನು ಕಾಂಪೋಸ್ಟ್ ವಿಧಾನದ ಮೂಲಕ ಗೊಬ್ಬರವನ್ನಾಗಿ ಮಾಡಿಕೊಂಡರೆ ತಮ್ಮದೇ ತೋಟಕ್ಕೆ ಕಡಿಮೆ ಖರ್ಚಿನಲ್ಲಿ ಗೊಬ್ಬರ ತಯಾರಿಸಿಕೊಳ್ಳಬಹುದು. ಇದರಿಂದ ಅಡಿಕೆ ಸಿಪ್ಪೆಯನ್ನು ರಸ್ತೆ ಬದಿಯಲ್ಲಿ ಎಸೆದು ಒಣಗಿದ ನಂತರ ಬೆಂಕಿ ಕೊಡುವ ಸಮಸ್ಯೆ ತಪ್ಪಿದಂತಾಗುತ್ತದೆ. ವ್ಯವಹಾರಿಕವಾಗಿಯೂ



ಅಡಿಕೆ ಬೆಳೆಯ ಒಣ ತ್ಯಾಜ್ಯವನ್ನು ಸಂಗ್ರಹಿಸಿ ಕಾಂಪೋಸ್ಟ್ ಗೊಬ್ಬರ ತಯಾರಿಸಿ ಮಾರಾಟ ಮಾಡಬಹುದು ಎಂದರು.

ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥ ಎ.ಟಿ.ಕೃಷ್ಣಮೂರ್ತಿ ಮಾತನಾಡಿ, ಅಡಿಕೆ ಸಿಪ್ಪೆ ಭೂಮಿಯಲ್ಲಿ ಕರಗಲು ಕನಿಷ್ಠ ಒಂದು ವರ್ಷವಾದರೂ ಬೇಕು. ಆದರೆ, ಆರು ತಿಂಗಳಲ್ಲಿ ಕಾಂಪೋಸ್ಟ್ ಗೊಬ್ಬರ ತಯಾರಿಸಲು ಸಾಧ್ಯ ಎಂದರು.

ಕಾರ್ಯಾಗಾರದಲ್ಲಿ ಅಡಿಕೆ ತ್ಯಾಜ್ಯವನ್ನು ಬಳಸಿ ಕಾಂಪೋಸ್ಟ್ ಗೊಬ್ಬರ ತಯಾರಿಕೆಯ ವಿಧಾನವನ್ನು ರೈತರಿಗೆ ಪರಿಚಯಿಸಲಾಯಿತು. ಪ್ರಗತಿಪರ ರೈತ ದಿವಾಕರ್, ಮನು ಇದ್ದರು.

# ದೈನಂದಿನ ಒತ್ತಡ ಕಳೆಯಲು ಕ್ರೀಡೆಗಳು ಸಹಕಾರಿ: ಸುಧೀರ್‌ಶೇಟ್

**ಚಿಕ್ಕಮಗಳೂರು, :** ದೈನಂದಿನ ಒತ್ತಡದ ನಡುವೆ ಸುವರ್ಣ ಕೆಲಸಗಾರರು ಕೆಲ ಸಮ ಯ ಬಿಡುವು ಮಾಡಿಕೊಂಡು ಕ್ರೀಡಾಸಕ್ತಿ ಬೆಳೆಸಿಕೊಂಡರೆ ಮಾನಸಿಕ ಹಾಗೂ ದೈಹಿಕವಾಗಿ ಸದೃಢರಾಗಲು ಸಾಧ್ಯ ಎಂದು ಸುವರ್ಣಗಾರರ ಕ್ಷೇಮಾಭಿವೃದ್ಧಿ ಸಂಘದ ಅಧ್ಯಕ್ಷ ಸುಧೀರ್‌ಶೇಟ್ ಹೇಳಿದರು. ನಗರದ ಮೌಂಟೆನ್ ವ್ಯೂ ಶಾಲಾವರಣದಲ್ಲಿ ಸುವರ್ಣಗಾರರ ಕ್ಷೇಮಾಭಿವೃದ್ದಿ ಸಂಘ ಹಾಗೂ ಚಿಕ್ಕಮ ಗಳೂರು ಚಿನ್ನಬೆಳ್ಳಿ ಕೆಲಸಗಾರರ ಸಹಯೋಗದಲ್ಲಿ ಏರ್ಪಡಿಸಿದ್ಧ 12ನೇ ವರ್ಷದ ಕ್ರಿಕೇಟ್ ಪಂದ್ಯಾವಳಿಯಲ್ಲಿ ವಿಜೇತರಾದ ತಂಡಕ್ಕೆ ಭಾನುವಾರ ಸಂಜೆ ಬಹುಮಾನ ವಿತರಿಸಿ ಅವರು ಮಾತನಾಡಿದರು. ಚಿನ್ನಬೆಳ್ಳಿ ಕೆಲಸಗಾರರು ದರದ ಏರಿಳಿತದಿಂದ ಅನೇಕ ಒತ್ತಡಕ್ಕೆ ಒಳಗಾಗುತ್ತಿದೆ. ಈ ನಡುವೆ ಕೆಲಸಗಾ ರರು ಮಾನಸಿಕ ನೆಮ್ಮದಿ, ಶಾಂತಿ ಹದಗೆಡುವುದನ್ನು ತಪ್ಪಿಸಲು ಪಂದ್ಯಾವಳಿ ಆಯೋಜಿಸುವ ಮೂಲಕ ಮನಸ್ಸನ್ನು ಹದಗೊಳಿಸುವ ಕಾಯಕಕ್ಕೆ ಸಂಘವು ಮುಂದಾಗುತ್ತಿದೆ ಎಂದರು.

ಮಾನವ ಜನಾಂಗಕ್ಕೆ ದೈಹಿಕ ವ್ಯಾಯಮವು ಕಡ್ಡಾಯವಾಗಬೇಕು. ಆಲಸ್ಯ ಅಥವಾ ಸೋಬೇರಿತನದಿ ಂದ ನಿರ್ಲಕ್ಷ್ಯ ವಹಿಸಿದರೆ ಆರೋಗ್ಯ ಕ್ಷಣಾರ್ಧದಲ್ಲಿ ಹದಗೆಡುವಲ್ಲಿ ಸಂಶಯವಿಲ್ಲ. ಹೀಗಾಗಿ ಸುವರ್ಣಗಾರ ರು ಪ್ರತಿದಿನವು ಕೆಲ ಸಮಯವನ್ನು ದೈಹಿಕವಾಗಿ ದಂಡಿಸಲು ಮುಡಿಪಿಟ್ಟರೆ, ಶಾರೀರಿಕವಾಗಿ ಗಟ್ಟಿಯಾಗಲು ಸಾಧ್ಯ ಎಂದರು.

बी ई एम एल BEML LIMITED
(A Govt. of India Undertaking)
(Schedule 'A' Company under the Ministry of Defence)

Walk – in Interview
(ON 15th Feb, 2025)

RECRUITMENT OF JUNIOR EXECUTIVES ON FIXED TENURE BASIS

Bachelor in Engineering: Mechanical / Automobile / Production / Electrical and Electronics / Civil

BEML Limited, India's leading multi-technology company under the Ministry of Defence is looking for bright & young professionals as Junior Executives (on Fixed Tenure Basis (on Contract)) for its manufacturing facility at Palakkad Complex. The incumbent must have the passion for constant learning and must demonstrate drive for problem solving, excellence & time-bound execution of work.

Please visit BEML Career page (www.bemlindia.in/careers) for details.

Date: 05.02.2025 (Advt. No. KP/S/04/2025)



# ಗಂಡು ಮಗುವಿನ ಪೋಷಕರ ಪತ್ತೆಗಾಗಿ ಮನವಿ

**ಶಿವಮೊಗ್ಗ:** ಇಲ್ಲಿನ ಶ್ರೀರಾಂಪುರ ನಗರ ಮೊದಲ ತಿರುವಿನ ರಸ್ತೆಯ ಪಕ್ಕದಲ್ಲಿ ಕೈಚೀಲದಲ್ಲಿ ಇತ್ತೀಚೆಗೆ ಸುಮಾರು 1 ದಿನದ ಗಂಡು ಮಗು ಪತ್ತೆಯಾಗಿದ್ದು ಸಾರ್ವಜನಿಕರು ರಕ್ಷಣೆ ಮಾಡಿ ಜಿಲ್ಲಾ ಮೆಗ್ಗಾನ್ ಆಸ್ಪತ್ರೆಗೆ ದಾಖಲಿಸಿ, ಡಿಸಿ ಪಿಯು ಘಟಕ ಮತ್ತು ಮಕ್ಕಳ ಸಹಾಯವಾಣಿ ಅಧಿಕಾರಿಗಳು, ಮಕ್ಕಳ ಕಲ್ಯಾಣ ಸಮಿತಿ ಶಿವಮೊಗ್ಗ ಇಲ್ಲಿಗೆ ದಾಖಲಿಸಿದ್ದರು. ಮಗುವಿನ ಮುಂದಿನ ಪುನರ್ವಸತಿ ಹಿತದೃಷ್ಠಿಯಿಂದ ಮಗುವಿನ ಸಂಬಂಧಿ ಕರು ಯಾರಾದರೂ ಇದ್ದಲ್ಲಿ ಅಥವಾ ಪೋಷಕರ ಬಗ್ಗೆ ಮಾಹಿತಿ ದೊರೆತಲ್ಲಿ ಸೂಕ್ತ ದಾಖಲಾತಿಯೊಂದಿಗೆ ಅಧೀಕ್ಷಕರು, ಸರ್ಕಾರಿ ಬಾಲಕರ ಬಾಲಮಂದಿರ, ಆಲ್ಕೊಳ, ಶಿವಮೊಗ್ಗ ಇವರ ಕಛೇರಿಗೆ ಖುದ್ದಾಗಿ ಅಥವಾ ದೂರವಾಣಿ ಸಂಖ್ಯೆ 08182-295511 ಗೆ ಸಂಪರ್ಕಿಸುವಂತೆ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಪ್ರಕ ಟಣೆಯಲ್ಲಿ ತಿಳಿಸಿದ್ದಾರೆ.

# ಸೂರ್ಯ ನಮಸ್ಕಾರದಿಂದ ಆರೋಗ್ಯ ವೃದ್ಧಿ

**ಶಿವಮೊಗ್ಗ:** ಸೂರ್ಯ ನಮಸ್ಕಾರಗಳ ನಿತ್ಯ ಅಭ್ಯಾಸದಿಂದ ಆಯುಷ್ಯ ಮತ್ತು ಆರೋಗ್ಯ ವೃದ್ದಿಯಾಗುವುದು ಎಂದು ಶಾಸಕ ಎಸ್.ಎನ್.ಚನ್ನಬಸಪ್ಪ ಹೇಳಿ ದರು. ಮಂಗಳವಾರ ಸೂರ್ಯ ಜಯಂತಿ" ಅಂಗವಾಗಿ ಕಣಾದ ಯೋಗ & ರಿಸರ್ಚ್ ಫೌಂಡೇ ಷನ್ (ರಿ) ಮತ್ತು ಯುವ ಸಬಲೀಕರಣ & ಕ್ರೀಡಾ ಇಲಾಖೆಯ ಸಹಯೋಗದಲ್ಲಿ ನೆಹರು ಕ್ರೀಡಾಂಗಣದ ಸಭಾಂಗಣದಲ್ಲಿ ಮಾತನಾಡಿದರು.ವಿಶೇಷವಾಗಿ ಮಕ್ಕಳಿಗೆ ಸ್ಮರಣ ಶಕ್ತಿ, ಏಕಾಗ್ರತೆ ಹೆಚ್ಚಿಸಲು ಸಹಾಯಕವಾಗುತ್ತದೆ, ಆದ್ದ ರಿಂದ ಆರೋಗ್ಯಕ್ಕಾಗಿ ಕನಿಷ್ಠ ಸೂರ್ಯನಮಸ್ಕಾರ ಮಾಡುವ ಹವ್ಯಾಸ ಬೆಳೆಸಿಕೊಳ್ಳಿ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.ಯೋಗಾಚಾರ್ಯ ಅನಿಲ್‌ಕುಮಾರ್. ಹೆಚ್.ಶೆಟ್ಟರ್‌ರವರ ಮಾರ್ಗದರ್ಶನದಲ್ಲಿ ಜರುಗಿತು. ಸೂರ್ಯ ಮಂಡಲ ಪೂಜೆಯ ನಂತರದಲ್ಲಿ ಕ್ರೀಡಾಪಟು ಗಳು ಮತ್ತು ನಿತ್ಯಯೋಗಾಭ್ಯಾಸಿಗಳು ಮತ್ತು ಸಾರ್ವಜನಿಕರು ಸಾಮೂಹಿಕವಾಗಿ ಬೀಜಾಕ್ಷರ ಮಂತ್ರಗಳ ಸಹಿತವಾದ ಸೂರ್ಯ ಶತನಾಮಾವಳಿಯ ಪಠಣದೊಂ ದಿಗೆ 60 ನಿಮಿಷಗಳಲ್ಲಿ 108 ಸೂರ್ಯ ನಮಸ್ಕಾರಗಳನ್ನು ಮಾಡಿದರು. ಕಣಾದ ಯೋಗ ಕೇಂದ್ರದ ಬೆಲಗೂರು ಮಂಜುನಾಥ್ ಅವರು ಅತ್ಯಂತ ಕಿರಿಯ ವಯಸ್ಸಿನ ಅಪ್ರಮೇಯನಿಗೆ ನಗದು ಬಹುಮಾನವನ್ನು ನೀಡಿದರು.

# ಮನೆ, ಸುತ್ತಮುತ್ತಲು ಸ್ವಚ್ಚತೆ ಕಾಪಾಡುವುದು ಕರ್ತವ್ಯ: ಅರುಣ್

**ಚಿಕ್ಕಮಗಳೂರು :** ಮನೆ ಹಾಗೂ ಸುತ್ತಮುತ್ತಲು ಸ್ವಚ್ಚತೆ ಕಾಪಾಡುವ ಮೂಲಕ ರೋಗ ರುಜಿನ ದೂರವಿರಿಸಬೇಕು. ಆರೋಗ್ಯಪೂರ್ಣ ಸಮಾಜ ನಿರ್ಮಿಸುವಲ್ಲಿ ಪ್ರತಿಯೊಬ್ಬರು ಕೈಜೋಡಿಸಬೇಕು ಎಂದು ನಗರಸಭಾ ಸದಸ್ಯ ಅರುಣ್‌ಕುಮಾರ್ ಹೇಳಿದರು.

ಕಲ್ಯಾಣನಗರದಲ್ಲಿ ನಗರ ವೆಲ್ಫೇರ್ ಟ್ರಸ್ಟ್ ವತಿಯಿಂದ ಏರ್ಪಡಿಸಿದ್ಧ ಬೀದಿಬದಿ ಸ್ವಚ್ಚತಾ ಕಾರ್ಯ ಕ್ರಮದಲ್ಲಿ ಇತ್ತೀಚೆಗೆ ಭಾಗಿಯಾಗಿ ಅವರು ಮಾತನಾಡಿದರು.

ಮನುಷ್ಯ ಶಾರೀರಿಕವಾಗಿ ಶುದ್ಧವಾಗುವ ಜೊತೆಗೆ ಮನೆಯಂಗಳ ಹಾಗೂ ಸುತ್ತಮುತ್ತಲು ಸ್ವಚ್ಚತೆ ಕಾ ಪಾಡುವುದನ್ನು ಕರ್ತವ್ಯವೆಂದು ಭಾವಿಸಬೇಕು. ಅಕ್ಕಪಕ್ಕದ ಅಥವಾ ವಾರ್ಡಿನ ನಿವಾಸಿಗಳು ಎಲ್ಲೆಂದರಲ್ಲಿ ಕಸ ಬೀಸಾಡುವುದನ್ನು ಕಂಡಲ್ಲಿ ತಿಳಿಹೇಳಿ, ಕಸದ ಗಾಡಿಗಳಿಗೆ ಹಾಕುವಂತೆ ಸೂಚಿಸಬೇಕು ಎಂದರು.




ಇತ್ತೀಚಿನ ದಿನಗಳಲ್ಲಿ ಸೋಂಕಿನಿಂದ ಮನುಷ್ಯನಿಗೆ ವಿವಿಧ ರೀತಿ ರೋಗಗಳು ಉಲ್ಬಣಿಸುತ್ತಿವೆ. ಅಲ್ಲದೇ ಕೆಲವರು ಬೀದಿ ಬದಿಗಳಲ್ಲಿ ಹಸಿಕಸ ಎಲ್ಲೆಂದರಲ್ಲೇ ಬೀಸಾಡುತ್ತಿದ್ದಾರೆ. ಆದರೆ ಕಾಲಕ್ರಮೇಣ ಕೊಳೆತು ನಾರಿ ಮಕ್ಕಳು, ವೃದ್ದರು ಅನಾರೋಗ್ಯಕ್ಕೆ ತುತ್ತಾಗುವ ಸಂಭವವಿರುವ ಕಾರಣ ನಿವಾಸಿಗಳು ಎಚ್ಚೆತ್ತುಕೊಂಡು ಗಾಡಿ ಗಳಿಗೆ ಕಸವನ್ನು ಹಾಕಬೇಕು ಎಂದರು.

ನಗರ ವೆಲ್ಫೇರ್ ಟ್ರಸ್ಟ್ ಗೌರವಾಧ್ಯಕ್ಷ ಕಿಶೋರ್‌ಕುಮಾರ್ ಹೆಗ್ಡೆ ಮಾತನಾಡಿ ಮಾನವ ಮೊದಲು ಸ್ವಚ್ಚ ತೆಗೆ ಆದ್ಯತೆ ಕೊಡಬೇಕು. ಕೇವಲ ಸುತ್ತಮುತ್ತ ಸ್ವಚ್ಚಂಧಗೊಂಡರೆ ಸಾಲದು. ಸಾಮಾಜಿಕ ಕಾರ್ಯದ ಮೂ ಲಕ ಸಮಾಜಕ್ಕೆ ಮಾದರಿಯಾಗಿ ಬದುಕಿದರೆ ಮಾನವನಾಗಿ ಜನಿಸಿದ್ದಕ್ಕೂ ಸಾರ್ಥಕವಾದಂತೆ ಎಂದು ಹೇಳಿ ದರು.

ಪ್ರಸ್ತುತ ಚಿಕ್ಕಮಗಳೂರು ಜಿಲ್ಲೆ ಸ್ವಚ್ಚಂತೆ ವಿಷಯದಲ್ಲಿ ಹೆಚ್ಚು ಕಾರ್ಯನಿರ್ವಹಿಸಿದ ಪರಿಣಾಮ ರಾಜ್ಯ ಮಟ್ಟದಲ್ಲಿ ಉನ್ನತ ಸ್ಥಾನ ಗಳಿಸಿದೆ. ಇದರಿಂದ ವಾರಗಟ್ಟಲೇ ಪ್ರವಾಸಿಗರು ಕ್ಲೀನ್‌ಸಿಟಿ ಸೌಂದರ್ಯವನ್ನು ಸವಿದು ಆನಂದಿಸುತ್ತಿದ್ದಾರೆ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಟ್ರಸ್ಟಿನ ಅಧ್ಯಕ್ಷ ಹರೀಶ್, ಸದಸ್ಯರು ಗಳಾದ ನಿಂಗರಾಜ್, ಮಹಾಬಲ, ವಾರ್ಡಿನ ನಿವಾಸಿಗಳು ಹಾಜರಿದ್ದರು.

# ಜಿಎಸ್‌ಟಿ ಸಂಗ್ರಹ: ವಿತರಕರ ಪಾತ್ರ ಮಹತ್ವದ್ದು




**ಶಿವಮೊಗ್ಗ:** ದೇಶದಲ್ಲಿ ಕರ್ನಾಟಕವನ್ನು ಜಿಎಸ್‌ಟಿ ತೆರಿಗೆ ಸಂಗ್ರಹದಲ್ಲಿ ಎರಡನೇ ಸ್ಥಾನದಲ್ಲಿ ನಿಲ್ಲಿಸುವಲ್ಲಿ ವಿತರಕರ ಪಾತ್ರ ಮಹತ್ವದ ಆಗಿದೆ ಎಂದು ವಿಧಾನ ಪರಿಷತ್ ಸದಸ್ಯ ಡಿ.ಎಸ್. ಅರುಣ್ ಹೇಳಿದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಸಭಾಂಗಣದಲ್ಲಿ ಆಯೋಜಿಸಿದ್ದ ವಿತರಕರ ದಿನಾಚರಣೆ ಉದ್ಘಾಟನೆ ಮಾತನಾಡಿ, ಕರ್ನಾಟಕದ ಆರ್ಥಿಕ ಪ್ರಗತಿ ಯಲ್ಲಿ ವಿತರಕರ ಕೊಡುಗೆ ಮಹತ್ವದ್ದು ಎಂದು ತಿಳಿಸಿದರು.

ಕರ್ನಾಟಕದಲ್ಲಿ ಚಿಲ್ಲರೆ ಮಾರುಕಟ್ಟೆಯನ್ನು ಬೆಳೆಸುವ ಬಗ್ಗೆ ವಿತರಕರಿಗೆ ಮಾಹಿತಿ ಗಳನ್ನು ನೀಡುತ್ತ ದೇಶದ ಆರ್ಥಿಕತೆಗೆ ವಿತರಕರ ಉದ್ಯಮ ಅತಿ ಹೆಚ್ಚಿನ ಕೊಡುಗೆ ನೀಡುತ್ತಿದೆ ಎಂದರು.

ಕರ್ನಾಟಕ ಗ್ರಾಹಕ ವಸ್ತುಗಳ ವಿತರಕರ ಸಂಘಗಳ ಒಕ್ಕೂಟ ಅಧ್ಯಕ್ಷ ಗಿರೀಶ್ ಶಂಕರ್ ಸುಂಕದ ಮಾತನಾಡಿ, ಕಂಪನಿಗಳ ಹಾಗೂ ಸರ್ಕಾರದ ಕೆಲ ನೀತಿಗ ಳಿಂದ ವಿತರಕರ ಅಸ್ತಿತ್ವಕ್ಕೆ ಧಕ್ಕೆ ಬಂದಿರುತ್ತದೆ. ಇಂತಹ ಸಂದರ್ಭದಲ್ಲಿ ನಾವುಗ ಳೆಲ್ಲರೂ ಒಗ್ಗಟ್ಟಾಗಿ ನಮ್ಮ ಮುಂದಿರುವ ಸವಾಲುಗಳನ್ನ ಎದುರಿಸಬೇಕು ಎಂದರು.ಕರ್ನಾಟಕ ಫೆಡರೇಶನ್ ಆಫ್ ಡಿಸ್ಟ್ರಿಬ್ಯೂಟರ್ಸ್ ವೆಲ್‌ಫೇರ್ ಅಸೋಸಿಯೇ ಷನ್ ಅಧ್ಯಕ್ಷ ಜಯಂತ್ ಗಾಣಿಗ್ ಮಾತನಾಡಿ, ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ವಿತರಕರ ಮಂಡಳಿ ರಚಿಸುವಂತೆ ಈಗಾಗಲೇ ಪ್ರಸ್ತಾವನೆ ಸಲ್ಲಿಸಿದ್ದೇವೆ. ಮುಂದಿನ ದಿನಗಳಲ್ಲಿ ಸರ್ಕಾರದಿಂದ ಹೆಚ್ಚಿನ ಮಟ್ಟದ ಭದ್ರತೆಯನ್ನು ವಿತರಿಕ ರಿಗೆ ನೀಡುವ ಭರವಸೆ ನೀಡಿದರು.

ಜಿಲ್ಲಾ ವಾಣಿಜ್ಯ ಮತ್ತು ಕೈಗಾರಿಕಾ ಸಂಘದ ಅಧ್ಯಕ್ಷ ಬಿ. ಗೋಪಿನಾಥ್ ಮಾತ ನಾಡಿ, ಕಂಪನಿ ಹಾಗೂ ವರ್ತಕರಿಗೆ ಕೊಂಡಿಯಾಗಿ ಕಾರ್ಯ ನಿರ್ವಹಿಸು ತ್ತಿರುವ ವಿತರಕರಿಗೆ ಆಧುನಿಕ ಮಾರುಕಟ್ಟೆಯ ವ್ಯವಸ್ಥೆಗೆ ನಾವು ನಮ್ಮ ಕಾರ್ಯಕ್ಷಮತೆ ಹೆಚ್ಚಿಸಿಕೊಳ್ಳಬೇಕಾಗಿದೆ. ತಾಂತ್ರಿಕತೆಯನ್ನು ನಾವು ಉಪ ಯೋಗಿಸಿ ನಮ್ಮ ಆರ್ಡರ್ ಬುಕಿಂಗ್ ಹಾಗೂ ಸಪ್ಲೈ ಕೆಲಸಗಳಿಗೆ ಆಧುನಿಕತೆ ಸ್ಪರ್ಶ ನೀಡಿದಲ್ಲಿ ನಮ್ಮ ಹಲವಾರು ಸಮಸ್ಯೆಗಳನ್ನ ನಾವು ನೀಗಿಸಿಕೊಳ್ಳಬಹುದು. ಈ ನಿಟ್ಟಿನಲ್ಲಿ ನಮ್ಮ ವಿತರಕರು ಗಮನಹರಿಸಬೇಕು ಎಂದರು.

ಶಿವಮೊಗ್ಗ ಜಿಲ್ಲಾ ವಿತರಕ ಸಂಘದ ಅಧ್ಯಕ್ಷ ದೇವರಾಜ್ ಎಂಸಿ ಮಾತನಾಡಿ ದರು. ವಿತರಕರ ದಿನಾಚರಣೆ ಅಂಗವಾಗಿ 29 ಜನ ಸಂಸ್ಥಾಪಕ ಸದಸ್ಯರುಗಳಿಗೆ ಸನ್ಮಾನಿಸಲಾಯಿತು. 27 ಕಂಪನಿಗಳಿಂದ ಫ್ರೀ ಸ್ಯಾಂಪಲ್ ಪಡೆದು 125 ಕಿಟ್ ಗಳನ್ನು ತಯಾರಿಸಿ ಬಂದಂತಹ ಎಲ್ಲ ಸದಸ್ಯರುಗಳಿಗೆ ವಿತರಿಸಲಾಯಿತು. ಭದ್ರಾವತಿ, ಶಿಕಾರಿಪುರ, ಸಾಗರ, ಗದಗ ಹಾಗೂ ಕೊಪ್ಪದಿಂದ ಆಗಮಿಸಿದ ಪದಾಧಿಕಾರಿಗಳಿಗೂ ಗೌರವಿಸಿ ಸನ್ಮಾನಿಸಲಾಯಿತು.

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**